


ಬೆಂಗಳೂರಿನ ಬೆಡಗಿ ಶ್ರೀಲೀಲಾಗೆ ತೆಲುಗಿನಲ್ಲಿ ಭಾರೀ ಬೇಡಿಕೆ. ಅದರಲ್ಲೂ ಅಲ್ಲು ಅರ್ಜುನ್ ಜೊತೆ ಶ್ರೀಲೀಲಾ ಸೊಂಟ ಬಳುಕಿಸಿದ ಮೇಲಂತೂ ಯುವಕರು ಆ ಹಾಡಿಗೆ ಕಾತುರದಿಂದ ಕಾಯುತ್ತಿದ್ದರು. ಅದಕ್ಕೆ ಟಾನಿಕ್ ಕೊಟ್ಟಂತೆ ಆಗಿದೆ. ಹೀಗಿರುವಾಗ ಈ ಸಿನಿಮಾದ 'ಕಿಸ್ಸಿಕ್' ಫುಲ್ ಸಾಂಗ್ ಅನ್ನು ಚಿತ್ರತಂಡ ಬಿಡುಗಡೆ ಮಾಡಿದೆ.


2 100ನೇ ತಾನ್ಸೇನ್ ಸಂಗೀತ ಸಮರೋಹ ಗಿನ್ನಿಸ್ ವಿಶ್ವ ದಾಖಲೆ

3 ತ್ರಿವಿಧ ದಾಸೋಹದ ಮಠಗಳ ಪರಂಪರೆ ಉಳಿಸಿ ಬೆಳೆಸಲು ಕರೆ

6 ಸಿ.ಟಿ.ರವಿಯವರನ್ನು ಹತ್ತಿಕ್ಕಲು ಸುಳ್ಳು ಆರೋಪ: ಬಿಜೆಪಿ



ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

VOLUME: 14 22 DECEMBER 2024 ಭಾನುವಾರ RS: 2 PAGE: 06 ISSUE: 230

CALL 9740160669

# ಭಾರತ ಸಾರಥಿ

BHARATHA SARATHI

KANNADA DAILY NEWS PAPER

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ

RNI KARKAN2011/44806





ಸಂಪಾದಕ
ಗಂಡಸಿ ಸದಾನಂದಸ್ವಾಮಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com


# ನನ್ನ ಹತ್ಯೆ ಮಾಡಲು ಗದ್ದೆ, ಕಲ್ಲಿನ ಕ್ವಾರಿಯಲ್ಲಿ ಸುತ್ತಾಡಿಸಿದ್ರು: ಸಿ.ಟಿ.ರವಿ




ಬೆಂಗಳೂರು: ಯಾರದ್ದೋ ಸೂಚನೆ ಮೇರೆಗೆ ನನ್ನ ಹತ್ಯೆ ಮಾಡಲು ಗದ್ದೆ, ಕಲ್ಲಿನ ಕ್ವಾರಿ, ಗಲ್ಲಿ ರಸ್ತೆಗಳಲ್ಲಿ ಪೊಲೀಸರು ಸುತ್ತಾಡಿಸಿದ್ದಾರೆ ಎಂದು ಸಿಟಿ ರವಿ ಗಂಭೀರ ಆರೋಪ ಮಾಡಿದ್ದಾರೆ.

ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬೆಳಗಾವಿಯ ಸುವರ್ಣ ಸೌಧದ ಒಳಗಡೆಯೇ ನಿನ್ನ ಹೆಣ ಕಳುಹಿಸುತ್ತೇವೆ ಎಂದು ಬೆದರಿಕೆ ಹಾಕಿದ್ದರು. ಅಷ್ಟೊಂದು ಭದ್ರತೆ ಇರುವ ಜಾಗದಲ್ಲಿ ನನ್ನ ಮೇಲೆ ಹಲ್ಲೆಗೆ ಯತ್ನ ನಡೆದಿತ್ತು. ಈ ಕಾರಣಕ್ಕೆ ಗುಂಪಿನಿನಿಂದ ಹತ್ಯೆ ಮಾಡಿಸಲೆಂದೇ ನನ್ನನ್ನು ಗಲ್ಲಿ, ಗದ್ದೆಯಲ್ಲಿ ಸುತ್ತಾಡಿಸಿದ್ದಾರೆ ಎಂದು ಸಿಟಿ ರವಿ ಶಾಕಿಂಗ್ ಹೇಳಿಕೆ ನೀಡಿದ್ದಾರೆ.

ಪರಿಷತ್‌ನಲ್ಲಿ ಅಂಬೇಡ್ಕರ್ ವಿಚಾರದ ಬಗ್ಗೆ ಚರ್ಚೆ ಜೋರಾದ ಕಾರಣ ಕಲಾಪ ಮುಂದೂಡಿಕೆ ಆಯ್ತು. ನಂತರ ನಾನು ಪಶ್ಚಿಮ ದ್ವಾರಕ್ಕೆ ಬಂದು ಕಾಂಗ್ರೆಸ್ ಯಾವ ರೀತಿ ಅಂಬೇಡ್ಕರ್‌ಗೆ ಅವಮಾನ ಮಾಡಿದೆ ಎಂದು ಹೇಳಿಕೆ ನೀಡಲು ಮುಂದಾಗಿದ್ದೆ. ಈ ವೇಳೆ ಮಾಧ್ಯಮಗಳು ನಿಮ್ಮ ಮೇಲೆ ಈ ರೀತಿಯ ಆರೋಪ ಬಂದಿದೆ ಎಂದು ಹೇಳಿದರು.

ನಾನು ಲಕ್ಷ್ಮಿ ಅವರು ಎದುರಿಗೆ ಸಿಕ್ಕಾಗ ಏನ್ ಲಕ್ಷ್ಮಕ್ಕ ಎಂದು ಮಾತನಾಡುತ್ತೇನೆ. ಅವರು ಏನಂದರು, ನಾನು ಏನಂದೆ ಎಂದು ಮಾತನಾಡುವುದಿಲ್ಲ. ಎಲ್ಲವೂ ಅಂತರಾತ್ಮ ಪರಮಾತ್ಮನಿಗೆ ಬಿಟ್ಟಿದ್ದು. ಮಧ್ಯಾಹ್ನ ಊಟ ಮುಗಿಸಿ ಬರುವಾದ ಪಶ್ಚಿಮ ದ್ವಾರದಲ್ಲಿ ನನ್ನ ಮೇಲೆ ದಾಳಿ ನಡೆಯಿತು. ಆಗ ಮಾರ್ಷಲ್ ಗಳು ಪೊಲೀಸರು ಅವರನ್ನು ದೂರ ತಳ್ಳಿ ನಮ್ಮನ್ನು ಒಳಗಡೆ ಕರೆದುಕೊಂಡು ಹೋದರು. ನಂತರ ನನ್ನ ಮೇಲೆ ಪುಂಖಾನುಪುಂಖವಾಗಿ ಮಾತನಾಡಿದ ವಿಚಾರ ಗೊತ್ತಾಯಿತು.

ಅಶೋಕ್ ಅವರನ್ನು ಭೇಟಿ ಮಾಡಿ ವಾಪಸ್ ಬರುವಾಗ ಮೂರ್ನಾಲ್ಕು ಜನ ಹಲ್ಲೆ ಮಾಡಲು ಬಂದರು. ನಿನ್ನ ಕೊಲೆ ಮಾಡುತ್ತೇವೆ, ನಿನ್ನ ಹೆಣ ಚಿಕ್ಕಮಗಳೂರಿಗೆ ಕಳುಹಿಸುತ್ತೇವೆ ಎಂದು ಕೂಗಾಡಿದರು. ಮಾರ್ಷಲ್ ಗಳು ಅವರನ್ನು ಗೇಟಿನ ಆಚೆ ಹಾಕಿದರು. ಆಗಲೂ ಗೇಟ್‌ಗೆ ಒದೆಯುತ್ತಿದ್ದರು. ನಾನು ಅಲ್ಲೇ ಧರಣಿ ಕೂತೆ, ನಂತರ ಸಭಾಪತಿ ಭೇಟಿಗೆ ಬುಲಾವ್ ಬಂತು ಹೋದೆ. ನಂತರ ಲಕ್ಷ್ಮಿ ಹೆಬ್ಬಾಳ್ಕರ್, ಚನ್ನರಾಜ್, ನಜೀರ್ ಅಹಮದ್ ಅವರೆಲ್ಲ ನನ್ನ ಏಕವಚನದಲ್ಲಿ ನಿಂದಿಸಿದರು. ಕತೆ ಮುಗಿಸುವುದಾಗಿ ಬೆದರಿಕೆ ಹಾಕಿದರು.

ನಂತರ ನಾನು ಸಭಾಪತಿ ಕೊಠಡಿಗೆ ಹೋಗಿ ಅಲ್ಲಿ ಏನಾಯ್ತು ಅಂತ ಹೇಳಿ ನಾವೆಲ್ಲರೂ ಲಿಖಿತ ದೂರು ನೀಡಿದೆವು. ಸಭಾಪತಿಯವರು ಎಡಿಜಿಪಿಯವರನ್ನು ಕರೆದು ಸಿಟಿ ರವಿ ಅವರನ್ನು ಯಾವುದೇ ತೊಂದರೆ ಆಗದೇ ಮನೆಗೆ ತಲುಪಿಸಬೇಕು ಮತ್ತು ಹಲ್ಲೆಗೆ ಮುಂದಾಗಿದ್ದವರ ವಿರುದ್ಧವೂ ಕ್ರಮ ಕೈಗೊಳ್ಳಲು ಸೂಚನೆ ನೀಡಿದರು. ಇದಕ್ಕೆ ಎಡಿಜಿಪಿ ಕೆಲವರನ್ನು ವಶಕ್ಕೆ ಪಡೆದಿದ್ದೇವೆ ಅವರ ಮೇಲೆ ಕ್ರಮ ಆಗುತ್ತದೆ ಎಂದರು.

ಸಂಜೆ 6:20ಕ್ಕೆ ನಾವು ಧರಣಿಗೆ ಕುಳಿತೆವು. ಈ ವೇಳೆ ಉಳಿದರನ್ನು ಚದುರಿಸಿ ನನ್ನನ್ನು ಪ್ರತ್ಯೇಕವಾಗಿ ಎತ್ತಿಕೊಂಡು ಹೋದರು. ಹಿರೇಬಾಗೇವಾಡಿಗೆ ಮೊದಲು ಕರೆದುಕೊಂಡು ಹೋದರು. ನಂತರ ನನ್ನ ಖಾನಾಪುರಕ್ಕೆ ಕರೆದುಕೊಂಡು ಹೋದರು.

ಯಾಕೆ ನನ್ನನ್ನು ಕರೆದುಕೊಂಡು ಬಂದಿದ್ದೀರಿ ಎಂದು ಪ್ರಶ್ನಿಸದರೆ ಅವರು ಉತ್ತರ ನೀಡುತ್ತಿರಲಿಲ್ಲ. ಎಫ್‌ಐಆರ್ ಕಾಪಿ ಕೊಡಿ ಎಂದರೂ ಕೊಡುತ್ತಿರಲಿಲ್ಲ. ಒಬ್ಬೊಬ್ಬರೆ ಹೋಗಿ ಪೊಲೀಸರು ಯಾರ ಜೊತೆಗೂ ಮಾತನಾಡುತ್ತಿದ್ದರು. ವಕೀಲರನ್ನು ಒಳಗಡೆ ಬಿಡಲಿಲ್ಲ. ನಂತರ ಅಶೋಕ್ ಅವರು ಬಂದರು ಆಗ ವಕೀಲರನ್ನು ಒಳಗಡೆ ಬಿಟ್ಟರು. ಸ್ವಲ್ಪ ಹೊತ್ತಾದ ಬಳಿಕ ಅಶೋಕ್ ಅವರನ್ನು ಹೊರಗೆ ಕಳಿಸಿ ಮತ್ತೆ ನನ್ನನ್ನು ಏಕಾಂಗಿಯಾಗಿ ಮಾಡಿದರು. ಆಗ ನಾನು ಮತ್ತೆ ಧರಣಿ ಕುಳಿತೆ.

ಈ ಸಂದದರ್ಭದಲ್ಲಿ ನನ್ನ ಬೇರೆ ಕಡೆ ಕರೆದುಕೊಂಡು ಹೋಗುವುದಾಗಿ ಹೇಳಿದರು. ನಾನು ಬರಲಿಲ್ಲ, ಆಗ ನನ್ನ ಎತ್ತಿಕೊಂಡು ಪೊಲೀಸ್ ವಾಹನಕ್ಕೆ ಹಾಕಿದರು.

## ಮಾಜಿ ಸಚಿವರ ಆಪ್ತೆ ಎಂದು ಹೇಳಿಕೊಂಡು ವಂಚನೆ


ಬೆಂಗಳೂರು: ಮಾಜಿ ಸಚಿವ ವರ್ತೂರು ಪ್ರಕಾಶ್ ಅವರ ಆಪ್ತೆ ಎಂದು ಪರಿಚಯಿಸಿಕೊಂಡು, ಚಿನ್ನ ಖರೀದಿ ನೆಪದಲ್ಲಿ ಜ್ಯುವೆಲ್ಲರಿ ಶಾಪ್ ಮಾಲೀಕರಿಗೆ ವಂಚಿಸಿದ ಆರೋಪದಡಿ ಮಹಿಳೆಯೊಬ್ಬರನ್ನು ಬೆಂಗಳೂರಿನ ಪುಲಿಕೇಶಿ ನಗರ ಉಪವಿಭಾಗದ ಪೊಲೀಸರು ಬಂಧಿಸಿದ್ದಾರೆ.

ಬಾಗಲಗುಂಟೆ ನಿವಾಸಿ ಶ್ವೇತಾ ಗೌಡ ಬಂಧಿತ ಆರೋಪಿ. ಕಮರ್ಷಿಯಲ್ ಸ್ಟ್ರೀಟ್‌ನ ನವರತ್ನ ಜ್ಯುವೆಲ್ಲರ್ಸ್ ಮಾಲೀಕ ಸಂಜಯ್ ಭಾಫ್ನಾ ಅವರಿಂದ ಸುಮಾರು 2.945 ಕೆ.ಜಿ ಚಿನ್ನ ಪಡೆದು ವಂಚಿಸಿದ ಆರೋಪದಡಿ ಆರೋಪಿಯನ್ನು ಬಂಧಿಸಲಾಗಿದೆ.

ನವರತ್ನ ಜ್ಯುವೆಲ್ಲರ್ಸ್ ಮಾಲೀಕ ಸಂಜಯ್ ಭಾಫ್ನಾ ಅವರ ಮಳಿಗೆಗೆ ಬರುತ್ತಿದ್ದ ಆರೋಪಿ, ಮಾಜಿ ಸಚಿವರ ಆಪ್ತೆ ಎಂದು ಪರಿಚಯಿಸಿಕೊಂಡಿದ್ದರು. ತಾನು 'ಚಿನ್ನಾಭರಣ ವ್ಯಾಪಾರ ಆರಂಭಿಸುತ್ತಿದ್ದು, ನಿಮ್ಮಿಂದಲೇ ಆಭರಣ ಖರೀದಿಸುತ್ತೇನೆ' ಎಂದಿದ್ದರು. ಸಂಜಯ್ ಸಹ ಇದಕ್ಕೆ ಒಪ್ಪಿದ್ದರು. ಆರೋಪಿ ಎರಡ್ಮೂರು ಬಾರಿ ಚಿನ್ನಾಭರಣಗಳನ್ನು ಮನೆಯವರಿಗೆ ತೋರಿಸಿಕೊಂಡು ಬರುವುದಾಗಿ ಅನುಮತಿ ಪಡೆದು ಕೊಂಡೊಯ್ದಿದ್ದರು.

ಆದರೆ ಆಗಸ್ಟ್ 26ರಿಂದ ಡಿ. 8ರವರೆಗಿನ ಅವಧಿಯಲ್ಲಿ ಆರೋಪಿ ಹೇಳಿದ್ದ ವಿಳಾಸಕ್ಕೆ ಜ್ಯುವೆಲ್ಲರಿ ಶಾಫ್ ಸಿಬ್ಬಂದಿ ಸುಮಾರು 2.42 ಕೋಟಿ ರೂ. ಮೌಲ್ಯದ 2.945 ಕೆಜಿ ಚಿನ್ನ ಹಾಗೂ ವಜ್ರಾಭರಣಗಳನ್ನು ತಲುಪಿಸಿದ್ದರು. ಆದರೆ ಆರೋಪಿ ಯಾವುದೇ ಚಿನ್ನಾಭರಣವನ್ನೂ ಹಿಂದಿರುಗಿಸಿರಲಿಲ್ಲ.

# ಭೀಕರ ಅಪಘಾತ: 6 ಸಾವು




ಬೆಂಗಳೂರು : ಸಾಮಾನ್ಯ ಕುಟುಂಬದ ಯುವಕ ಎಂಜಿನಿಯರಿಂಗ್ ಪದವಿ ಪಡೆದು ಬೆಂಗಳೂರಿಗೆ ಬಂದು ಹಂತ ಹಂತವಾಗಿ ಮೇಲಕ್ಕೇರಿದ್ದರು. ಅಷ್ಟೇ ಅಲ್ಲ, ಸ್ವಂತ ಕಂಪನಿಯನ್ನೂ ಕಟ್ಟಿ ನೂರಾರು ಜನಕ್ಕೆ ಉದ್ಯೋಗವನ್ನೂ ನೀಡಿ ಯಶಸ್ವಿಯಾಗಿದ್ದರು. ಹಳ್ಳಿಯಲ್ಲಿದ್ದ ಪೋಷಕರು, ಸಂಬಂಧಿಕರಿಗೆ ಆಸರೆ ಆಗಿದ್ದರು. ಆದರೆ ವಿಧಿಯಾಟಕ್ಕೆ ಉದ್ಯಮಿ ಮತ್ತು ಇಡೀ ಕುಟುಂಬವೇ ಬಲಿಯಾಗಿದೆ.

ನೆಲಮಂಗಲ ಬಳಿ ಸಂಭವಿಸಿದ ಭೀಕರ ಅಪಘಾತದಲ್ಲಿ ಬಲಿಯಾದ ಉದ್ಯಮಿ ಚಂದ್ರಮ್ ಇಗಪ್ಪಗೋಳ ಮತ್ತು ಇಡೀ ಕುಟುಂಬದ ಕರುಣಾಜನಕ ಕಥೆ ಇದು. ಚಂದ್ರಮ್ ಇಗಪ್ಪಗೋಳ ಮೂಲತಃ ಮಹಾರಾಷ್ಟ್ರದ ಸಾಂಗ್ಲಿ ಜಿಲ್ಲೆಯ ಜತ್ತ ತಾಲೂಕಿನ ಮೊರಬಗಿ ಗ್ರಾಮದವರು. ಸದ್ಯ ಬೆಂಗಳೂರಿನ ಹೆಚ್‌ಎಸ್‌ಆರ್ ಲೇಔಟ್‌ನಲ್ಲಿ ವಾಸವಾಗಿದ್ದರು. ಕ್ರಿಸ್ಮಸ್ ಹಬ್ಬದ ರಜೆ ಹಿನ್ನೆಲೆಯಲ್ಲಿ ಚಂದ್ರಮ್ ಇಗಪ್ಪಗೋಳ ಅವರು ಪತ್ನಿ, ಇಬ್ಬರು ಮಕ್ಕಳು ಸೇರಿ ಕುಟುಂಬದ ಆರು ಜನರು ಸ್ವಗ್ರಾಮಕ್ಕೆ ತಮ್ಮ ವೋಲ್ವೋ ಕಾರಿನಲ್ಲಿ ತೆರಳುವಾಗ ಯಮನಂತೆ ಕಂಟೇನರ್ ಬಂದಿದೆ.

**ಕ್ರಿಸ್ಮಸ್ ಹಬ್ಬದ ರಜೆ ಹಿನ್ನೆಲೆಯಲ್ಲಿ ಚಂದ್ರಮ್ ಇಗಪ್ಪಗೋಳ ಅವರು ಪತ್ನಿ, ಇಬ್ಬರು ಮಕ್ಕಳು ಸೇರಿ ಕುಟುಂಬದ ಆರು ಜನರು ಸ್ವಗ್ರಾಮಕ್ಕೆ ತಮ್ಮ ವೋಲ್ವೋ ಕಾರಿನಲ್ಲಿ ತೆರಳುವಾಗ ಯಮನಂತೆ ಕಂಟೇನರ್ ಎದುರಾಗಿದೆ. ಕಾರಲ್ಲಿದ್ದ ಚಂದ್ರಮ್ , ಅವರ ಪತ್ನಿ ಮತ್ತು ಇಬ್ಬರು ಮಕ್ಕಳು ಹಾಗೂ ಸಹೋದರನ ಪತ್ನಿ, ಅವರ ಮಗ ಸೇರಿ ಆರು ಜನ ಸಾವನ್ನಪ್ಪಿದ್ದಾರೆ.**

## ನೂರಾರು ಜನರಿಗೆ ಉದ್ಯೋಗದಾತ

ಚಂದ್ರಮ್ ಇಗಪ್ಪಗೋಳ 2004ರಲ್ಲಿ ಸೂರತ್ ಕಲ್ ಎನ್‌ಐಟಿಯಿಂದ ಇಲೆಕ್ಟ್ರಿಕಲ್ಸ್ ಮತ್ತು ಇಲೆಕ್ಟ್ರಾನಿಕ್ಸ್‌ನಲ್ಲಿ ಪದವಿ ಪಡೆದು, ಡಿಸೈನರ್ ಇಂಜಿನಿಯರ್ ಆಗಿ ವೃತ್ತಿ ಆರಂಭಿಸಿದ್ದರು. ಬಳಿಕ ಬೋಸ್, ಕೆಪಿಐಟಿ ಟೆಕ್ನಾಲಜಿಯಲ್ಲೂ ಸೇವೆ ಸಲ್ಲಿಸಿದ್ದರು. ನಂತರ 2018ರಲ್ಲಿ ಚೀನಾಗೆ ತೆರಳಿ ಗ್ರೇಟ್ ವಾಲ್ ಮೋಟಾರ್ ಕಂಪನಿಯ ಮುಖ್ಯ ಇಂಜನಿಯರ್ ಆಗಿ ಕಾರ್ಯನಿರ್ವಹಿಸಿದ್ದರು.

## ಅಪಘಾತ: ಯುವತಿ ಬಲಿ

ಚಿಕ್ಕಬಳ್ಳಾಪುರ: ಬೆಂಗಳೂರಿಗೆ ಇಂಟರ್ನ್‌ಶಿಪ್‌ಗೆ ಅಂತ ಹೊರಟ ಮಗಳನ್ನ ಬೈಕ್‌ನಲ್ಲಿ ಬಸ್ ನಿಲ್ದಾಣಕ್ಕೆ ಡ್ರಾಪ್ ಮಾಡಲು ಬಂದ ತಂದೆ ಕಣ್ಣೆದುರೇ ಮಗಳು ಅಪಘಾತಕ್ಕೆ ಬಲಿಯಾಗಿರುವ ಹೃದಯವಿದ್ರಾವಕ ಘಟನೆ ಚಿಕ್ಕಬಳ್ಳಾಪುರದಲ್ಲಿ ನಡೆದಿದೆ.

ಚಿಕ್ಕಬಳ್ಳಾಪುರ ನಗರದ ಎಂ.ಜಿ ರಸ್ತೆಯ ಅಂಭಾಭವಾನಿ ಹೋಟೆಲ್ ಬಳಿ ಘಟನೆ ನಡೆದಿದ್ದು, 22 ವರ್ಷದ ಯೋಗಿತಾ ಮೃತ ದುರ್ದೈವಿ. ಅಂದಹಾಗೆ ಹಾಸನದ ಕಾಲೇಜಿನಲ್ಲಿ ಪಶು ವೈದ್ಯಕೀಯ ವಿದ್ಯಾರ್ಥಿನಿಯಾಗಿದ್ದ ಯೋಗಿತಾ, ಅಂತಿಮ ವರ್ಷ ಮುಗಿಸಿ ಬೆಂಗಳೂರಿನಲ್ಲಿ ಇಂಟರ್ನ್ ಶಿಪ್ ಮಾಡುತ್ತಿದ್ದಳು.

## ಮೂವರು ವಿದ್ಯಾರ್ಥಿಗಳು ಬಲಿ




ಮಂಡ್ಯ: ಮಂಡ್ಯ ಜಿಲ್ಲೆಯಲ್ಲಿ ಲಾರಿ ಡಿಕ್ಕಿಯಾಗಿ ಕಾರಿನಲ್ಲಿದ್ದ ಮೂವರು ವಿದ್ಯಾರ್ಥಿಗಳು ಸ್ಥಳದಲ್ಲೇ ಮೃತಪಟ್ಟ ಘಟನೆ ಮಳವಳ್ಳಿ ತಾಲೂಕಿನ ಬೋಸೇಗೌಡನ ದೊಡ್ಡಿ ಗ್ರಾಮದ ಬಳಿ ನಡೆದಿದೆ.

ಬೆಂಗಳೂರಿನ ಪ್ರಣವ್, ಆಕಾಶ್, ಆದರ್ಶ್ ಮೃತ ವಿದ್ಯಾರ್ಥಿಗಳು. ಪೃಥ್ವಿ ಎಂಬ ಮತ್ತೊಬ್ಬ ವಿದ್ಯಾರ್ಥಿಗೆ ಗಂಭೀರ ಗಾಯಗಳಾಗಿದ್ದು, ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.

ಮೃತರು ಮೈಸೂರು ಜಿಲ್ಲೆ ತಲಕಾಡು ಪ್ರವಾಸಕ್ಕೆ ಕಾರಿನಲ್ಲಿ ತೆರಳುತ್ತಿದ್ದರು. ಈ ವೇಳೆ ಬಸ್ ಓವರ್ ಟೇಕ್ ಮಾಡುವಾಗ ಎದುರಿಗೆ ಬರುತ್ತಿದ್ದ ಲಾರಿ ಡಿಕ್ಕಿಯಾಗಿ ಈ ಘಟನೆ ಸಂಭವಿಸಿದೆ. ಮೃತದೇಹಗಳನ್ನು ಮಳವಳ್ಳಿ ಸಾರ್ವಜನಿಕ ಆಸ್ಪತ್ರೆಯ ಶವಾಗಾರಕ್ಕೆ ರವಾನಿಸಲಾಗಿದೆ. ಮಳವಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ದುರ್ಘಟನೆ

# ಬಿಜೆಪಿ ನಾಯಕರ ಒಗ್ಗಟ್ಟು ಪ್ರದರ್ಶನ

ಬೆಂಗಳೂರು: ಸುವರ್ಣಸೌಧದಿಂದ ಸಿ.ಟಿ.ರವಿ ಆರೆಸ್ಟ್ ಆದ ಬಳಿಕ ಬಿಜೆಪಿ ಒಗ್ಗಟ್ಟು ಪ್ರದರ್ಶಿಸಿದೆ. ಮಾಧ್ಯಮಗಳ ಮುಂದೆ ಆರೋಪ, ಪ್ರತ್ಯಾರೋಪದಲ್ಲಿ ತೊಡಗಿದ್ದ ಬಿಜೆಪಿಯ ದೊಡ್ಡ ನಾಯಕರು ಎಲ್ಲರೂ ಸಿಟಿ ರವಿ ರಕ್ಷಣೆ ನಿಂತಿದ್ದರು.

ಶುಕ್ರವಾರವೇ ವಿಧಾನ ಸೌಧದಲ್ಲಿ ಬೆಲ್ಲದ್ ಮತ್ತು ಯತ್ನಾಳ್ ಪೊಲೀಸ್ ವ್ಯಾನ್ ತಡೆದಿದ್ದರು. ನಂತರ ಖಾನಾಪುರ ಪೊಲೀಸ್ ಠಾಣೆಗೆ ಬಿಜೆಪಿ ನಾಯಕರು ತೆರಳಿದ್ದರು. ಆರ್.ಅಶೋಕ್, ಛಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ಒಗ್ಗಟ್ಟು ಪ್ರದರ್ಶನವಾಗಿತ್ತು. ಬೆಂಗಳೂರಿನಿಂದ ವಿಮಾನವೇರಿ ಬಿ.ವೈ ವಿಜಯೇಂದ್ರ ಬೆಳಗಾವಿಗೆ ಬದಿದ್ದರು. ಈ ಬಣ ಎನ್ನದೇ ಪಕ್ಷದೊಳಗಿನ ಅಸಮಾಧಾನ ಕಿತ್ತೆಸೆದು ಹೋರಾಟ ನಡೆಸಿದ್ದರು.

ರಾಷ್ಟ್ರ, ಸಿದ್ಧಾಂತದ ವಿಚಾರ ಬಂದಾಗ ಬಿಜೆಪಿ ನಾಯಕರು ತಮ್ಮ ವೈಯಕ್ತಿಕ ಹಿತಾಸಕ್ತಿ ಮರೆತು ಒಂದಾಗುತ್ತಾರೆ. ಮಾಜಿ ಸಿಎಂ ಯಡಿಯರೂಪ್ಪ ಅವರು ಕರೆ ಮಾಡಿದ್ದರು.

ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಜೆಪಿ ನಡ್ಡಾ, ಗೃಹ ಸಚಿವ ಅಮಿತ್ ಶಾ, ಬಿಎಲ್ ಸಂತೋಷ್ ಮಾತನಾಡಿದರು. ವಿಜಯೇಂದ್ರ ಅವರು ಮೊದಲ ವಿಮಾನ ಹತ್ತಿ ಬೆಳಗಾವಿಗೆ ಬಂದಿದ್ದರು. ಚೆಕ್ ಇನ್ ಆಗಿದ್ದ ವಿರೋಧ ಪಕ್ಷದ ನಾಯಕರಾದ ಅಶೋಕ್, ಛಲವಾದಿ ನಾರಾಯಣ ಸ್ವಾಮಿ ವಿಷಯ ತಿಳಿದು ವಿಮಾನ ನಿಲ್ದಾಣದಿಂದ ಮರಳಿದರು ಎಂದು ತಿಳಿಸಿದರು.

ಬಸನ ಗೌಡ ಪಾಟೀಲ್ ಯತ್ನಾಳ್ ವಿಷಯ ತಿಳಿದು ದಾರಿ ಮಧ್ಯದಿಂದ ರಿಟರ್ನ್ ಆದರು. ಅರವಿಂದ್ ಬೆಲ್ಲದ್ ನಮ್ಮ ಜೊತೆಗೆ ಇದ್ದರು. ಅಭಯ್ ಪಾಟೀಲ್ ವಕೀಲರ ಸಮೂಹವನ್ನೇ ಸಿದ್ಧಮಾಡಿದ್ದರು. ನನ್ನ ಪರವಾಗಿ ಹೈಕೋರ್ಟ್ ಮತ್ತು ಸೆಷನ್ ಕೋರ್ಟ್‌ನಲ್ಲಿ ಅರ್ಜಿ ಸಹ ಸಲ್ಲಿಕೆಯಾಗಿತ್ತು. ಇದೆಲ್ಲ ಪೂರ್ವ ಜನ್ಮದ ಪುಣ್ಯ ಎಂದು ಹೇಳಿದರು.




ಶನಿವಾರ ಮಾಜಿ ಸಿಎಂ ಎಸ್.ಎಂ.ಕೃಷ್ಣ ಅವರ 11ನೇ ದಿನದ ಪುಣ್ಯಸ್ಮರಣೆ ಅಂಗವಾಗಿ ಮದ್ದೂರಿನ ಸೋಮನಹಳ್ಳಿಯಲ್ಲಿ ಅವರ ಭಾವಚಿತ್ರಕ್ಕೆ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ನಮನ ಸಲ್ಲಿಸಿದರು.

# ಸಿಟಿ ರವಿ ವಿಚಾರದಲ್ಲಿ ಸರ್ಕಾರದ ಯಡವಟ್ಟು

ಬೆಂಗಳೂರು: ಸಿಟಿ ರವಿ ಪ್ರಕರಣದಲ್ಲಿ ಪ್ರತಿಷ್ಠೆಗೆ ಬಿದ್ದು ಏನೋ ಮಾಡಲು ಹೋಗಿ ಏನೋ ಮಾಡಿ ರಾಜ್ಯ ಸರ್ಕಾರ ಯಡವಟ್ಟು ಮಾಡಿಕೊಂಡಿತಾ ಎಂಬ ಪ್ರಶ್ನೆ ಈಗ ಎದ್ದಿದೆ.

ಸದನದಲ್ಲಿ ಆದ ವಿಚಾರವನ್ನು ಹೊರಗೆ ತಂದು ಸಿಟಿ ರವಿ ಬಂಧನ ಮಾಡಿದ ನಂತರದ ಬೆಳವಣಿಗೆ, ಪೋಲೀಸರ ವರ್ತನೆಯಿಂದ ಸರ್ಕಾರಕ್ಕೆ ಡ್ಯಾಮೇಜ್ ಆಗಿದೆ. ಅಧಿವೇಶನ ನಡೆಯುತ್ತಿರುವಾವಾಗಲೇ ಜನಪ್ರತಿನಿಧಿ ಬಂಧಿಸಿದ್ದು ಈಗ ಸಾಕಷ್ಟು ಚರ್ಚೆ ಆಗುತ್ತಿದೆ. ಕರ್ನಾಟಕ ವಿಧಾನಸಭೆ ಕಾರ್ಯವಿಧಾನ ಮತ್ತು ಕಲಾಪ ನಿಯಮಾವಳಿಯ ಅನ್ವಯ ಸಭಾಧ್ಯಕ್ಷರ ಅನುಮತಿ ಇಲ್ಲದೇ ಬಂಧನ ಮಾಡುವಂತಿಲ್ಲ. ಆದರೆ ಈ ಪ್ರಕರಣದಲ್ಲಿ ಸ್ಪೀಕರ್ ಅವರ ಅನುಮತಿ ಪಡೆಯದೇ ಬಂಧಿಸಲಾಗಿದೆ. ಬಿಎನ್‌ಎಸ್ ಕಾಯ್ದೆಯ ಸೆಕ್ಷನ್ 75 ಕ್ಕೆ 3 ವರ್ಷ ಸಜೆ ಇದೆ. 79 ಕ್ಕೆ 1 ವರ್ಷ ಜೈಲು ಶಿಕ್ಷೆ ವಿಧಿಸಲಾಗಿದೆ. ಆದರೆ 7 ವರ್ಷಗಳ ಒಳಗಿನ ಶಿಕ್ಷೆಗೆ ನೋಟಿಸ್ ನೀಡಬೇಕು. ಆದರೆ ನೋಟಿಸ್ ನೀಡದೇ ಅರೆಸ್ಟ್ ಮಾಡಲಾಗಿದೆ. ಸಿಟಿ ರವಿಗೆ ಜಾಮೀನು ನೀಡಿದ ಆದೇಶದಲ್ಲಿ ಹೈಕೋರ್ಟ್ ಈ ವಿಚಾರವನ್ನು ಉಲ್ಲೇಖಿಸಿದೆ.

ಸಿಟಿ ರವಿ ಬಂಧನ ಬಳಿಕ ಪೊಲೀಸರ ವರ್ತನೆಯ ಬಗ್ಗೆ ಭಾರೀ ಅನುಮಾನ ವ್ಯಕ್ತವಾಗುತ್ತಿದೆ. ಯಾವ ಠಾಣೆಯ ಪೊಲೀಸರು ಬಂಧನ ಮಾಡಿದ್ದಾರೋ ಅದೇ ಠಾಣೆಯಲ್ಲಿ ಆರೋಪಿಯನ್ನು ಇಟ್ಟುಕೊಳ್ಳಬೇಕು. ಒಂದು ವೇಳೆ ಕಾನೂನು ಸುವ್ಯವಸ್ಥೆಗೆ ಅಡ್ಡಿಯಾದರೆ ಭದ್ರತೆ ಪೊಲೀಸರನ್ನು ಕರೆಸಿಕೊಳ್ಳಬೇಕು ಅಥವಾ ಭದ್ರತೆ ಹೆಚ್ಚು ಇರುವ ಜಾಗದಲ್ಲಿ ಆರೋಪಿಯನ್ನು ಇಟ್ಟುಕೊಳ್ಳಬೇಕು. ಆದರೆ ಪೊಲೀಸರು ಠಾಣೆಯಲ್ಲಿ ಇರಿಸದೇ ರಾತ್ರಿಯಿಡಿ ಬೆಳಗಾವಿಯನ್ನು ಸುತ್ತಿಸಿದ್ದು ಯಾಕೆ ಎನ್ನುವುದೇ ದೊಡ್ಡ ಪ್ರಶ್ನೆ. ಕಾನೂನಿನ ಪ್ರಕಾರ ಏನು ನಿಯಮ ಪಾಲನೆ ಮಾಡಬೇಕೋ ಆ ನಿಯಮವನ್ನು ಪೊಲೀಸರು ಮಾಡಬೇಕಿತ್ತು. ಆದರೆ ಇಲ್ಲಿ ಪೊಲೀಸರು ಯಾರದ್ದೋ ಅದೇಶವನ್ನು ಪಾಲನೆ ಮಾಡಲು ರಾತ್ರಿಯಿಡಿ ಸುತ್ತಿಸಿದ್ದಾರೆ ಎಂದು ಬಿಜೆಪಿ ಆರೋಪಿಸಿದೆ.

ಸದನದಲ್ಲಿ ಪ್ರಸ್ತಾಪವಾದ ವಿಚಾರಗಳನ್ನ ಹೊರಗೆ ತರಲು ಅವಕಾಶವಿಲ್ಲ. ಒಂದು ವೇಳೆ ಈ ಪ್ರಕರಣಕ್ಕೆ ಅವಕಾಶ ನೀಡಿದರೆ ಮುಂದಿನ ದಿನಗಳಲ್ಲಿ ನ್ಯಾಯಾಲಯದಲ್ಲಿ ಜನಪ್ರತಿನಿಧಿಗಳ ಮೇಲೆ ಹಲವು ಕೇಸ್ ದಾಖಲಿಸಲು ಅವಕಾಶ ನೀಡಿದಂತಾಗುತ್ತದೆ.

## ಥ್ರೋಬ್ಯಾಕ್ ಅನಾವರಣಗೊಳಿಸಿಸ

# ಬುಕ್ ಮೈ ಶೋ

ಬೆಂಗಳೂರು: 2024 ಕೊನೆಗೊಳ್ಳುತ್ತಿದ್ದಂತೆ, ಬುಕ್ ಮೈ ಶೋ, ಥ್ರೋಬ್ಯಾಕ್ ಅನ್ನು ಅನಾವರಣಗೊಳಿಸಿದೆ, ಇದು ಭಾರತದಲ್ಲಿ ಮನರಂಜನೆಗೆ ಕಡಿಮೆ ಏನನ್ನೂ ನೀಡದ ವರ್ಷದ ಹಿಂದಿನ ನೋಟ. ಸಾಂಪ್ರದಾಯಿಕ ಸಿನಿಮೀಯ ಅನುಭವಗಳಿಂದ ವಿದ್ಯುನ್ಮಾನಗೊಳಿಸುವ ಲೈವ್ ಈವೆಂಟ್‌ಗಳವರೆಗೆ ಮತ್ತು ಬೇಡಿಕೆಯ ಸ್ಟ್ರೀಮಿಂಗ್‌ನ ಉಲ್ಬಣವು ಈ ವರ್ಷವಾಗಿತ್ತು.
ಭಾರತವು ನಿಜವಾಗಿಯೂ ತನ್ನ ಮನರಂಜನಾ ಕನಸುಗಳನ್ನು ಬದುಕಿತು ಮತ್ತು ಕೆಲವನ್ನು, ಎಲ್ಲಾ ವಿಷಯಗಳ ಮನರಂಜನೆಗಾಗಿ ಭಾರತೀಯ ಪ್ರೇಕ್ಷಕರ ವಿಕಸನ ಮತ್ತು ಅತೃಪ್ತ ಹಸಿವುಗಳಿಗೆ ಸಾಕ್ಷಿಯಾಗಿದೆ.

ಪುಷ್ಪ 2: ದಿ ರೂಲ್ ಎಂಬ ಚಲನಚಿತ್ರವು ಭಾರತೀಯ ಕಥೆ ಹೇಳುವಿಕೆಯನ್ನು ಮರುವ್ಯಾಖ್ಯಾನಿಸಿ, ವರ್ಷದ ಅತಿ ಹೆಚ್ಚು ವೀಕ್ಷಿಸಿದ ಚಲನಚಿತ್ರವಾಯಿತು ಮತ್ತು 10.8 ಲಕ್ಷ ಜನರು ಈ ಚಲನಚಿತ್ರವನ್ನು ಏಕಾಂಗಿಯಾಗಿ ವೀಕ್ಷಿಸಿದರು. ನವೆಂಬರ್ 1, 2024, ಬುಕ್ ಮೈ ಶೋ ನಲ್ಲಿ ಬ್ಲಾಕ್‌ಬಸ್ಟರ್ ದಿನವಾಗಿದ್ದು, ಕೇವಲ 24 ಗಂಟೆಗಳಲ್ಲಿ 2.3 ಮಿಲಿಯನ್ ಟಿಕೆಟ್‌ಗಳು ಮಾರಾಟವಾಗುವ ಮೂಲಕ ದಾಖಲೆಗಳನ್ನು ಛಿದ್ರಗೊಳಿಸಿತು!

ಕಲ್ ಹೋ ನಾ ಹೋ, ರಾಕ್‌ಸ್ಟಾರ್ ಮತ್ತು ಲೈಲಾ ಮಜ್ನು ನಂತಹ ಮರು-ಬಿಡುಗಡೆಗಳೊಂದಿಗೆ, ನಾಸ್ಟಾಲ್ಜಿಯಾ ಕೇಂದ್ರ ಹಂತವನ್ನು ಪಡೆದುಕೊಂಡಿತು, ಪ್ರೀತಿಯ ಕ್ಲಾಸಿಕ್‌ಗಳನ್ನು ಮರುಭೇಟಿ ಮಾಡುವ ಅಭಿಮಾನಿಗಳಿಗೆ ಥಿಯೇಟರ್‌ಗಳನ್ನು ಸಮಯ ಯಂತ್ರಗಳಾಗಿ ಪರಿವರ್ತಿಸಿತು. ಏತನ್ಮಧ್ಯೆ, ಡೆಡ್‌ಪೂಲ್ ಮತ್ತು ವೊಲ್ವೆರಿನ್ ಮತ್ತು ಗಾಡ್ಜಿಲ್ಲಾ ಥ ಕಾಂಗ್: ದಿ ನ್ಯೂ ಎಂಪೈರ್ ನಂತಹ ಅಂತರರಾಷ್ಟ್ರೀಯ ಬ್ಲಾಕ್‌ಬಸ್ಟರ್‌ಗಳು ಹೆಚ್ಚಿನ ಆಕ್ಷನ್ ಉತ್ಸಾಹದಿಂದ ಉರಿಯುತ್ತವೆ. ಒಬ್ಬ ಸಿನಿಪ್ರೇಮಿ 221 ಚಲನಚಿತ್ರಗಳನ್ನು ವೀಕ್ಷಿಸಿದ ದಾಖಲೆಯನ್ನು ನಿರ್ಮಿಸುವುದರೊಂದಿಗೆ ಭಾರತದ ಚಲನಚಿತ್ರಪ್ರೇಮಿಗಳ ಉತ್ಸಾಹವು ಸಾಟಿಯಿಲ್ಲ.

# ಫ್ರೀಡಂ ರಿಫೈನ್ಡ್ ಸೂರ್ಯಕಾಂತಿ ಎಣ್ಣೆ ಭಾರತದ "2024-25ರ ಅತ್ಯಂತ ಆದ್ಯತೆಯ ಬ್ರ್ಯಾಂಡ್"

ಬೆಂಗಳೂರು: ಫ್ರೀಡಂ ರಿಫೈನ್ಡ್ ಸೂರ್ಯಕಾಂತಿ ಆಯಿಲ್ ಇಂಡಿಯಾ ಟುಡೇ ಸಹಯೋಗದೊಂದಿಗೆ ಮಾರ್ಕ್ಸ್‌ಮೆನ್ ಡೈಲಿ 2024-25ರ ಅತ್ಯಂತ ಆದ್ಯತೆಯ ಬ್ರ್ಯಾಂಡ್‌ಗಳಲ್ಲಿ ಒಂದಾಗಿದೆ. ಈ ಮಾನ್ಯತೆಯು ಗುಣಮಟ್ಟ, ಆರೋಗ್ಯ ಮತ್ತು ಗ್ರಾಹಕರ ತೃಪ್ತಿಗೆ ಬ್ರ್ಯಾಂಡ್‌ನ ಸ್ಥಿರ ಬದ್ಧತೆಯನ್ನು ಆಚರಿಸುತ್ತದೆ, ಇದು ದೇಶಾದ್ಯಂತದ ಮನೆಗಳಲ್ಲಿ ವಿಶ್ವಾಸಾರ್ಹ ಹೆಸರನ್ನು ಮಾಡುತ್ತದೆ.

ಫ್ರೀಡಂ ರಿಫೈನ್ಡ್ ಸೂರ್ಯಕಾಂತಿ ಎಣ್ಣೆ ಕಳೆದ 3 ವರ್ಷಗಳಿಂದ ನಿರಂತರವಾಗಿ ಸೂರ್ಯಕಾಂತಿ ಎಣ್ಣೆ ವಿಭಾಗದಲ್ಲಿ (ನೀಲ್ಸನ್ ಐಕ್ಯೂ ಡೇಟಾ (ಎಂಎಟಿ) ಫೆಬ್ರವರಿ 2024 ರ ಪ್ರಕಾರ) ಭಾರತದಲ್ಲಿ ಮಾರಾಟದ ಪ್ರಕಾರ ನಂ.1 ಬ್ರ್ಯಾಂಡ್ ಆಗಿದೆ ಮತ್ತು ಶುದ್ಧತೆ, ಆರೋಗ್ಯ ಪ್ರಯೋಜನಗಳು ಮತ್ತು ಅಸಾಧಾರಣ ರುಚಿಗೆ ಅಚಲ ಸಮರ್ಪಣೆಯಿಂದಾಗಿ ಮನೆಯ ನೆಚ್ಚಿನ ಬ್ರ್ಯಾಂಡ್ ಆಗಿದೆ. ಆರೋಗ್ಯ ಪ್ರಜ್ಞೆಯುಳ್ಳ ಕುಟುಂಬಗಳ ಅಗತ್ಯಗಳನ್ನು ಪೂರೈಸಲು




ವಿನ್ಯಾಸಗೊಳಿಸಲಾದ ಈ ತೈಲವು ಟ್ರಾನ್ಸ್-ಕೊಬ್ಬು ಮುಕ್ತವಾಗಿದೆ ಮತ್ತು ಹೃದಯ-ಆರೋಗ್ಯಕರ ಜೀವನಶೈಲಿಯನ್ನು ಉತ್ತೇಜಿಸುತ್ತದೆ. ಗುಣಮಟ್ಟ ಮತ್ತು ನಾವೀನ್ಯತೆಗೆ ಬ್ರ್ಯಾಂಡ್ ನೀಡಿದ ಒತ್ತು ಖಾದ್ಯ ತೈಲ ವಿಭಾಗದಲ್ಲಿ ಮುಂಚೂಣಿಯಲ್ಲಿದೆ, ಗ್ರಾಹಕರ ನಂಬಿಕೆ ಮತ್ತು ತೃಪ್ತಿಯಲ್ಲಿ ಹೊಸ ಮಾನದಂಡಗಳನ್ನು ಸ್ಥಾಪಿಸಿದೆ.


ದೈನಂದಿನ ಭಕ್ಷ್ಯಗಳ ರುಚಿಯನ್ನು ಹೆಚ್ಚಿಸುವ ಸಾಮರ್ಥ್ಯದೊಂದಿಗೆ, ಫ್ರೀಡಂ ಸೂರ್ಯಕಾಂತಿ ಎಣ್ಣೆ ಭಾರತೀಯ ಅಡುಗೆಮನೆಗಳಲ್ಲಿ ತಡೆರಹಿತವಾಗಿ ಸಂಯೋಜಿಸಲ್ಪಟ್ಟಿದೆ, ಅಸಂಖ್ಯಾತ ಕುಟುಂಬಗಳಿಗೆ ಪ್ರಧಾನ ಘಟಕಾಂಶವಾಗಿದೆ. ಮೋಸ್ಟ್ ಪ್ರಿಫರ್ಡ್ ಬ್ರ್ಯಾಂಡ್ಸ್ ಪ್ರಶಸ್ತಿಗಳಲ್ಲಿನ ಮಾನ್ಯತೆಯು ಅದರ ಗ್ರಾಹಕರ ನಿಷ್ಠೆ ಮತ್ತು ನಂಬಿಕೆಯನ್ನು ಪ್ರತಿಬಿಂಬಿಸುತ್ತದೆ, ಜೊತೆಗೆ ಉದ್ಯಮದಲ್ಲಿ ಅತ್ಯುನ್ನತ ಮಾನದಂಡಗಳನ್ನು ಕಾಪಾಡಿಕೊಳ್ಳಲು ಬ್ರ್ಯಾಂಡ್‌ನ ನಿರಂತರ ಪ್ರಯತ್ನಗಳನ್ನು ಪ್ರತಿಬಿಂಬಿಸುತ್ತದೆ.

# 100ನೇ ತಾನ್ಸೇನ್ ಸಂಗೀತ ಸಮರೋಹ ಗಿನ್ನಿಸ್ ವಿಶ್ವ ದಾಖಲೆ

ಬೆಂಗಳೂರು: ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತದ ಭವ್ಯ ಆಚರಣೆಯಾದ 100ನೇ ತಾನ್ಸೇನ್ ಸಂಗೀತ ಸಮರೋಹ್ 546 ಸಂಗೀತಗಾರರೊಂದಿಗೆ ಅತಿದೊಡ್ಡ ಹಿಂದೂಸ್ತಾನಿ ಶಾಸ್ತ್ರೀಯ ಬ್ಯಾಂಡ್ಗಾಗಿ ಗಿನ್ನೆಸ್ ವಿಶ್ವ ದಾಖಲೆಯನ್ನು ರಚಿಸುವ ಮೂಲಕ ಇತಿಹಾಸದಲ್ಲಿ ತನ್ನ ಹೆಸರನ್ನು ಕೆತ್ತಿದೆ.

ಅಪ್ರತಿಮ ಗ್ವಾಲಿಯರ್ ಕೋಟೆಯಲ್ಲಿ ನಡೆದ ಈ ಕಾರ್ಯಕ್ರಮವು ಸಂಗೀತಗಾರರ ವಿಸ್ಮಯಕಾರಿ ಪ್ರದರ್ಶನಕ್ಕೆ ಸಾಕ್ಷಿಯಾಯಿತು, ಅವರು ತಾನ್ಸೇನ್ ಅವರ ಮೂರು ಅಪ್ರತಿಮ ರಾಗಗಳಾದ ರಾಗ್ ಮಲ್ಹಾರ್, ರಾಗ್ ಮಿಯಾ ಕಿ ತೋಡಿ ಮತ್ತು ರಾಗ್ ದರ್ಬಾರಿ ನುಡಿಸಿದರು.

ಮಧ್ಯಪ್ರದೇಶ ಸರ್ಕಾರದ ಸಾಂಸ್ಕೃತಿಕ ಇಲಾಖೆ ಆಯೋಜಿಸಿದ್ದ ಈ ಮೈಲಿಗಲ್ಲು ಕಾರ್ಯಕ್ರಮವು ಗ್ವಾಲಿಯರ್ ಅನ್ನು ಯುನೆಸ್ಕೋ ಸಂಗೀತದ ನಗರವೆಂದು ಇತ್ತೀಚೆಗೆ ಗುರುತಿಸಿದ್ದನ್ನು ಆಚರಿಸಿತು, ಇದು ಶಾಸ್ತ್ರೀಯ ಸಂಗೀತ ಜಗತ್ತಿನಲ್ಲಿ ಅದರ ಜಾಗತಿಕ ಮಹತ್ವವನ್ನು ಎತ್ತಿ ತೋರಿಸುತ್ತದೆ.



ದಾಖಲೆಯ ಪ್ರದರ್ಶನದ ಅಧ್ಯಕ್ಷತೆಯನ್ನು ಮಧ್ಯಪ್ರದೇಶದ ಮುಖ್ಯಮಂತ್ರಿ ಡಾ.ಮೋಹನ್ ಯಾದವ್ ವಹಿಸಿದ್ದರು ಮತ್ತು ಗಣ್ಯರು, ಸಂಗೀತ ಪ್ರೇಮಿಗಳು ಮತ್ತು ಅಂತರರಾಷ್ಟ್ರೀಯ ಅತಿಥಿಗಳು ಭಾಗವಹಿಸಿದ್ದರು. ಪ್ರದರ್ಶನವು ಪ್ರೇಕ್ಷಕರನ್ನು ಮಂತ್ರಮುಗ್ಧರನ್ನಾಗಿಸಿತು. ಗಿನ್ನೆಸ್ ವಿಶ್ವ ದಾಖಲೆ ಸಲಹೆಗಾರ ನಿಶ್ಚಲ್ ಬರೋಟ್ ಅವರು ಈ ದಾಖಲೆಯನ್ನು ನಿಖರವಾಗಿ ಕಾರ್ಯಗತಗೊಳಿಸಿದರು, ಇದು ಅವರ 53 ನೇ ಯಶಸ್ವಿ ಗಿನ್ನೆಸ್ ದಾಖಲೆಯ ಕಾರ್ಯಗತಗೊಳಿಸುವಿಕೆಯನ್ನು

# ಸಿ.ಟಿ.ರವಿ ವಿರುದ್ಧ ಸುಳ್ಳು ಮೊಕದ್ದಮೆ

## ದಾಖಲಿಸಿರುವ ಸರ್ಕಾರದ ಕ್ರಮ ಖಂಡಿಸಿ ಪ್ರತಿಭಟನೆ



ತುಮಕೂರು: ಸುವರ್ಣಸೌಧದಲ್ಲಿ ಮಾಜಿ ಸಚಿವ, ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರ ಮೇಲೆ ಗೂಂಡಾ ವರ್ತನೆ, ಕೊಲೆ ಬೆದರಿಕೆ ಹಾಕಿ, ಅವರ ವಿರುದ್ಧ ಸುಳ್ಳು ಮೊಕದ್ದಮೆ ದಾಖಲಿಸಿರುವ ಸರ್ಕಾರದ ಕ್ರಮ ಖಂಡಿಸಿ ಜಿಲ್ಲಾ ಬಿಜೆಪಿ ಮುಖಂಡರು ಶುಕ್ರವಾರ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಅಶಾಂತಿ, ಅರಾಜಕತೆ, ಅಭದ್ರತೆ ಸೃಷ್ಟಿಸಿ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹಾಳು ಮಾಡುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ವಜಾ ಮಾಡಬೇಕು ಎಂದು ಒತ್ತಾಯಿಸಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್.ರವಿಶಂಕರ್ ಹೆಬ್ಬಾಕ ಮಾತನಾಡಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಇಷ್ಟು ದಿನದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳನ್ನು ಮಾಡದೆ, ಜನರನ್ನು ವಂಚಿಸುತ್ತಾ ಬಂದಿದೆ. ತನ್ನ ಆಡಳಿತ ಹುಳುಕನ್ನು ಜನ ಪ್ರಶ್ನೆ ಮಾಡಬಾರದು ಎಂದು ವಿವಾದಗಳನ್ನು ಸೃಷ್ಟಿಮಾಡಿಕೊಂಡು ಜನರ ಗಮನವನ್ನು ಬೇರೆಡೆಗೆ ಸೆಳೆಯುವ ತಂತ್ರವನ್ನು ಸರ್ಕಾರ ಮಾಡುತ್ತಿದೆ ಎಂದು ದೂರಿದರು.

ವಿಧಾನಸೌಧದ ಬಳಿ ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗಿದವನ ವಿರುದ್ಧ ಕ್ರಮ ತೆಗೆದುಕೊಳ್ಳದೆ ಎಫ್‌ಎಸ್‌ಎಲ್ ವರದಿ ಪರಿಶೀಲಿಸುತ್ತೇವೆ, ಪರಿಶೀಲನೆ ಮಾಡುತ್ತೇವೆ ಎಂದು ಹೇಳಿಕೊಂಡ ಕಾಂಗ್ರೆಸ್ ಸರ್ಕಾರ ಆತನ ವಿರುದ್ಧ ಈವರೆಗೂ ಕ್ರಮ ತೆಗೆದುಕೊಂಡಿಲ್ಲ. ಆದರೆ, ಸರ್ಕಾರದ ಲೋಪದೋಷಗಳನ್ನು ಪ್ರಶ್ನಿಸಲು ಮುಂದಾದ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿಯವರನ್ನು ಹತ್ತಿಕ್ಕಲು ಸುಳ್ಳು ಆರೋಪದ ವಿವಾದ ಸೃಷ್ಟಿಸಲಾಗಿದೆ. ಅವರ ಮೇಲೆ ಹಲ್ಲೆ ಮಾಡಿ, ಕೊಲೆ ಬೆರದಿಕೆ ಹಾಕಲಾಗಿದೆ. ಆದರೆ ಸಿ.ಟಿ.ರವಿಯವರು ಅಭಿಪ್ರಾಯ ಹೇಳಲೂ ಅವಕಾಶ ನೀಡಿದೆ ಅವರನ್ನು ಪೊಲೀಸರು ವಶಕ್ಕೆ ಪಡೆದು ಭಯೋತ್ಪಾದಕರ ರೀತಿ ನಡೆಸಿಕೊಂಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಾಂಗ್ರೆಸ್ ಸರ್ಕಾರದಿಂದ ಪ್ರಜಾಪ್ರಭುತ್ವದ ಕಗ್ಗೊಲೆ ನಡೆಯುತ್ತಿದೆ. ರಾಜ್ಯದಲ್ಲಿ ಶಾಂತಿ, ಸುವ್ಯವಸ್ಥೆ ಹಾಳಾಗುತ್ತಿದೆ. ಅಭಿವೃದ್ಧಿ ಕಾರ್ಯ ಮಾಡದ ಸರ್ಕಾರದ ಕಾರ್ಯವೈಖರಿಯ ಬಗ್ಗೆ ಚರ್ಚೆ ಮಾಡಲು ಹೊರಟ ಸಿಟಿ ರವಿ ಅವರನ್ನು ನಿಯಂತ್ರಿಸುವ ಪ್ರಯತ್ನ ಮಾಡಿದ್ದಾರೆ. ಗೂಂಡಾಗಳಿಂದ ಹಲ್ಲೆ ಮಾಡಿಸಿ, ಪೊಲೀಸರನ್ನು ಬಳಸಿಕೊಂಡು ಕೇಸು ದಾಖಲಿಸಿದ್ದಾರೆ. ರಾಜ್ಯಪಾಲರು ಮಧ್ಯೆ ಪ್ರವೇಶಿಸಿ ಈ ಭ್ರಷ್ಟ, ಜನವಿರೋಧಿ ಸರ್ಕಾರವನ್ನು ವಜಾಗೊಳಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ರೈತ ಮೋರ್ಚಾ ಉಪಾಧ್ಯಕ್ಷ ಬ್ಯಾಟರಂಗೇಗೌಡ ಮಾತನಾಡಿ, ಅಂಬೇಡ್ಕರ್ ಅವರನ್ನು ಕಾಂಗ್ರೆಸ್‌ನವರು ಯಾವ ರೀತಿ ನಡೆಸಿಕೊಂಡರು, ಚುನಾವಣೆಯಲ್ಲಿ ಸೋಲಿಸಿದರು, ಭಾರತ ರತ್ನ ಪ್ರಶಸ್ತಿ ನೀಡದೆ, ಅಂಬೇಡ್ಕರ್‌ಗೆ ಅವಮಾನ ಮಾಡಿದವರಿಗೆ ಪ್ರಶಸ್ತಿ ನೀಡಿದರು. ಇಂತಹ ಕಾಂಗ್ರೆಸ್‌ನವರು ಅಂಬೇಡ್ಕರ್ ಬಗ್ಗೆ ತಮ್ಮ ಬಣ್ಣ ಬಯಲಾಗುತ್ತದೆ ಎಂದು ಪಾರ್ಲಿಮೆಂಟಿನಲ್ಲಿ ಅಮಿತ್ ಶಾ ವಿರುದ್ಧ ಹುನ್ನಾರ ನಡೆಸಿ ವಿಷಯಾಂತರ ಮಾಡಿ ಗೊಂದಲ ಸೃಷ್ಟಿಸಿದರು ಎಂದು ಆರೋಪಿಸಿದರು.

ಸುವರ್ಣಸೌಧದಲ್ಲಿ ಸಭಾಪತಿಗಳ ಅನುಮತಿ ಪಡೆಯದೆ ಸಿ.ಟಿ.ರವಿಯವರನ್ನು ಬಂಧಿಸಿದರು. ಅವರ ಮೇಲೆ ಹಲ್ಲೆಯಾಗಿದೆ, ಕೊಲೆ ಬೆದರಿಕೆ ಮಾಡಲಾಗಿದೆ. ಇದಕ್ಕೆ ಕಾಂಗ್ರೆಸ್ ಸರ್ಕಾರದ ಕುಮ್ಮಕ್ಕು ಕಾರಣ ಎಂದರು.

ಗುಬ್ಬಿ ತಾಲ್ಲೂಕು ಬಿಜೆಪಿ ಅಧ್ಯಕ್ಷ ಪಂಚಾಕ್ಷರಿ, ಜಿಲ್ಲಾ ಬಿಜೆಪಿ ಕಾರ್ಯದರ್ಶಿ ಜ್ಯೋತಿ ತಿಪ್ಪೇಸ್ವಾಮಿ ಮಾತನಾಡಿದರು.

ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ಎಸ್.ಶಿವಪ್ರಸಾದ್, ಜಿಲ್ಲಾ ಕಾರ್ಯದರ್ಶಿ ಹೆಚ್.ಎಂ.ರವೀಶಯ್ಯ, ಉಪಾಧ್ಯಕ್ಷ ಭೈರಪ್ಪ, ಸಿದ್ದರಾಮಣ್ಣ, ಎಸ್.ಸಿ.ಮೋರ್ಚಾ ಜಿಲ್ಲಾಧ್ಯಕ್ಷ ಆಂಜನಪ್ಪ, ಕೆ.ವೇದಮೂರ್ತಿ, ಚೇತನ್, ಟಿ.ಹೆಚ್.ಹನುಮಂತರಾಜು, ಮುಖಂಡರಾದ ಬನಶಂಕರಿಬಾಬು, ಗಣೇಶ್‌ಪ್ರಸಾದ್, ಕೆ.ಪಿ.ಮಹೇಶ್, ಧನುಷ್, ಮಲ್ಲಿಕಾರ್ಜುನ್, ಮಂಜುನಾಥ್, ಮಹೇಶ್‌ಬಾಬು, ಜಗದೀಶ್, ತಿಪ್ಪೇಸ್ವಾಮಿ, ಬಂಬೂ ಮೋಹನ್, ಅಕ್ಷಯ್ ಚೌಧರಿ, ವಿಜಯಕುಮಾರ್, ನಿಸರ್ಗ ರಮೇಶ್, ಶಬ್ಬೀರ್ ಅಹ್ಮದ್, ರಾಮಚಂದ್ರರಾವ್, ವೆಂಕಟೇಶಾಚಾರ್, ಜಯಶ್ರೀ ಸುರೇಶ್, ಗಾಯತ್ರಿ ಮಂಜುನಾಥ್, ವಸಂತ ಮತ್ತಿತರರು ಭಾಗವಹಿಸಿದ್ದರು.

# ಕ್ಯಾನ್ ಫೇಸ್ ರೇಜರ್ ಬಿಡುಗಡೆ

ಬೆಂಗಳೂರು: ವೈಯಕ್ತಿಕವಾಗಿ ಓರಣಗೊಳಿಸುವ ಉತ್ಪನ್ನಗಳಲ್ಲಿ ನಂಬಿಕಾರ್ಹ ಮುಂಚೂಣಿಯ ಸಂಸ್ಥೆಯಾದ ಕೆಎಐ ಇಂಡಿಯಾ, ಮಹಿಳೆಯರಿಗಾಗಿ ಕ್ಯಾನ್ ಫೇಸ್ ರೇಜರ್ ಬಿಡುಗಡೆಗೊಳಿಸಿದೆ.




ನಯವಾದ, ದೋಷರಹಿತ ಮತ್ತು ಕಾಂತಿಯುತ ಮುಖದ ಚರ್ಮವನ್ನು ಪಡೆಯಲು ನೋವುರಹಿತ ಮತ್ತು ಹೆಚ್ಚಿನ ಪ್ರಯತ್ನವಿಲ್ಲದ ಪರಿಹಾರ ನೀಡುವ ಕ್ರಾಂತಿಕಾರಿ ಸಾಧನ ಇದಾಗಿದೆ. ಅಸಾಧಾರಣ ಸೌಂದರ್ಯ ಸಾಧನಗಳನ್ನು ಸೃಷ್ಟಿಸುವಲ್ಲಿ 116 ವರ್ಷಗಳ ಪರಿಣತಿ ಹೊಂದಿರುವ ಜಪಾನ್ನ ಹೆಸರಾಂತ ಕೆಎಐ ಬ್ರ್ಯಾಂಡ್ನ ಭಾರತೀಯ ಅಂಗಸಂಸ್ಥೆಯಾಗಿ, ಕೆಎಐ ಇಂಡಿಯಾ ವೈಯಕ್ತಿಕವಾಗಿ ಓರಣಗೊಳಿಸುವ ಮಾನದಂಡಗಳನ್ನು ಸುಧಾರಿಸುವುದನ್ನು ಮುಂದುವರೆಸಿದೆ.

ಬಳಸಲು ಸುಲಭವಾಗುವಂತೆ ಕ್ಯಾನ್ ಫೇಸ್ ರೇಜರ್ ವಿನ್ಯಾಸಗೊಳಿಸಲಾಗಿದೆ. ಚರ್ಮವನ್ನು ಮೃದುವಾಗಿ, ಪ್ರಕಾಶಮಾನವಾಗಿಸುವುದಲ್ಲದೇ ಅನಗತ್ಯ ಕೂದಲಿನಿಂದ ಸುಲಭವಾಗಿ ಮುಕ್ತವಾಗಿಸುತ್ತದೆ. ಪಿಟಿಎಫ್‌ಇತಂತ್ರಜ್ಞಾನದೊಂದಿಗೆ ವಿಶೇಷವಾಗಿ ವಿನ್ಯಾಸಗೊಳಿಸಲಾದ ಬ್ಲೇಡ್ ಹೊಂದಿರುವ ರೇಜರ್ಗೆ ಶೇವಿಂಗ್ ಮಾಡುವಾಗ ಕನಿಷ್ಠ ಶ್ರಮ ಬೇಕಾಗುತ್ತದೆ.

ಅದರ ಸುಧಾರಿತ ಲೇಪನವು ಬ್ಲೇಡ್ಗಳು ತುಕ್ಕು-ನಿರೋಧಕ, ಬಾಳಿಕೆ ಬರುವಂತೆ ಮತ್ತು ತೀಕ್ಷ್ಣವಾಗಿ ಉಳಿಯುವುದರ ಖಾತ್ರಿ ಮಾಡಿಕೊಳ್ಳುತ್ತದೆಸುಲಭವಾಗಿ ಮುಖ ಶೇವಿಂಗ್ ಮಾಡಬಹುದು.

ಸಂಸ್ಥೆಯ ವೆಬ್ಸೈಟ್ www.kaiindiaonline.com ಮತ್ತು ಎಲ್ಲಾ ಇತರ ಪ್ರಮುಖ ಇ-ಕಾಮರ್ಸ್ ಪ್ಲಾಟ್ಫಾರ್ಮ್ಗಳಲ್ಲಿ ಕೇವಲ 279/- ರೂ.ಗಳಿಗೆ ಕೆಎಐ ಇಂಡಿಯಾದ ಕ್ಯಾನ್ ಫೇಸ್ ರೇಜರ್ ಲಭ್ಯವಿದೆ. ಮುಖದ ಅನಗತ್ಯ ಕೂದಲಿಗೆ ವಿದಾಯ ಹೇಳಿ ಮತ್ತು ಕೆಐ ಇಂಡಿಯಾದ ಕ್ಯಾನ್ಫೇಸ್ ರೇಜರ್ನೊಂದಿಗೆ ನಯವಾದ, ದೋಷರಹಿತ ಮತ್ತು ಕಾಂತಿಯುತ ತ್ವಚೆ ಹೊಂದಿರಿ.

# ಮಾರುಕಟ್ಟೆ ದರದಲ್ಲಿ ಕೊಬ್ಬರಿ ಖರೀದಿ ಪ್ರಾರಂಭ

ತಿಪಟೂರು: ರೈತ ಉತ್ಪಾದಕ ಕಂಪನಿ ಸರ್ಕಾರದ ಸಹಯೋಗದಲ್ಲಿ ರೈತರೇ ಸ್ಥಾಪಿಸಿಕೊಂಡ ಕಂಪನಿಯಾಗಿದ್ದು, ನಮ್ಮ ಸಂಸ್ಥೆ ವತಿಯಿಂದ ಮಾರುಕಟ್ಟೆ ದರದಲ್ಲಿ ನೇರವಾಗಿ ಕೊಬ್ಬರಿ ಖರೀದಿ ಮಾಡಲಾಗುವುದು ಎಂದು ತಿಪಟೂರು ರೈತ ಉತ್ಪಾದಕ ಕಂಪನಿ ಮುಖ್ಯಸ್ಥ ಮಾದೀಹಳ್ಳಿ ದಯಾ ನಂದಸ್ವಾಮಿ ತಿಳಿಸಿದರು.

ನಗರದ ಹಾಸನ ರಸ್ತೆಯ ಸಿದ್ದರಾಮೇಶ್ವರ ನಗರದಲ್ಲಿರುವ ರೈತ ಉತ್ಪಾದಕ ಕಂಪನಿ ಕಚೇರಿಯಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿ ಉದೇಶಿಸಿ ಮಾತನಾಡಿದ ದಯಾನಂದಸ್ವಾಮಿ, ಕಸಬಾ ಹೋಬಳಿ ವ್ಯಾಪ್ತಿಯ ಆಸಕ್ತ ರೈತರು ಸೇರಿ ತಿಪಟೂರು ರೈತ ಉತ್ಪಾದಕ ಕಂಪನಿ ಸ್ಥಾಪಿಸಿ, ನಬಾರ್ಡ್ ಹಾಗೂ ಇಶಾ ಔಟ್ರೀಚ್ ನೆರವಿನೊಂದಿಗೆ ಕೆಲಸ ಆರಂಭಿಸಿದ್ದು,ರೈತರು ತಾವೇ ಬೆಳೆದ ವಸ್ತುಗಳ ಖರೀದಿ, ರೈತರಿಗೆ ಅಗತ್ಯವಿರುವ ಬೀಜ ಗೊಬ್ಬರ ಹಾಗೂ ಕೃಷಿ ಪರಿಕರಗಳ ಮಾರಾಟ ಮಾಡಲಾಗುತ್ತಿದೆ. ಅಲ್ಲದೇ ರೈತರಿಗೆ ನೆರವಾಗಬಲ್ಲ, ಕಾಳು ಮೆಣಸು, ಕೋಕಾ, ಎಲಕ್ಕಿ ಬೆಳೆಗಳ ಬೆಳೆಯಲು, ಮಾರ್ಗದರ್ಶನ ಹಾಗೂ ನೆರವು ನೀಡಲಾಗುತ್ತಿದೆ.ನಮ್ಮ ಸಂಸ್ಥೆಯಿಂದ ಗುಣಮಟ್ಟದ ಕೊಬ್ಬರಿ ಮಾರಾಟ ಮಾಡಲಾಗುತ್ತಿದ್ದು, ತಿಪಟೂರು ರೈತ



ಉತ್ಪಾದಕರ ಕಂಪನಿಯು ಕರ್ನಾಟಕ ರಫ್ತು ಮಂಡಳಿಗೆ ಕೊಬ್ಬರಿ ರವಾನೆ ಮಾಡುತ್ತಿದ್ದು, ಉತ್ತಮ ಗುಣಮಟ್ಟದ ಕೊಬ್ಬರಿ ರವಾನಿ ಮಾಡಲಾಗಿದೆ ಎಂದು ಪ್ರಶಂಸ ಪತ್ರವನ್ನು ಕಂಪನಿಗೆ ನೀಡಲಾಗಿದೆ.

ತಿಪಟೂರು ರೈತ ಉತ್ಪಾದಕರ ಸಂಘದ ವತಿಯಿಂದ ರೈತರಿಗೆ ಅನುಕೂಲಕರವಾಗುವಂತೆ ರೈತರ ಬೆಳೆದ ಕೊಬ್ಬರಿಯನ್ನು ಖರೀದಿಸಿ, ರವಾನೆ ಮಾಡಲಾಗುತ್ತಿದ್ದು, ಎಪಿಎಂಸಿ ಟೆಂಡರ್ ಆಧಾರಿತ ಬೆಲೆಯನ್ನು ರೈತರಿಗೆ ನೀಡಲಾಗುವುದು ಹಾಗೂ ರೈತರಿಗೋಸ್ಕರ ಸಂಘದ ವತಿಯಿಂದ ಉಚಿತವಾಗಿ ಮಣ್ಣಿನ ಪರೀಕ್ಷೆಗಳನ್ನು ಮಾಡಿ, ರೈತರ ಜಮೀನಿನ ಮಣ್ಣಿನ ಪರೀಕ್ಷೆ ಮಾಡಲಾಗುತ್ತಿದು, ಆಸಕ್ತ ರೈತರು ಅನುಕೂಲ ಪಡೆಯಬಹುದು ಎಂದು ತಿಳಿಸಿದರು.

ಇಶಾ ಫೌಂಡೇಷನ್ ಅಧಿಕಾರಿ ರಭಿಯಾ,ರೈತ ಉತ್ಪಾದಕ ಕಂಪನಿಯ ನಿರ್ದೇಶಕರಾದ ಈಚನೂರು ಶಿವಗಂಗಮ್ಮ, ತಡಸೂರು ಗಂಗಾಧರಯ್ಯ ಮತ್ತು ಗುಡಿಗೊಂಡನಹಳ್ಳಿ ವಸಂತಕುಮಾರ್ ಸೇರಿದಂತೆ ನಿರ್ದೇಶಕರು ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದರು.

# ಪ್ಯಾಕೇಜಿಂಗ್ ಕೈಗಾರಿಕೆಗೆ ಗಮನಾರ್ಹ ಮೈಲುಗಲ್ಲು

ಬೆಂಗಳೂರು: ಕಾರುಗೇಟೆಡ್ ಬಾಕ್ಸ್ ಉತ್ಪಾದಕರ ಒಕ್ಕೂಟ (ಎಫ್‌ಸಿಬಿಎಂ)ದ 52ನೇ ವಾರ್ಷಿಕ ಸಭೆ ಮತ್ತು ಪ್ರದರ್ಶನವನ್ನು ನಗರದಲ್ಲಿ ಉದ್ಘಾಟಿಸಲಾಗಿದೆ. ಭಾರತದಲ್ಲಿ ಕ್ಷಿಪ್ರಗತಿಯಲ್ಲಿ ಬೆಳೆಯುತ್ತಿರುವ ಕಾರುಗೇಟೆಡ್ ಪ್ಯಾಕೇಜಿಂಗ್ ಕೈಗಾರಿಕೆಗೆ ಇದು ಗಮನಾರ್ಹ ಮೈಲುಗಲ್ಲಾಗಿದೆ. ವಾರ್ಷಿಕವಾಗಿ ಸುಮಾರು 50,000 ಕೋಟಿ ರೂ. ಮಾರುಕಟ್ಟೆ ಗಾತ್ರ ಅಲ್ಲದೆ, ಶೇ.10-12ರಷ್ಟು ವಾರ್ಷಿಕ ಬೆಳವಣಿಗೆ ಹೊಂದಿರುವ ಕಾರುಗೇಟೆಡ್ ಬಾಕ್ಸ್ ಉತ್ಪಾದನಾ ಕ್ಷೇತ್ರವು ಮುಂದಿನ 5ರಿಂದ 10 ವರ್ಷಗಳಲ್ಲಿ ತನ್ನ ಮೇಲ್ಮುಖ ಬೆಳವಣಿಗೆಯನ್ನು ಮುಂದುವರಿಸಲು ಸಜ್ಜಾಗಿದೆ.

ಖ್ಯಾತ ರಕ್ಷಣಾ ಆರ್ಥಿಕ ತಜ್ಞ ಮತ್ತು ಇನ್‌ಸ್ಟಿಟ್ಯೂಟ್ ಆಫ್ ಪೀಸ್ ಎಂಡ್ ಕಾನ್‌ಫ್ಲಿಕ್ಟ್ ಸ್ಟಡೀಸ್‌ನ ಹಿರಿಯ ಫೆಲೊ ಆಗಿರುವ ಅಭಿಜಿತ್ ಅಯ್ಯರ್ ಮಿತ್ರ ಅವರು ಈ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿದ್ದು, ಉದ್ಘಾಟನಾ ಭಾಷಣ ಮಾಡಿದರು. ಸಿಗ್ನಿಫೈನಲ್ಲಿ ಗ್ರಾಹಕ ವ್ಯವಹಾರದ ಮುಖ್ಯಸ್ಥರಾದ ಸಿ. ಅರುಣ್ ಕುಮಾರ್ ಅವರು ಪ್ರಾಸ್ತಾವಿಕ ಭಾಷಣ ಮಾಡಿದರು. ಉದ್ಘಾಟನಾ ಸಮಾರಂಭದಲ್ಲಿ ಮುಂಚೂಣಿಯ ಉದ್ಯಮ ಪರಿಣತರು, ಉತ್ಪಾದಕರು ಮತ್ತು ನೀತಿ




ರೂಪಿಸುವವರು ಭಾಗವಹಿಸಿ ಕೈಗಾರಿಕೆಯನ್ನು ರೂಪಿಸುವ ಭವಿಷ್ಯದ ಒಲವುಗಳು ಮತ್ತು ಅದಕ್ಕೆ ಚಾಲನೆ ನೀಡುವ ಮುಖ್ಯ ಅಂಶಗಳನ್ನು ಕುರಿತು ಚರ್ಚಿಸಿದರು. ಸುಸ್ಥಿರತೆ, ದಕ್ಷತೆ ಮತ್ತು ನವೀನತೆಗಳಿಗೆ, ಆಹಾರ ಮತ್ತು ಪೇಯಗಳು, ವಿದ್ಯುನ್ಮಾನ ವಾಣಿಜ್ಯ ಮುಂತಾದ ಹಲವಾರು ಕೈಗಾರಿಕೆಗಳಲ್ಲಿ ಚಾಲನೆ ನೀಡುವಲ್ಲಿ ಈ ಕ್ಷೇತ್ರದ ಗಮನಾರ್ಹ ಪಾತ್ರವನ್ನು ಪ್ರಾಸ್ತಾವಿಕ ಭಾಷಣವು ಎತ್ತಿ ತೋರಿತ್ತು.

ಕಾರುಗೇಟೆಡ್ ಬಾಕ್ಸ್ ಉತ್ಪಾದನಾ ಕ್ಷೇತ್ರದಲ್ಲಿ 600ಕ್ಕೂ ಹೆಚ್ಚಿನ ಸ್ವಯಂಚಾಲಿತ ಘಟಕಗಳು ಮತ್ತು ಸುಮಾರು 7000 ಅರೆ ಸ್ವಯಂಚಾಲಿತ ಘಟಕಗಳನ್ನು ಭಾರತ ಹೊಂದಿರುತ್ತದೆ. ಈ ಕೈಗಾರಿಕೆ 5 ಲಕ್ಷಕ್ಕೂ ಹೆಚ್ಚಿನ ಜನರಿಗೆ ಉದ್ಯೋಗ ನೀಡಿದೆ. ವಾರ್ಷಿಕವಾಗಿ 20ಲಕ್ಷ ಕ್ರಾಫ್ಟ್ ಕಾಗದವನ್ನು ಕಾರುಗೇಟೆಡ್ ಬಾಕ್ಸ್‌ಗಳಾಗಿ ಸಂಸ್ಕರಿಸುತ್ತದೆ. ನಿರ್ದಿಷ್ಟವಾಗಿ ಆಹಾರ ಮತ್ತು ಪೇಯಗಳ ಉದ್ಯಮ ಸೇರಿದಂತೆ ಉತ್ಪನ್ನ ಸುರಕ್ಷತೆಯನ್ನು ಸುಧಾರಿಸುವಲ್ಲಿ ಈ ಚಟುವಟಿಕೆಯ ಕ್ಷೇತ್ರ ನಿರ್ಣಾಯಕವಾಗಿ ಬೆಳದಿದೆ. ಜೊತೆಗೆ ಇದು ಕ್ಷಿಪ್ರಗತಿಯಲ್ಲಿ ಬೆಳೆಯುತ್ತಿರುವ ವಿದ್ಯುನ್ಮಾನ ವಾಣಿಜ್ಯ ಮಾರುಕಟ್ಟೆಗೂ ಸೇವೆ ಸಲ್ಲಿಸುತ್ತಿದೆ.

ವಾರ್ಷಿಕವಾಗಿ ಭಾರತೀಯ ಪ್ಯಾಕೇಜಿಂಗ್ ಉದ್ಯಮ ಶೇ.22ರಿಂದ ಶೇ.25ರಷ್ಟು ಬೆಳವಣಿಗೆ ಹೊಂದುತ್ತಿರುವುದಾಗಿ ಅಂದಾಜು ಮಾಡಲಾಗಿದೆ. ಜೊತೆಗೆ ಕಾರುಗೇಟೆಡ್ ಪ್ಯಾಕಿಂಗ್ ಕೈಗಾರಿಕೆ ಶೇ.10-12ರಷ್ಟು ಬೆಳೆಯುವ ನಿರೀಕ್ಷೆ ಹೊಂದಲಾಗಿದೆ. ಭವಿಷ್ಯದಲ್ಲಿ ಹೆಚ್ಚು ದೊಡ್ಡದಾದ ಸ್ವಯಂಚಾಲಿತ ಘಟಕಗಳು ಮತ್ತು ಸುಧಾರಿತ ಯಂತ್ರಗಳ ಕಡೆಗೆ ಗಮನಾರ್ಹ ವರ್ಗಾವಣೆಯಾಗುವ ನಿರೀಕ್ಷೆಯನ್ನು ನಾವು ಹೊಂದಿದ್ದೇವೆ. ಇದರಿಂದ ಕೇವಲ ಉತ್ಪಾದನೆ ಮಾತ್ರ ಹೆಚ್ಚುವುದಲ್ಲದೆ, ಗ್ರಾಹಕರು ಮತ್ತು ವ್ಯವಹಾರಗಳ ವಿಕಸನಗೊಳ್ಳುತ್ತಿರುವ ಅಗತ್ಯವನ್ನು ಕೂಡ ಇದು ಪೂರೈಸಲಿದೆ.

# ಅಕ್ರಮ ಮದ್ಯ ಮಾರಾಟ: ನಾಲ್ವರ ಬಂಧನ

ಕಲಬುರಗಿ: ನಗರದ ನೂರಾನಿ ಮೊಹಲ್ಲಾ ಚೌಕ್ ಹತ್ತಿರದ ಮನೆಯ ಮುಂದಿನ ರಸ್ತೆಯ ಪಕ್ಕದಲ್ಲಿ ಮತ್ತು ರಾಮಜೀ ನಗರದ ಮಜೀದ್ ಹತ್ತಿರದ ಸಾರ್ವಜನಿಕ ರಸ್ತೆ ಪಕ್ಕದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ರೋಜಾ ಪೊಲೀಸ್ ಠಾಣೆ ಎಎಸ್‌ಐಗಳಾದ ಖಾಸಿಂ ಅಲಿ, ಗೌಸ್ ಪಾಶಾ ಮತ್ತು ಸಿಬ್ಬಂದಿ ದಾಳಿ ನಡೆಸಿ ನಾಲ್ವರನ್ನು ಬಂಧಿಸಿದ್ದಾರೆ.

ನೂರಾನಿ ಮೊಹಲ್ಲಾ ಚೌಕ್ ಹತ್ತಿರದ ಮನೆಯ ಮುಂದಿನ ರಸ್ತೆಯಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದ ರಾಮಜೀ ನಗರದ ಶ್ರೀಧರ್ ರಾಜನಾಳ (35) ಮತ್ತು ಶರಣಪ್ಪ ಬಿಲಗುಂದಿ (34) ಎಂಬುವವರನ್ನು ಬಂಧಿಸಿ 960 ರೂ.ಮೌಲ್ಯದ ಮದ್ಯ ಮತ್ತು 1250 ರೂ.ನಗದು, ರಾಮಜೀ ನಗರದ ಮಜೀದ್ ಹತ್ತಿರದ ಸಾರ್ವಜನಿಕ ರಸ್ತೆ ಪಕ್ಕದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದ ಗಣೇಶ ನಗರ ಹೌಸಿಂಗ್ ಬೋರ್ಡ್ ಕಾಲೋನಿಯ ಮಲ್ಲಿಕಾರ್ಜುನ ರೇವಣಸಿದ್ದಪ್ಪ (36) ಮತ್ತು ರಾಮಜೀ ನಗರದ ಸಿದ್ದು ಹಣಮಂತಪ್ಪ ವಚ್ಚಾ (34) ಎಂಬುವವರನ್ನು ಬಂಧಿಸಿ 1 ಸಾವಿರ ರೂ.ಮೌಲ್ಯದ ಮದ್ಯ ಮತ್ತು 1050 ರೂ.ನಗದು ಜಪ್ತಿ ಮಾಡಿದ್ದಾರೆ. ರೋಜಾ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಪ್ರಕರಣ ದಾಖಲಾಗಿದೆ.

# ತ್ರಿವಿಧ ದಾಸೋಹದ ಮಠಗಳ ಪರಂಪರೆ ಉಳಿಸಿ ಬೆಳೆಸಲು ಕರೆ

ಕೋಲಾರ: ಸಮಾಜದಲ್ಲಿ ಸಂಸ್ಕಾರವನ್ನು ಕಲಿಸಲು ಮಠಗಳು ಪ್ರಮುಖ ಪಾತ್ರವಹಿಸುತ್ತಿದೆ. ರಾಜ್ಯದಲ್ಲಿ ಸಿದ್ದಗಂಗ ಮಠ ಮತ್ತು ಸುತ್ತೂರು ದೇಶಿಕೇಂದ್ರ ಮಠಗಳು ಆಗ್ರ ಸ್ಥಾನದಲ್ಲಿದ್ದು ಶಿಕ್ಷಣದ ಜೊತೆಗೆ ತ್ರಿವಿಧ ದಾಸೋಹ ನಡೆಸಿ ಕೊಡುಗೆ ನೀಡಿವೆ ಎಂದು ಶ್ರೀಮದ್ ನಾಗಲಾಪುರ ವೀರಧರ್ಮ ಸಿಂಹಾಸನ ಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ತೇಜೇಶಲಿಂಗ ಶಿವಾಚಾರ್ಯ ಸ್ವಾಮಿಗಳು ತಿಳಿಸಿದರು.

ಮೈಸೂರು ಸುತ್ತೂರಿನ ಕ್ಷೇತ್ರವಾದ ಶ್ರೀ ವೀರ ಸಿಂಹಾಸನ ಮಹಾಸಂಸ್ಥಾನ ಮಠದ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳ ಸೂಚನೆ ಮೇರೆಗೆ ಸೂತ್ತೂರು ಜಾತ್ರಾ ಮಹೋತ್ಸವ ಪ್ರಚಾರ ರಥ ಯಾತ್ರೆಯನ್ನು ಸ್ವಾಗತಿಸಿದ ನಂತರ ನಗರದ ಮುಖ್ಯಬೀದಿಗಳಲ್ಲಿ ಮೆರವಣಿಗೆಯಲ್ಲಿ ಪಾಲ್ಗೊಂಡ ಅವರು, ನಗರದ ಅರಳೇಪೇಟೆಯಲ್ಲಿ ಶ್ರೀ ಬಸವೇಶ್ವರಸ್ವಾಮಿ ದೇವಾಲಯದಲ್ಲಿ ಭಕ್ತಾಧಿಗಳಿಗೆ ಆಶೀರ್ವಾಚನ ನೀಡಿ ಮಾತನಾಡಿದರು.




ಸಮಾಜದಲ್ಲಿ ಉತ್ತಮ ಸಂಸ್ಕಾರವನ್ನು ಬೆಳೆಸಲು ಮಠಗಳು ವಿದ್ಯಾರ್ಜನೆ ಮೂಲಕ ಕಲಿಸಲಾಗುತ್ತಿದೆ ಮಠಗಳನ್ನು ಬೆಳೆಸಲು ಭಕ್ತರೇ ಶಕ್ತಿಯಾಗಬೇಕೆಂದು ಕರೆ ನೀಡಿದರು. ನಗರದಲ್ಲಿ ಸಮಾಜವನ್ನು ಜಾಗೃತಿಗೊಳಿಸುವ ಕಾಯಕವನ್ನು ಮಾಲೂರಿನ ಬೆಳ್ಳಾವಿ ಮಠ ಹಾಗೂ ನಾಗಲಾಪುರ ಮಠಗಳು ಮಾಡುತ್ತಿದೆ. ಶರಣ ಶರಣೆಯರ ಬಳಗದಲ್ಲಿ ಜಾಗೃತಿ ಮೂಡಿಸುವಲ್ಲಿ ಮುಖಂಡರುಗಳ ಶ್ರಮ ಅಗತ್ಯವಾಗಿದೆ ಎಂದರು.

ಬೆಳ್ಳಾವಿ ಮಠದ ಶ್ರೀ ಮಹೇಂತೇಶ ಶಿವಾಚಾರ್ಯರು ಮಾತನಾಡಿ, ಸುತ್ತೂರು ಮಠ ಹಾಗೂ ಸಿದ್ದಗಂಗೆ ಮಠವನ್ನು ಪರಿಚಯಿಸುವುದು ಸೂರ್ಯ, ಚಂದ್ರರನ್ನು ಪರಿಚಯಿಸಿದಂತಾಗುವುದು ಇಂದಿನ ಎಲ್ಲಾ ಇಲಾಖೆಗಳಲ್ಲೂ ಇರುವ ಅಧಿಕಾರಿಗಳಲ್ಲಿ ಬಹುತೇಕರು ಈ ಎರಡು ಮಠಗಳಲ್ಲಿ ವಿದ್ಯಾರ್ಜನೆ ಮಾಡಿದವರೇ ಇದ್ದಾರೆ ಎಂದು ಅಭಿಪ್ರಾಯಪಟ್ಟರು.

ವೀರಶೈವ ಮಠಗಳು ವೀರಶೈವ ಧರ್ಮಕ್ಕೆ ಮಾತ್ರ ಮೀಸಲಿಲ್ಲ ಎಲ್ಲಾ ಧರ್ಮದವರಿಗೂ ತ್ರಿವಿಧ ದಾಸೋಹ ನೀಡುವ ಜತೆಗೆ ಉತ್ತಮ ಸಂಸ್ಕಾರ ಕಲಿಸುತ್ತಿದ್ದು, ಸಿದ್ದಗಂಗೆ ಹಾಗೂ ಸುತ್ತೂರು ಎರಡೂ ಮಠಗಳು ಸಮಾಜದ ಎರಡು ಕಣ್ಣುಗಳಿದ್ದಂತೆ ಎಂದರು.



ಸುವರ್ಣ ವಿಧಾನಸೌಧದಲ್ಲಿ ಚಳಿಗಾಲದ ಅಧಿವೇಶನದ ಕೊನೆಯ ದಿನದಂದು ಕಲಾಪದ ನಂತರದ ನಡೆದ ಘಟನೆಗಳು ವಿಧಾನಪರಿಷತ್ತು ಶಾಸಕ ಸಿ.ಟಿ ರವಿರವರ ಮತ್ತು ಭಾಜಪದ ವಿಧಾನ ಪರಿಷತ್ ಶಾಸಕರುಗಳ ಹಕ್ಕುಚ್ಯುತಿ ಆಗಿದೆ ಎಂದು ವಿಧಾನ ಪರಿಷತ್ ಶಾಸಕರು ಹಾಗೂ ರಾಜ್ಯ ಬಿಜೆಪಿ ಕಾರ್ಯದರ್ಶಿಗಳಾದ ಡಿ.ಎಸ್. ಅರುಣ್ ರವರು ಹಾಗೂ ಪರಿಷತ್ತಿನ ಶಾಸಕರಾದ ಎನ್. ರವಿಕುಮಾರ್ ರವರು ಹುಬ್ಬಳ್ಳಿಯಲ್ಲಿರುವ ನಿವಾಸದಲ್ಲಿ ವಿಧಾನ ಪರಿಷತ್ತಿನ ಸಭಾಪತಿಗಳನ್ನ ಭೇಟಿ ಮಾಡಿ ದೂರು ನೀಡಿ, ಪ್ರಕರಣದ ಬಗ್ಗೆ ತನಿಖೆ ನಡೆಸಿ ತಪ್ಪಿಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಂಡು ಶಾಸಕರಿಗೆ ಆಗಿರುವ ಹಕ್ಕುಚ್ಯುತಿಗೆ ನ್ಯಾಯ ದೊರಕಿಸಬೇಕೆಂದು ಕೋರಿದರು.



ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಬೆಂಗಳೂರಿನ ರಂಗಕಹಳೆ ವತಿಯಿಂದ ಇದೇ 28 ಮತ್ತು 29ರಂದು ಕನಕಪುರದ ಡಾ.ಬಿ.ಆರ್.ಅಂಬೇಡ್ಕರ್ ಪುರಭವನದಲ್ಲಿ ಆಯೋಜಿಸಲಾಗಿರುವ 23ನೇ ಕುವೆಂಪು ನಾಟಕೋತ್ಸವದ ಕಾರ್ಯಕ್ರಮದ ಪೋಸ್ಟರ್‌ಗಳನ್ನು ಜಿಲ್ಲಾಧಿಕಾರಿ ಯಶವಂತ್.ವಿ.ಗುರುಕರ್ ಗುರುವಾರ ಕಚೇರಿಯಲ್ಲಿ ಬಿಡುಗಡೆ ಮಾಡಿದರು. ಈ ವೇಳೆ ಅಪರ ಡಿಸಿ ಆರ್.ಚಂದ್ರಯ್ಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕೆ.ಸತೀಶ್, ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಬಿ.ಟಿ.ನಾಗೇಶ್, ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಅಧ್ಯಕ್ಷ ಬಿ.ಟಿ.ದಿನೇಶ್, ಸಂಚಾಲಕ ಬಿ.ಟಿ.ರಾಜೇಂದ್ರ, ಸಾಹಿತಿ ಡಾ.ಬೈರೇಗೌಡ, ರಂಗಕಹಳೆ ಸಂಸ್ಥೆಯ ಸಂಚಾಲಕ ಓಹಿಲೇಶ ಲಕ್ಷ್ಮಣ್ ಹಾಗೂ ಪೂಜಾ ಓಹಿಲೇಶ ಉಪಸ್ಥಿತರಿದ್ದರು.

# ‘ಕಲ್ಲಹಳ್ಳಿ ಗ್ರಾಂ.ಪಂ. ವ್ಯವಸ್ಥೆ ನೋಡಿ ಬೇಸರ’

ಹುಣಸೂರು: ತಾಲ್ಲೂಕಿನ ಕಲ್ಲಹಳ್ಳಿ ಗ್ರಾಮ ಪಂಚಾಯಿತಿಗೆ ಜಿ.ಪಂ. ಸಿಇಒ ಕೆ.ಎಂ.ಗಾಯಿತ್ರಿ ಭೇಟಿ ನೀಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಆಡಳಿತ ವ್ಯವಸ್ಥೆ ಕುರಿತು ಜನಪ್ರತಿನಿಧಿಗಳು ಹಾಗೂ ಪಿಡಿಒ ಅವರೊಂದಿಗೆ ಸಭೆ ನಡೆಸಿ ಅಭಿವೃದ್ಧಿ ಕುರಿತಂತೆ ಚರ್ಚಿಸಿದರು. ಗ್ರಾಮ ಪಂಚಾಯಿತಿ ಕಟ್ಟಡಗಳ ಉನ್ನತೀಕರಣಕ್ಕಾಗಿ ಸರ್ಕಾರ ಸಾಕಷ್ಟು ಸಹಾಯ ನೀಡುತ್ತಿದ್ದರೂ ಇಂದಿಗೂ ಸಣ್ಣ ಗ್ರಾಮ ಪಂಚಾಯಿತಿಯಲ್ಲಿ ಕೆಲಸ ಮಾಡುತ್ತಿರುವ ಕಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯವಸ್ಥೆ ನೋಡಿ ಬೇಸರ ವ್ಯಕ್ತಪಡಿಸಿದರು.

ಇಂದಿಗೂ ಅರಸು ಅವರ ಜಾಗದಲ್ಲಿ ಪಂಚಾಯಿತಿ ಕಾರ್ಯಕಲಾಪಗಳು ನಡೆಯುತ್ತಿದ್ದು, ಸರ್ಕಾರದ ಜಾಗದಲ್ಲಿ ಸ್ವಂತ ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಾಣಕ್ಕೆ ಹಣದ ಲಭ್ಯತೆ ಇದ್ದರೂ, ಸ್ವಂತ ಕಟ್ಟಡ ಮತ್ತು ಬಾಪೂಜಿ ಸೇವಾ ಕೇಂದ್ರ ವ್ಯವಸ್ಥೆ ಸರಿಯಾದ ವ್ಯವಸ್ಥೆ ಇರುವುದಿಲ್ಲ. ಹಾಗಾಗಿ ಇರುವ ಅಡೆತಡೆಗಳನ್ನು ನಿವಾರಿಸಲು ಗ್ರಾಮದ ಮುಖಂಡರು, ಜನಪ್ರತಿನಿಧಿಗಳು ಸಭೆ ನಡೆಸುವ ಮೂಲಕ ಒಮ್ಮತದ ನಿರ್ಧಾರದೊಂದಿಗೆ ಹೊಸ ಕಟ್ಟಡ ನಿರ್ಮಾಣಕ್ಕೆ ಮುಂದಾಗಬೇಕೆಂದು ಸಲಹೆ ನೀಡಿದರು.

ಜನರೇ ಗ್ರಾಮದ ಜನಪ್ರತಿನಿಧಿಗಳನ್ನು ಆಯ್ಕೆ ಮಾಡಿದ್ದು, ಪಂಚಾಯಿತಿಗಳಲ್ಲಿರುವ ಭಿನ್ನಾಭಿಪ್ರಾಯಗಳನ್ನು ಸರಿಪಡಿಸಿ, ಗ್ರಾಮದ ಸುಸ್ಥಿರ ಅಭಿವೃದ್ಧಿಗಾಗಿ ಶ್ರಮಿಸುವುದು ಜನಪ್ರತಿನಿಧಿಗಳ ಜವಾಬ್ದಾರಿ ಮತ್ತು ಕರ್ತವ್ಯವಾಗಿರುತ್ತದೆ. ಹಾಗಾಗಿ ಪಂಚಾಯಿತಿ ವ್ಯಾಪ್ತಿಯಲ್ಲಿ ಸಾರ್ವಜನಿಕ ಸೇವೆಗೆ ಯಾವುದೇ ತೊಂದರೆಯಾಗದಂತೆ ಅಭಿವೃದ್ಧಿ ಕೆಲಸಗಳನ್ನು ನಿರ್ವಹಿಸಿಕೊಂಡು ಹೋಗಬೇಕಾಗಿ ನಿರ್ದೇಶಿಸಿದರು.

ಇನ್ನು ಶಾಲಾ ಮಕ್ಕಳಿಗೆ ಬಸ್ಸಿನ ವ್ಯವಸ್ಥೆ ಕಲ್ಪಿಸುವಂತೆ ಸದಸ್ಯರೆಲ್ಲರೂ ಮನವಿ ಮಾಡಿದ ಹಿನ್ನೆಲೆ, ಸ್ಥಳದಲ್ಲೇ ಕೆ.ಎಸ್.ಆರ್.ಟಿ.ಸಿ ಅಧಿಕಾರಿಗಳೊಂದಿಗೆ ಚರ್ಚಿಸಿ ಪರಿಹರಿಸಿದರು.

ಮ-ನರೇಗಾ ಯೋಜನೆಯಡಿ ಸಮುದಾಯ ಕಾಮಗಾರಿಗಳನ್ನು ಕೈಗೊಳ್ಳುವ ಮೂಲಕ ಹಾಗೂ ಚರಂಡಿ ನೀರು ನೇರ ಕೆರೆಗೆ ಹರಿದು ಹೋಗುವುದನ್ನು ತಪ್ಪಿಸಲು ಸಮುದಾಯ ಬಚ್ಚಲುಗುಂಡಿ ನಿರ್ಮಾಣಕ್ಕೆ ಮುಂದಾಗಬೇಕು. ಸಂಜೀವಿನಿ ಒಕ್ಕೂಟದಡಿ ಮಹಿಳೆಯರು ತಮ್ಮ ಸ್ವಾವಲಂಬಿ ಜೀವನ ನಿರ್ಮಿಸಿಕೊಳ್ಳುವುದಕ್ಕೆ ಸಂಜೀವಿನಿ ಶೆಡ್ ನಿರ್ಮಾಣ ಹಾಗೂ ಕಸವನ್ನು ಎಲ್ಲೆಂದರಲ್ಲಿ ಎಸೆಯುವ ಬದಲು ಘನ ತ್ಯಾಜ್ಯ ವಿಲೇವಾರಿ ನಿರ್ಮಾಣ ಮಾಡಿಕೊಂಡು ಸಮರ್ಪಕವಾಗಿ ಕಸ ವಿಲೇವಾರಿ ಮಾಡಲು ಸೂಕ್ತ ಜಾಗ ಗುರುತಿಸಿ ಕ್ರಮ ವಹಿಸಲು ಪಿಡಿಒ ಅವರಿಗೆ ಸೂಚಿಸಿದರು.

# ಜಿಲ್ಲಾ ಕಾರ್ಯಕರ್ತರಿಗೆ ಎಐಸಿಸಿ ಅಧಿವೇಶಕ್ಕೆ ತೆರಳಲು ಕರೆ



ಚಿತ್ರದುರ್ಗ: ಇದೇ 26, 27 ರಂದು ಬೆಳಗಾವಿಯಲ್ಲಿ ನಡೆಯುವ ಎಐಸಿಸಿ ಅಧಿವೇಶನದ ಶತಮಾನೋತ್ಸವಕ್ಕೆ ದೇಶದ ನಾನಾ ರಾಜ್ಯಗಳಿಂದ ಮುಖ್ಯಮಂತ್ರಿಗಳು, ಸಚಿವರು, ಸಂಸದರು, ಶಾಸಕರು ಪಾಲ್ಗೊಳ್ಳುತ್ತಿರುವುದರಿಂದ ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ವಿರೋಧಿಗಳಿಗೆ ಶಕ್ತಿ ಪ್ರದರ್ಶಿಸುವಂತೆ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಚಿತ್ರದುರ್ಗ ಉಸ್ತುವಾರಿ ರಾಮಕೃಷ್ಣ ಕರೆ ನೀಡಿದರು.

ಎ.ಐ.ಸಿ.ಸಿ. ಅಧಿವೇಶನ ಶತಮಾನೋತ್ಸವದ ಅಂಗವಾಗಿ ಕಾಂಗ್ರೆಸ್ ಕಚೇರಿಯಲ್ಲಿ ಕರೆಯಲಾಗಿದ್ದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು ದೇಶದ ಸ್ವಾತಂತ್ರಕ್ಕಾಗಿ ಹೋರಾಡಿದ ಮಹಾತ್ಮಗಾಂಧಿ 1924, ಡಿ. 26, 27 ರಂದು ಬೆಳಗಾವಿಯಲ್ಲಿ ಎ.ಐ.ಸಿ.ಸಿ. ಅಧಿವೇಶನ ನಡೆಸಿ ನೂರು ವರ್ಷಗಳಾಗಿರುವುದರಿಂದ ಶತಮಾನೋತ್ಸವವನ್ನು ಆಚರಿಸಲಾಗುವುದು. ಜಿಲ್ಲೆಯಿಂದ ಕಾರ್ಯಕರ್ತರು ಸ್ವಯಂ ಪ್ರೇರಿತರಾಗಿ ಅಧಿವೇಶನಕ್ಕೆ ತೆರಳಬೇಕು. ಮುಂದೆ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲಿ ಪಕ್ಷ ಗೆಲ್ಲಬೇಕಾಗಿರುವುದರಿಂದ ಸಂಘಟನೆಗೆ ಒತ್ತು ಕೊಡಬೇಕು ಎಂದು ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜೀರ್ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ, ಪ್ರಧಾನ ಕಾರ್ಯದರ್ಶಿ ಸಂಪತ್‌ಕುಮಾರ್, ಡಿ.ಎನ್.ಮೈಲಾರಪ್ಪ, ಉಪಾಧ್ಯಕ್ಷ ಎಸ್. ಎನ್.ರವಿಕುಮಾರ್, ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ಎಸ್.ಜಯಣ್ಣ, ಹನುಮಲಿ ಷಣ್ಮುಖಪ್ಪ, ಲಿಡ್ಕರ್ ಮಾಜಿ ಚೇರ್ಮನ್ ಓ.ಶಂಕರ್, ಪರಿಶಿಷ್ಟ ಪಂಗಡ ವಿಭಾಗದ ಅಧ್ಯಕ್ಷ ಮಂಜುನಾಥ್, ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಗೀತನಂದಿನಿಗೌಡ, ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ, ಪ್ರಚಾರ ಸಮಿತಿ ಅಧ್ಯಕ್ಷ ಕೃಷ್ಣಮೂರ್ತಿ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಆರ್.ನರಸಿಂಹರಾಜ, ನ್ಯಾಯವಾದಿ ಶಶಾಂಕ್, ಟಿ.ಸ್ವಾಮಿ, ಅಲ್ಪಸಂಖ್ಯಾತ ವಿಭಾಗದ ಅಧ್ಯಕ್ಷ ಸೈಯದ್ ಖುದ್ದೂಸ್, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್, ಗ್ಯಾರೆಂಟಿ ಅನುಷ್ಠಾನಗಳ ಸಮಿತಿ ಜಿಲ್ಲಾಧ್ಯಕ್ಷ ಆರ್.ಶಿವಣ್ಣ, ತಾಲ್ಲೂಕು ಅಧ್ಯಕ್ಷ ಆರ್.ಪ್ರಕಾಶ್, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಯು.ಲಕ್ಷ್ಮಿಕಾಂತ್, ಪ್ರಕಾಶರಾಮನಾಯ್ಕ, ಕರ್ನಾಟಕ ಪ್ರದೇಶ ಮಹಿಳಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮುನಿರಾ ಎ.ಮಕಾಂದಾರ್, ಎ.ಜಾಕಿರ್‌ಹುಸೇನ್ ಇದ್ದರು.

# ಸಾರ್ವಜನಿಕ ಶೌಚಾಲಯಗಳ ನಿರ್ಮಾಣಕ್ಕೆ ಸ್ಥಳ ಗುರುತಿಸಲು ಸೂಚನೆ

ಬೆಂಗಳೂರು: ಮಹದೇವಪುರ ವಲಯ ವ್ಯಾಪ್ತಿಯಲ್ಲಿ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡಲು ಸ್ಥಳ ಗುರುತಿಸಲು ಮುಖ್ಯ ಆಯುಕ್ತ ತುಷಾರ್ ಗಿರಿ ನಾಥ್ ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಹದೇವಪುರ ವಲಯ ವ್ಯಾಪ್ತಿಯಲ್ಲಿ "ಮುಖ್ಯ ಆಯುಕ್ತರ ನಡೆ ವಲಯದ ಕಡೆ"ಯಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದ ವೇಳೆ ಸಾರ್ವಜನಿಕರೊಬ್ಬರು, ಮಹದೇವಪುರ ವಲಯ ವ್ಯಾಪ್ತಿಯಲ್ಲಿ ಕೆಲವೆಡೆ ಸಾರ್ವಜನಿಕ ಶೌಚಾಲಯವನ್ನು ನಿರ್ಮಾಣ ಮಾಡಿಕೊಡಲು ಮನವಿ ಮಾಡಿದರು.

ಅದಕ್ಕೆ ಮುಖ್ಯ ಆಯುಕ್ತರು ಪ್ರತಿಕ್ರಿಯಿಸಿ, ಪಾಲಿಕೆ ವ್ಯಾಪ್ತಿಯಲ್ಲಿ ಹೊಸದಾಗಿ 200 ಹೈಟೆಕ್ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ. ಈ ಸಂಬಂಧ ಮಹದೇವಪುರ ವಲಯ ವ್ಯಾಪ್ತಿಯಲ್ಲಿ ಖಾಲಿ ಜಾಗ/ಸಾರ್ವಜನಿಕ ಸ್ಥಳಗಳನ್ನು ಗುರುತಿಸಬೇಕು. ಆ ಬಳಿಕ ಟೆಂಡರ್ ಕರೆದು ಕಾಲಮಿತಿಯೊಳಗಾಗಿ ಶೌಚಾಲಯಗಳನ್ನು ನಿರ್ಮಾಣ ಮಾಡಲು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಕೆ.ಆರ್ ಪುರ ವ್ಯಾಪ್ತಿಯ ಆರ್.ಎನ್ ಎಸ್ ಕಾಲೋನಿ, ಜೈಭುವನೇಶ್ವರಿ ಬಡಾವಣೆ, ಬನಶಂಕರಿ ಬಡಾವಣೆ ಸೇರಿದಂತೆ ಅಕ್ಕ-ಪಕ್ಕದ ಬಡಾವಣೆಗಳಲ್ಲಿ ಚರಂಡಿಗಳಿಂದ ರಸ್ತೆಗಳ ಮೇಲೆ ನೀರು ಹರಿಯುತ್ತಿದ್ದು, ಅದರಿಂದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸೊಳ್ಳೆಗಳ ಕಾಟ ಹೆಚ್ಚಾಗಿದ್ದು, ಅದನ್ನು ನಿಯಂತ್ರಿಸಲು ಕೇಳಿದ್ದಕ್ಕೆ ಪ್ರತಿಕ್ರಿಯಿಸಿ, ವಲಯ ಆಯುಕ್ತರು ಹಾಗೂ ವಲಯ ಜಂಟಿ ಆಯುಕ್ತರು ಸ್ಥಳ ಪರಿಶೀಲನೆ ನಡೆಸಿ ಸೊಳ್ಳೆ ಉತ್ಪತ್ತಿ ತಾಣಗಳನ್ನು ಗುರುತಿಸಿ ಔಷಧಿ ಸಿಂಪಡಣೆ ಹಾಗೂ ಫಾಗಿಂಗ್ ಮಾಡಿ ಸೊಳ್ಳೆ ನಿಯಂತ್ರಣಕ್ಕೆ ಸೂಕ್ತ ಕ್ರಮ ಕೈಗೊಳ್ಳಲು ಆರೋಗ್ಯ ವೈದ್ಯಾಧಿಕಾರಿಗೆ ಸೂಚನೆ ನೀಡಿದರು.

ಕಳೆದ ಬಾರಿ ನಾಗರೀಕರಿಂದ ಬಂದಂತಹ ಬಹುತೇಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ. ಇನ್ನು ಕೆಲ ಸಮಸ್ಯೆಗಳು ಲಾಂಗ್ ಟರ್ಮ್ ಸಮಸ್ಯೆಗಳಾಗಿದ್ದು, ಅವುಗಳನ್ನು ಕೂಡಾ ಶೀಘ್ರಗತಿಯಲ್ಲಿ ಪೂರ್ಣಗೊಳಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಇಂದಿನ ನಡೆದ ಕಾರ್ಯಕ್ರಮದಲ್ಲಿ ನಾಗರೀಕರಿಂದ 35ಕ್ಕೂ ಹೆಚ್ಚು ದೂರುಗಳು ಬಂದಿದ್ದು, ಅವುಗಳನ್ನು ಕೂಡಾ ಶೀಘ್ರ ಪೂರ್ಣಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.

# ವಸತಿ ನಿಲಯಗಳಿಗೆ ತಹಸೀಲ್ದಾರ್ ದಿಢೀರ್ ಭೇಟಿ

ಗೌರಿಬಿದನೂರು: ನಗರದ ಸಮಾಜ ಕಲ್ಯಾಣ ಇಲಾಖೆಯ ಪರಿಶಿಷ್ಟ ಜಾತಿ ಬಾಲಕರ ವಿದ್ಯಾರ್ಥಿ ನಿಲಯ ಮತ್ತು ಬಾಲಕಿಯರ ಮೆಟ್ರಿಕ್ ನಂತರ ವಸತಿ ನಿಲಯ ಹಾಗೂ ಸಾರ್ವಜನಿಕ ಆಸ್ಪತ್ರೆಗೆ ತಹಸೀಲ್ದಾರ್ ಮಹೇಶ್ ಎಸ್.ಪತ್ರಿ ಮತ್ತು ನಗರಸಭಾಧ್ಯಕ್ಷ ಲಕ್ಷ್ಮೀನಾರಾಯಣ ರವರುಗಳು ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸರಕಾರ ಪ.ಜಾ., ಪ.ಪಂ. ಮತ್ತು ಹಿಂದುಳಿದ ವರ್ಗಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ವಸತಿ ನಿಲಯಗಳನ್ನು ವ್ಯವಸ್ಥಿತವಾಗಿ ನಡೆಸಲಾಗುತ್ತಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದುವಂತೆ ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ವಸತಿ ನಿಲಯದಲ್ಲಿ ಕಾಲ ಕಾಲಕ್ಕೆ ವೇಳಾಪಟ್ಟಿಯಂತೆ ತಿಂಡಿ ಮತ್ತು ಊಟವನ್ನು ನೀಡುತ್ತಿದ್ದಾರಾ, ರುಚಿ ಮತ್ತು ಶುಚಿಯಾಗಿದೆಯಾ ಎಂದು ವಿದ್ಯಾರ್ಥಿಗಳನ್ನು ತಹಸೀಲ್ದಾರ್ ಪ್ರಶ್ನಿಸಿದರು ? ಅದಕ್ಕೆ ವಿದ್ಯಾರ್ಥಿಗಳು ಸಾರ್.. ಈ ಹಿಂದೆ ತಾವು ಬೇಟಿ ನೀಡಿದ ಬಳಿಕ ವಸತಿ ನಿಲಯಲ್ಲಿ ಗುಣಮಟ್ಟದ ತಿಂಡಿ ಮತ್ತು ಊಟವನ್ನು ವೇಳಾ ಪಟ್ಟಿಯಂತೆ ವಿತರಿಸಲಾಗುತ್ತಿದೆ, ವಸತಿ ನಿಲಯಲ್ಲಿ ಇಂಟರ್‌ನೆಟ್ ವ್ಯವಸ್ಥೆ ಕಲ್ಪಿಸಬೇಕು ಎಂದು ವಿದ್ಯಾರ್ಥಿಗಳು ತಿಳಿಸಿದರು.

ವಸತಿ ನಿಲಯದಲ್ಲಿ ಇಂಟರ್‌ನೆಟ್ ವ್ಯವಸ್ಥೆಯನ್ನು ಕಲ್ಪಿಸುವ ವ್ಯವಸ್ಥೆಯನ್ನು ಶೀಘ್ರವೇ ಮಾಡಲಾಗುವುದು, ವಸತಿ ನಿಲಯದ ಪಾಲಕರು ಬದ್ಧತೆಯಿಂದ ಕರ್ತವ್ಯ ನಿರ್ವಹಿಸಬೇಕು ವಿದ್ಯಾರ್ಥಿಗಳಿಗೆ ತಿಂಡಿ , ಊಟದಲ್ಲಿ ಯಾವುದೇ ರೀತಿ ತೊಂದರೆಯಾಗದಂತೆ ಮುನ್ನೆಚ್ಚರಿಕೆ ಕ್ರಮವನ್ನು ತೆಗೆದುಕೊಳ್ಳಬೇಕು ಎಂದು ಸೂಚಿಸಿದರು.

ವಸತಿ ನಿಲಯದಲ್ಲಿ ವಿದ್ಯಾರ್ಥಿಗಳೊಂದಿಗೆ ದೋಸೆ ಚಟ್ನಿಯನ್ನು ತಹಸೀಲ್ದಾರ್ ಮತ್ತು ನಗರಸಭಾಧ್ಯಕ್ಷರು ಸವಿದರು, ಇದೇ ರೀತಿ ರುಚಿಯನ್ನು ಕಾಪಾಡಿಕೊಳ್ಳುವಂತೆ ಸೂಚಿಸಿದರು. ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಗೆ ಬೇಟಿ ನೀಡಿ ರೋಗಿಗಳ ಆರೋಗ್ಯವನ್ನು ವಿಚಾರಿಸಿದರು, ಗುಣಮಟ್ಟದ ಹಾಲು ಮತ್ತು ಬ್ರೆಡ್ ನೀಡುತ್ತಿದ್ದಾರೆ, ಕಾಲಕಾಲಕ್ಕೆ ವೈದ್ಯರು ತಪಾಸಣೆಗೆ ಬರುತ್ತಿದ್ದಾರಾ, ಔಷಧಿಗಳಿಗೆ ಚೀಟಿಗಳನ್ನು ಬರೆದುಕೊಡುತ್ತಾರೆ ಎಂದೆಲ್ಲಾ ರೋಗಿಗಳನ್ನು ಪ್ರಶ್ನಿಸಿದರು.

# ಶೈಕ್ಷಣಿಕ ಪ್ರಗತಿ, ಸಾಮಾಜಿಕ ಜವಾಬ್ದಾರಿ ಶಿಕ್ಷಕರ ಆದ್ಯ ಕರ್ತವ್ಯ

ಕೋಲಾರ: ಶಾಲೆಗಳಲ್ಲಿ ಶೈಕ್ಷಣಿಕ ಪ್ರಗತಿ ಹಾಗೂ ಸಾಮಾಜಿಕ ಜವಾಬ್ದಾರಿ ಶಿಕ್ಷಕರ ಆದ್ಯ ಕರ್ತವ್ಯ ಅದರಿಂದ ತಪ್ಪಿಸಿಕೊಳ್ಳಲಾಗದು ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ತಿಳಿಸಿದರು.

ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಶಿಕ್ಷಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಆಡಿಟೋರಿಯಂನಲ್ಲಿ ಆಯೋಜಿಸಲಾಗಿದ್ದ, ಜಿಲ್ಲೆಯ ವಿದ್ಯಾರ್ಥಿಗಳ ಎಸ್.ಎಸ್.ಎಲ್.ಸಿ ಪರೀಕ್ಷಾ ಪಲಿತಾಂಶ ಸುಧಾರಣೆ ಕುರಿತು ಕಾರ್ಯಾಗಾರ ಹಾಗೂ ಪರೀಕ್ಷಾ ಮಾರ್ಗದರ್ಶಿ ಪುಸ್ತಕ ಬಿಡುಗಡೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡುತ್ತಿದ್ದರು.



ಶಿಕ್ಷಣದ ಗುಣಮಟ್ಟ ಹೆಚ್ಚಿಸಲು ಜಿಲ್ಲೆಯಲ್ಲಿ ಹಾಕಿಕೊಂಡಿರುವ ಯೋಜನೆಗಳಲ್ಲಿ ಮುಖ್ಯ ಶಿಕ್ಷಕರಿಗೆ ಕಾರ್ಯಾಗಾರವು ಒಂದು ಯೋಜನೆಯಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಇಂತಹ ವಿದ್ಯಾರ್ಥಿಗಳಿಗೆ ಉಪಯೋಗವಾಗುವ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದೆ. ಅವುಗಳಲ್ಲಿ ವಿಷನ್ ಕೋಲಾರ, ಸ್ಪರ್ಧಾತ್ಮಕ ಪರೀಕ್ಷಗಳ ಕೈಪಿಡಿಗಳು, ಸಿಇಟಿ ಮತ್ತು ನೀಟ್ ಪುಸ್ತಕಗಳ ವಿತರಣೆ ಮುಂತಾದ ಕ್ರಮಗಳು ಮುಖ್ಯವಾದವು. ಅದೇ ನಿಟ್ಟಿನಲ್ಲಿ ಇಂದು ಎಸ್.ಎಸ್. ಎಲ್.ಸಿ ಮಾರ್ಗದರ್ಶಿ ಕೈದೀವಿಗೆ ಪುಸ್ತಕಗಳನ್ನು ವಿದ್ಯಾರ್ಥಿಗಳಕೈಗಿಡುತ್ತಿದೆ.ನೀಡಲಾದಪಠ್ಯಪರಿಕರಗಳನ್ನು ಸರಿಯಾಗಿ ಬಳಸಿಕೊಳ್ಳಬೇಕು ಎಂದರು. ಜಿಲ್ಲೆಯ 10 ಪ್ರೌಢಶಾಲೆಗಳಿಗೆ ಸ್ಮಾರ್ಟ್‌ಕ್ಲಾಸ್‌ಗಳನ್ನು ವಿತರಿಸದವರು. ಇದರ ಸಂಪೂರ್ಣ ಪ್ರಯೋಜನವನ್ನು ಪಡೆಯಬೇಕಾದರೆ ಮೊದಲು ಶಿಕ್ಷಕರು ಇದನ್ನು ಅರಿತಿರಬೇಕು. ಈ ಯೋಜನೆಯಡಿ ಲಭ್ಯವಿರುವ ಪಠ್ಯಾಂಶಗಳನ್ನು ಸರ್ಮಪಕವಾಗಿ ಅರ್ಥೈಸಿಕೊಂಡು ಮಕ್ಕಳಿಗೆ ಮನದಟ್ಟಾಗುವಂತೆ ಪಾಠ ಮಾಡಬೇಕು. ಶಿಕ್ಷಕರ ಕೊರತೆಯನ್ನು ಸ್ಮಾರ್ಟ್‌ಕ್ಲಾಸ್‌ಗಳ ಮೂಲಕ ನೀಗಿಸಿಕೊಳ್ಳಬೇಕು. ಶಾಲೆಗಳಲ್ಲಿ ಕಾಣುವ ಫಲಿತಾಂಶ ವಿಫಲತೆಗೆ ಮುಖ್ಯ ಶಿಕ್ಷಕರು ಜವಾಬ್ದಾರಿ ಹೊರಬೇಕು. ಮಕ್ಕಳ ಶೈಕ್ಷಣಿಕ ಗುಣ-ಮಟ್ಟವನ್ನು ಕಾಪಾಡುವುದರ ಜೊತೆಗೆ ಸಮಾಜದ ಓರೆಕೋರೆಗಳನ್ನು ಚಿಗುರಿನಲ್ಲೇ ತಿದ್ದುವ ಕೆಲಸ ಮಾಡಬೇಕು. ಪ್ರಸ್ತುತ ಇರುವ ಪಲಿತಾಂಶದ ಸ್ಥಾನವನ್ನು ಉನ್ನತದರ್ಜೆಗೇರಿಸಲು ಪ್ರಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಇತ್ತೀಚಿಗೆ ನಡೆದ ಶಾಲಾ ಮಕ್ಕಳ ದುರಂತವನ್ನು ನೆನಪಿಸಿದವರು ಶಿಕ್ಷಕರು ತಮ್ಮ ವಿದ್ಯಾರ್ಥಿಗಳ ಕಾಳಜಿ ಮಾಡಬೇಕು. ಜೊತೆ-ಜೊತೆಗೆ ಮಕ್ಕಳಲ್ಲಿ ನೈತಿಕ ಮೌಲ್ಯಗಳನ್ನು ಕಲಿಸಬೇಕು. ಸರಿ-ತಪ್ಪು ವಿವೇಚನೆ ಮಾಡುವ ವಿಧಾನವನ್ನು ಕಲಿಸಬೇಕು. ದಾರಿ ತಪ್ಪಲು ಬಿಡಬಾರದು ವಿಶೇಷವಾಗಿ ಹೆಣ್ಣು ಮಕ್ಕಳನ್ನು ನೋಡುವ ದೃಷ್ಟಿಕೋನ ಬದಲಿಸಬೇಕು. ಸರಿ-ತಪ್ಪನ್ನು ತಿಳಿಸಿಕೊಡಬೇಕು. ಹೆಣ್ಣು ಮಕ್ಕಳಿಗೆ ಗೌರವ ಕೊಡುವುದನ್ನು ವಿದ್ಯಾರ್ಥಿ ದೆಸೆಯಿಂದ ಕಲಿಸಬೇಕು. ಹದಿಹರೆಯದ ಹೆಣ್ಣು ಮಕ್ಕಳಿಗೆ ಪ್ರತ್ಯೇಕವಾಗಿ ನೈರ್ಮಲ್ಯ ಮತ್ತು ಸ್ವ-ಶುಚಿತ್ವ ಕುರಿತು ನುರಿತ ವೈದ್ಯರಿಂದ ತರಗತಿಗಳನ್ನು ಆಯೋಜಿಸಬೇಕು ಎಂದರು.

ಪ್ರಸ್ತಾವಿಕವಾಗಿ ಡಯಟ್ ಪ್ರಾಂಶುಪಾಲ ಚಂದ್ರಪ್ಪ ಅವರು ಮಾತನಾಡಿ, ಪ್ರತಿವರ್ಷ ಗುಣಾತ್ಮಕ ಫಲಿತಾಂಶ ನೀಡಲು ಇಲಾಖೆ ವತಿಯಿಂದ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಆದಾಗ್ಯೂ ಸಾಧನೆ ಮಟ್ಟ ಕಡಿಮೆಯಾಗಿದೆ. ಮುಖ್ಯ ಶಿಕ್ಷಕರು ಮೊದಲು ತಮ್ಮ ಶಾಲೆಗಳಲ್ಲಿನ ಸಮಸ್ಯೆಗಳನ್ನು ತಿಳಿದುಕೊಳ್ಳಬೇಕು. ನಂತರ ಅದಕ್ಕೆ ಪರಿಹಾರಗಳನ್ನು ಕಂಡುಕೊಳ್ಳಬೇಕು. ಪ್ರಸ್ತುತ ನಮ್ಮಲಿರುವ ಮನಃಸ್ಥಿತಿಯನ್ನು ಬದಲಿಸಿಕೊಂಡು ಇಚ್ಛಾ ಶಕ್ತಿಯನ್ನು ಬೆಳಸಿಕೊಳ್ಳಬೇಕು. ಶ್ರದ್ಧೆಯಿಂದ ಕಲಿಸಿದರೆ ಎಲ್ಲಾ ವಿದ್ಯಾರ್ಥಿಗಳು ಪಾಸಾಗಲಬಲ್ಲರು. ಪ್ರತಿ ವಿದ್ಯಾರ್ಥಿಗೂ, ಪ್ರತಿ ಶಿಕ್ಷಕರು ಕಲಿಯಲು ಸಹಕಾರ ನೀಡಬೇಕು. ಆಗ ಕಾರ್ಯಕ್ಷೇತ್ರದಲ್ಲಿ ಸಾಧನೆ ಮಾಡಲು ಸಹಾಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ವಿದ್ಯಾರ್ಥಿಗಳ ಕೈಪಿಡಿ ತಯಾರಿಸುವಲ್ಲಿ ಸಹಕರಿಸಿದ ರಾಜ್ಯದ ವಿವಿಧ ಭಾಗಗಳಿಂದ ಆಯ್ದ ಶಿಕ್ಷಕರ ತಂಡವನ್ನು ಸತ್ಕರಿಸಲಾಯಿತು.

ಕಾರ್ಯಾಗಾರದಲ್ಲಿ ಶಾಲಾ-ಶಿಕ್ಷಣ ಉಪ ನಿರ್ದೇಶಕ ಕೃಷ್ಣಮೂರ್ತಿ, ಡಯಟ್ ತಾಂತ್ರಕಾಧಿಕಾರಿ ನಾರಾಯಣಸ್ವಾಮಿ, ಅಲ್ಪಸಂಖ್ಯಾತರ ಇಲಾಖೆಯ ಜಿಲ್ಲಾ ಅಧಿಕಾರಿ ಮೈಲಾರಪ್ಪ ಮತ್ತು ಸಹಾಯಕ ನಿರ್ದೇಶಕರಾದ ಮುರಳಿ, ಶಾಲಾ ಶಿಕ್ಷಣ ಉಪನಿದೇಶಕರ ಕಚೇರಿ ಸಿಬ್ಬಂದಿ, ಉಪನ್ಯಾಸಕರು, ಎಲ್ಲಾ ಬಿ.ಆರ್.ಸಿ ಮತ್ತು ಬಿ.ಇ.ಓ, ಜಿಲ್ಲೆಯ ಸುಮಾರು 389 ಶಾಲೆಯ ಮುಖ್ಯ ಶಿಕ್ಷಕರು ಉಪಸ್ಥಿತರಿದ್ದರು.

# ತೋಟಗಾರಿಕೆ ಡಿಪ್ಲೋಮೊ ಪ್ರವೇಶ: ವಾಕ್ ಇನ್ ಕೌನ್ಸಿಲಿಂಗ್

ಶ್ರೀನಿವಾಸಪುರ: ತಾಲ್ಲೂಕಿನ ಹೊಗಳಗೆರೆ ತೋಟಗಾರಿಕೆ ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರದಲ್ಲಿ 2024 – 25ನೇ ಸಾಲಿನಲ್ಲಿ ಎರಡು ವರ್ಷದ ತೋಟಗಾರಿಕೆ ಡಿಪ್ಲೊಮಾ ಕೋರ್ಸ್ ಪ್ರಾರಂಭಿಸಲು ಸರ್ಕಾರ ಅನುಮತಿ ನೀಡಿದ್ದು, ಅದರಂತೆ ಪ್ರವೇಶಾತಿ ನಡೆಯುತ್ತಿದೆ. ಮೊದಲ ಸುತ್ತಿನಲ್ಲಿ ಭರ್ತಿಯಾಗದೇ ಉಳಿದಿರುವ ಸೀಟುಗಳಿಗೆ ದಿನಾಂಕ 3.1.2025 ರಂದು ಅಂತಿಮವಾಗಿ ವಾಕ್ ಇನ್ ಕೌನ್ಸಿಲಿಂಗ್ ಮೂಲಕ ಭರ್ತಿಮಾಡಲಾಗುವುದು. ಬಾಗಲಕೋಟೆಯ ತೋಟಗಾರಿಕಾ ವಿಶ್ವವಿದ್ಯಾಲಯದ ಕುಲಸಚಿವರ ಕಚೇರಿಯಲ್ಲಿ ಆಯ್ಕೆ ಮಾಡಲಾಗುವುದು. ಎಸ್‌ಎಸ್‌ಎಲ್‌ಸಿ ಪಾಸಾಗಿರುವ ಹಾಗೂ ಆಸಕ್ತಿಯುಳ್ಳ ಅರ್ಹರು ನೇರವಾಗಿ ವಾಕ್ ಇನ್ ಕೌನ್ಸಲಿಂಗ್‌ನಲ್ಲಿ ಬಾಗವಹಿಸುವಂತೆ ಹೊಗಳಗೆರೆ ತೋಟಗಾರಿಕೆ ಶಂಶೋಧನಾ ಮತ್ತು ವಿಸ್ತರಣಾ ಕೇಂದ್ರದ ಮುಖ್ಯಸ್ಥ ಡಾ.ಆರ್. ಕೆ.ರಾಮಚಂದ್ರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೋಕ್ ಅದಾಲತ್: 1,44,565 ಪ್ರಕರಣ ಇತ್ಯರ್ಥ

ರಾಮನಗರ: ನವದೆಹಲಿಯ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಇತ್ತೀಚೆಗೆ ಜಿಲ್ಲೆಯ ನ್ಯಾಯಾಲಯಗಳಲ್ಲಿ ರಾಜಿ ಸಂಧಾನದ ಮೂಲಕ ಇತ್ಯರ್ಥವಾಗಬಹುದಾದ ಪ್ರಕರಣಗಳನ್ನು ಲೋಕ್ ಅದಾಲತ್ ನಲ್ಲಿ ವಿಚಾರಣೆ ಕೈಗೊಳ್ಳಲಾಯಿತು.

ಜಿಲ್ಲೆಯ ರಾಮನಗರ, ಚನ್ನಪಟ್ಟಣ, ಕನಕಪುರ ಹಾಗೂ ಮಾಗಡಿ ನ್ಯಾಯಾಲಯಗಳು ಸೇರಿದಂತೆ ಒಟ್ಟು 20 ಪೀಠಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಅನ್ನು ಆಯೋಜಿಸಲಾಗಿತ್ತು. ಈ ಲೋಕ ಅದಲಾತ್‌ಗೆ ಜಿಲ್ಲೆಯಾದ್ಯಂತ ವಿಚಾರಣೆಗೆ ಬಾಕಿ ಇರುವ ಒಟ್ಟು 55,739 ಪ್ರಕರಣಗಳಲ್ಲಿ 3,234 ಪ್ರಕರಣಗಳನ್ನು ಹಾಗೂ 1,41,331 ವ್ಯಾಜ್ಯ ಪೂರ್ವ ಪ್ರಕರಣಗಳು ಸೇರೆದಂತೆ ಒಟ್ಟಾರೆ 1,44,565 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲಾಯಿತು. ಈ ಸಂದರ್ಭದಲ್ಲಿ ಒಟ್ಟು 254,28,68,027 ರೂ.ಗಳನ್ನು ವಸೂಲಿ ಮಾಡಿಕೊಳ್ಳಲಾಯಿತು.

ರಾಮನಗರ ನಗರ ಜಿಲ್ಲೆಯಾದ್ಯಂತ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜಿ ಸಂದಾನದ ಮೂಲಕ ಇತ್ಯರ್ಥಗೊಂಡ ಪ್ರಕರಣಗಳ ವಿವರ: 48 ರಾಜಿಯಾಗಬಲ್ಲ ಕ್ರಿಮಿನಲ್ ಪ್ರಕರಣಗಳು, 136 ನೆಗೋಷಬಲ್ ಇನ್ಸ್ಟ್ರುಮೆಂಟ್ ಕಾಯಿದೆ (ಎನ್‌ಐ ಆಕ್ಟ್) ಪ್ರಕರಣಗಳು, 27 ಸಾಲ ವಸೂಲಾತಿ ಪ್ರಕರಣಗಳು, 53 ಮೋಟಾರು ವಾಹನ ಅಪಘಾತ ಪ್ರಕರಣ, 16 ಕಾರ್ಮಿಕ ವಿವಾದ ಪ್ರಕರಣಗಳು, 6 ಗಣಿ ಮತ್ತು ಭೂ ವಿಜ್ಞಾನ ಪ್ರಕರಣಗಳು, 6 ವೈವಾಹಿಕ ಪ್ರಕರಣಗಳು, 85 ಆಸ್ತಿ ವಿಭಾಗ ಪ್ರಕರಣಗಳು, 41 ನಿರ್ಧಿಷ್ಟ ಪ್ರಕರಣಗಳು, 6 ಅಂತಿಮ ಡಿಕ್ರಿ ಕಾರ್ಯಾಚರಣೆ ಪ್ರಕರಣಗಳು, 10 ಜಾರಿ ಪ್ರಕರಣಗಳು, 12 ಎಂವಿಸಿ ಎಕ್ಸಿಕ್ಯೂಷನ್ ಪ್ರಕರಣಗಳು, 37 ಹಕ್ಕು ಘೋಷಣೆ, ಶಾಶ್ವತ ನಿರ್ಭಂದಕಾಜ್ಞೆ ಹಾಗೂ ಇತರೆ, 73 ಜನನ ಹಾಗೂ ಮರಣ ಪ್ರಮಾಣಪತ್ರಕ್ಕೆ ಸಂಬಂಧಿಸಿದ ಪ್ರಕರಣಗಳು, 2,576 ಲಘು ವ್ಯಾಜ್ಯ ಪ್ರಕರಣಗಳು, 37 ಇತರೆ ಕ್ರಿಮಿನಲ್ ಪ್ರಕರಣಗಳು, 7 ಬ್ಯಾಂಕ್ ಮೊಕದ್ದಮೆ, 125–ಸಿಆರ್.ಪಿಸಿ ಪ್ರಕರಣಕ್ಕೆ ಸಂಬಂಧಿಸಿದ 13 ಪ್ರಕರಣಗಳು, 1,41,331 ಪೂರ್ವ ದಾವೆ (ಪ್ರೀ ಲಿಟಿಗೇಷನ್) ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಯಿತು.

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಬಿ.ವಿ. ರೇಣುಕಾ ಅವರು ಮೇಲುಸ್ತುವಾರಿಯಲ್ಲಿ ರಾಷ್ಟ್ರೀಯ ಲೋಕ ಅದಾಲತ್‌ಅನ್ನು ನಿರ್ವಹಿಸಲಾಯಿತು ಎಂದು ರಾಮನಗರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸವಿತ ಪಿ.ಆರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ ಅಭಿವೃದ್ಧಿಗಾಗಿ ಬಿಡಿಸಿಸಿಐ ಮನವಿ



ಬಳ್ಳಾರಿ: ಜಿಲ್ಲೆಯ ವಾಯುಸಾರಿಗೆ, ರೈಲ್ವೆ, ರಾಷ್ಟ್ರೀಯ ಹೆದ್ದಾರಿ, ಕೈಗಾರಿಕೆ ಸೇರಿ ವಿವಿಧ ಸಮಸ್ಯೆಗಳ ಶೀಘ್ರ ಪರಿಹಾರಕ್ಕೆ ಕೋರಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ನಿಯೋಗವು ಕೇಂದ್ರ ಸಚಿವರನ್ನು ಇಲಾಖಾವಾರು ಭೇಟಿ ಮಾಡಿ, ಪ್ರತ್ಯೇಕವಾಗಿ ಮನವಿಯನ್ನು ಸಲ್ಲಿಸಿದೆ.

ಸಂಸದ ಇ. ತುಕಾರಾಂ ಅವರ ನೇತೃತ್ವದಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷ ಯಶವಂತರಾಜ್ ನಾಗಿರೆಡ್ಡಿ, ಮಾಜಿ ಅಧ್ಯಕ್ಷ ಸಿ.ನಿವಾಸರಾವ್, ಟ್ಯಾಕ್ಸೇಷನ್ ಕಮಿಟಿ ಚೇರ್ಮನ್ ಸಿಎ ರಾಜಶೇಖರ್ ಕೆ. ಅವರ ನಿಯೋಗವು, ನಾಗರಿಕ ವಾಯು ಯಾನ ಇಲಾಖೆ ಸಚಿವ ಕಿಂಜಾರ್ಪು ರಾಂ ಮೋಹನ್ ನಾಯ್ಡು, ರೈಲ್ವೆ ಖಾತೆ ಸಚಿವ ಅಶ್ವಿನ್ ವೈಷ್ಣವ್, ರಾಷ್ಟ್ರೀಯ ಹೆದ್ದಾರಿ ಇಲಾಖೆ ಸಚಿವ ನಿತಿನ್ ಗಡ್ಕರಿ, ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ, ಪರಿಸರ ಮತ್ತು ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದ ನಿರ್ದೇಶಕ ಅಮರ್ ದೀಪ್ ರಾಜು ಹಾಗೂ ರಾಜ್ಯಸಭಾ ಸದಸ್ಯ ಡಾ. ಸಯ್ಯದ್ ನಾಸಿರ್ ಹುಸೇನ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದರು.

ಕೇಂದ್ರ ನಾಗರಿಕ ವಾಯುಯಾನ ಇಲಾಖೆ ಸಚಿವ ಕಿಂಜಾರ್ಪು ರಾಂಮೋಹನ್ ನಾಯ್ಡು ಅವರನ್ನು ಭೇಟಿ ಮಾಡಿ, ಬಳ್ಳಾರಿ ಸಮೀಪದಲ್ಲಿ 1 ಸಾವಿರ ಎಕರೆ ಭೂಮಿಯನ್ನು ಸರ್ಕಾರ ಸ್ವಾಧೀನ ಮಾಡಿಕೊಂಡು ದಶಕಗಳಾಗಿದ್ದರೂ, ವಿಮಾನ ನಿಲ್ದಾಣ ಕಾಮಗಾರಿ ನೆನಗುದಿಗೆ ಬಿದ್ದಿದೆ, ಕ್ರಮ ಕೈಗೊಳ್ಳಿ ಎಂದು ಮನವಿ ಮಾಡಿದ್ದಾರೆ.

# ಪೋಕ್ಸೊ ಕಾಯ್ದೆ ಬಗ್ಗೆ ಹೆಣ್ಣು ಮಕ್ಕಳಿಗೆ ಅರಿವು ಅಗತ್ಯ

ಗೌರಿಬಿದನೂರು: ಹೆಣ್ಣು ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯ ಕಡಿವಾಣಕ್ಕೆ ಕೇಂದ್ರ ಸರ್ಕಾರ ಪೋಕ್ಸೊ ಕಾಯಿದೆ ಜಾರಿಗೆ ತಂದಿರುವುದು ವರದಾನವಾಗಿದೆ. ಈ ಕಾಯ್ದೆಯಲ್ಲಿನ ಆರೋಪಿಗಳಿಗೆ ಏಳು ವರ್ಷದಿಂದ 20ವರ್ಷಗಳ ವರೆಗೂ ಶಿಕ್ಷೆ ನೀಡಲಾಗುವುದು ಎಂದು ಗೋಪಾಲ ತಿಳಿಸಿದರು.




ನಗರದ ಕೋಟೆ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಪೋಕ್ಸೊ ಕಾಯ್ದೆ ಮತ್ತು ಅಪರಾಧ ತಡೆ ಮಾಸಾಚರಣೆ 2024–25ನೇ ಸಾಲಿನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ, ಹೆಣ್ಣು ಮಕ್ಕಳು 18 ವರ್ಷಕ್ಕಿಂತ ಚಿಕ್ಕವರಿದ್ದರೆ ಅವರಿಗೆ ವಿನಾಕಾರಣ ಲೈಂಗಿಕ ದೌರ್ಜನ್ಯ ನಡೆದರೆ ಕಾನೂನಿನಲ್ಲಿ ಅಪರಾಧ. ಗುಪ್ತಾಂಗಗಳ ಮೇಲೆ ಮುಟ್ಟುವುದು ಶರೀರ ಮುಟ್ಟುವುದು, ಕೆಟ್ಟದಾಗಿ ಸನ್ನೆ ಮಾಡುವುದು ಇವಲ್ಲಾ ಪೋಕ್ಸೊ ಕಾಯ್ದೆ ಒಳಪಡುತ್ತದೆ ಎಂದು ಹೇಳಿದರು.

ಶಾಲಾ ಮಕ್ಕಳು ಬಹಳ ಜಾಗೃತರಾಗಿ ಇರಬೇಕು ಅಪರಿಚಿತ ಅಥವಾ ಪರಿಚಿತರಿಂದ ಲೈಂಗಿಕ ದೌರ್ಜನ್ಯಕ್ಕೆ ಒಳಗಾದರೆ ಕೂಡಲೆ ನಿಮ್ಮ ಪೋಷಕರಿಗೆ ತಿಳಿಸಿ ಇಲ್ಲವೇ ಶಾಲಾ ಶಿಕ್ಷಕರಿಗೆ ವಿಷಯ ತಿಳಿಸಿ ಎಂದರು.

2024–25ರ ಸಾಲಿನ ಅಪರಾಧ ತಡೆ ಮಾಸ ಕುರಿತು ಮಾತನಾಡಿ, ಅವರು ಪ್ರತಿಯೊಬ್ಬರು ಸಾರಿಗೆ ನಿಯಮ ಪಾಲಿಸಿ ದ್ವಿಚಕ್ರ ವಾಹನ ಸಾವರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ನಿಮ್ಮ ಅಮೂಲ್ಯ ಪ್ರಾಣ ಉಳಿಸಿಕೊಳ್ಳಿ ಹಾಗೂ ಅಪ್ರಾಪ್ತತ ಮಕ್ಕಳು ಯಾವುದೇ ಕಾರಣಕ್ಕೂ ವಾಹನ ಚಾಲನೆ ಮಾಡಬಾರದು ಹಾಗೂ ವಾಹನ ಸಾವರರು ಕಡ್ಡಾಯವಾಗಿ ಡಿಎಲ್, ವಿಮೆ, ಹೊಂದಿರಬೇಕು ವೃತ್ತದಲ್ಲಿ ಕೆಂಪು ಬಣ್ಣದ ದೀಪವಿದ್ದಾಗ ನಿಂತು ಹೋಗಬೇಕು ವಿನಾಕಾರಣ ಸಾರಿಗೆ ನಿಯಮ ಉಲ್ಲಂಘನೆ ಮಾಡಿದಲ್ಲಿ ದಂಡ ಮತ್ತು ಜೈಲು ಶಿಕ್ಷೆಗೆ ಒಳಪಡಿಸಲಾಗುವುದು ಎಂದರು.

ಇದೇ ವೇಳೆ ಶಾಲಾ ಮಕ್ಕಳಿಂದ ಜಾಥಾ ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯಉಪಾಧ್ಯಾಯ ಶ್ರೀನಿವಾಸ್ ಪಾಂಶುಪಾಲೆ ಪದ್ಮಾವತಿ, ಸಿದ್ದೇಶ್, ಶಿವಮ್ಮ ನಾಗರತ್ನಮ್ಮ, ವರಲಕ್ಷ್ಮೀ, ಪೋಲಿಸ್ ಸಿಬ್ಬಂದಿ, ತಿಪ್ಪೇಶ್ ಹಾಜರಿದ್ದರು.



ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಭಿವೃದ್ಧಿ ಯೋಜನೆಗಳು ಮತ್ತು ಸಾಧನೆಗಳ 10 ಕನ್ನಡ ಹಾಗೂ 10 ಇಂಗ್ಲಿಷ್ ಪುಸ್ತಕಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ವಿಧಾನಸಭಾ ಸ್ಪೀಕರ್ ಯು.ಟಿ.ಖಾದರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ, ಸಚಿವ ಭೈರತಿ ಸುರೇಶ್, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಜಯ್ ಸಿಂಗ್, ಶಾಸಕ ಅಶೋಕ್ ಪಟ್ಟಣಶೆಟ್ಟಿ, ವಿಜಯಾನಂದ ಕಾಶಪ್ಪನವರ್, ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್, ಪ್ರಜಾವಾಣಿ ಕಾರ್ಯನಿರ್ವಾಹಕ ಸಂಪಾದಕ ರವೀಂದ್ರ ಭಟ್ಟ, ಮುಖ್ಯ ವರದಿಗಾರ ವೈ. ಗಾ.ಜಗದೀಶ್ ಮುಂತಾದ ಗಣ್ಯರು ಉಪಸ್ಥಿತರಿದ್ದರು.

# ‘ಮಾನವ ಹಕ್ಕುಗಳ ಉಲ್ಲಂಘನೆಯಾಗದಿರಲಿ’

ಚಿಕ್ಕಬಳ್ಳಾಪುರ: ಪ್ರತಿಯೊಬ್ಬ ಮಾನವರಿಗೂ ಯಾವೆಲ್ಲ ಹಕ್ಕುಗಳಿವೆ ಎಂಬುದರ ಬಗ್ಗೆ ಜಾಗೃತಿ ಮೂಡಿಸುವ ಸದುದ್ದೇಶದಿಂದ “ವಿಶ್ವ ಮಾನವ ಹಕ್ಕುಗಳ ದಿನಾಚರಣೆ”ಯನ್ನು ಪ್ರತಿ ವರ್ಷ ಮಾಡಲಾಗುತ್ತಿದೆ ಇಂತಹ ಕಾರ್ಯಕ್ರಮದ ಸದುಪಯೋಗವನ್ನು ಪ್ರತಿಯೊಬ್ಬರು ಪಡೆಯಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ನೇರಳೆ ವೀರಭದ್ರಯ್ಯ ಭವಾನಿ ತಿಳಿಸಿದರು.



ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗ ಬೆಂಗಳೂರು, ಚಿಕ್ಕಬಳ್ಳಾಪುರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಉನ್ನತಿ ಮಾನವ ಹಕ್ಕುಗಳ ರಕ್ಷಣಾ ಸಂಘ ಇವರುಗಳ ಸಂಯುಕ್ತಾಶ್ರಯದಲ್ಲಿ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಆಯೋಜಿಸಿದ್ದ “ವಿಶ್ವ ಮಾನವ ಹಕ್ಕುಗಳ ದಿನಾಚರಣೆ–2024ರ” ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಾನವನಾಗಿ ಹುಟ್ಟಿದ ಮೇಲೆ ಪ್ರತಿಯೊಬ್ಬರಿಗೂ ಸಹಜವಾದ ಮಾನವ ಹಕ್ಕುಗಳಿದ್ದು, ಸಮಾಜದಲ್ಲಿ ಕೆಲವು ವ್ಯಕ್ತಿಗಳ ಬುದ್ದಿವಂತಿಕೆ, ಆರ್ಥಿಕ ಮತ್ತು ಸಾಮಾಜಿಕ ಬಲ, ಪ್ರಭಾವ ಹಾಗೂ ದರ್ಪ, ದಬ್ಬಾಳಿಕೆಗಳಿಂದ ಅಸಹಾಯಕರು, ದುರ್ಬಲರು ಮಾನವ ಹಕ್ಕುಗಳಿಂದ ವಂಚಿತರಾಗುತ್ತಿದ್ದಾರೆ. ಈ ರೀತಿಯ ಪ್ರಕರಣಗಳು ಜಾಗೃತಿಯ ಕೊರತೆಯಿಂದ ಗ್ರಾಮೀಣ ಪ್ರದೇಶಗಳಲ್ಲೇ ಅಧಿಕವಾಗಿ ಕಂಡು ಬರುತ್ತಿವೆ. ಸಮಾಜದಲ್ಲಿ ಪ್ರತಿಯೊಬ್ಬರೂ ಹಕ್ಕುಗಳ ಬಗ್ಗೆ ಮಾತನಾಡುತ್ತಾರೆ ಮತ್ತು ಕೇಳುತ್ತಾರೆಯೇ ಹೊರತು ಬಹುತೇಕರು ತಮ್ಮ ನಾಗರೀಕ ಕರ್ತವ್ಯಗಳನ್ನು ಮರೆಯುತ್ತಾರೆ. ಭೂಮಿಯ ಮೇಲೆ ಜನಿಸಿದ ಮೇಲೆ ಪ್ರತಿಯೊಬ್ಬರಿಗೂ ಸಹಜವಾಗಿ ಸಮಾನ ಮಾನವ ಹಕ್ಕುಗಳಿವೆ. ಕೆಲವರು ಇನ್ನೊಬ್ಬರ ಹಕ್ಕುಗಳನ್ನು ಕಸಿದು ಮಾನವ ಹಕ್ಕುಗಳ ಉಲ್ಲಂಘನೆ ಮಾಡುತ್ತಾರೆ. ಯಾರ ಹಕ್ಕುಗಳನ್ನು ಯಾರೂ ಕಸಿಯುವಂತಿಲ್ಲ. ಪ್ರತಿ ವ್ಯಕ್ತಿಯೂ ಮಾನವನಾಗಿ ತನಗಿರುವ ಹಕ್ಕುಗಳನ್ನು ಅರಿತುಕೊಂಡಾಗ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳು ಕಡಿಮೆಯಾಗುತ್ತವೆ. ಮಾನವ ಹಕ್ಕುಗಳ ಬಗ್ಗೆ ಗ್ರಾಮೀಣ ಪ್ರದೇಶಗಳೂ ಸೇರಿದಂತೆ ಎಲ್ಲೆಡೆ ವಿವಿಧ ಕಾರ್ಯಕ್ರಮ, ಶಿಬಿರ ಮತ್ತು ಕಾರ್ಯಾಗಾರಗಳ ಮುಖಾಂತರ ಹೆಚ್ಚಿನ ಅರಿವು ಮೂಡಿಸಬೇಕು. ಈ ಬಗ್ಗೆ ವಿವಿಧ ಇಲಾಖೆಗಳೊಂದಿಗೆ ಸಂಘ ಸಂಸ್ಥೆಗಳು ಮತ್ತು ಸಾರ್ವಜನಿಕರು ಸಕಾರಾತ್ಮಕವಾಗಿ ಕೈ ಜೋಡಿಸಬೇಕೆಂದು ಮನವಿ ಮಾಡಿದರು.

ಈ ವೇಳೆ ಜಿಲ್ಲಾ ಪಂಚಾಯತ್ ಸಿಇಒ ಪ್ರಕಾಶ್ ಜಿ.ಟಿ.ನಿಟ್ಟಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಉಪ ವಿಭಾಗಧಿಕಾರಿ ಡಿ.ಹೆಚ್.ಅಶ್ವಿನ್, ಜಿಲ್ಲಾ ವಾರ್ತಾಧಿಕಾರಿ ಎಂ.ಜುಂಜಣ್ಣ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಮುನಿಕೆಂಪೇಗೌಡ, ರಾಷ್ಟ್ರೀಯ ಮಾನವ ಹಕ್ಕುಗಳು ಹಾಗೂ ಭ್ರಷ್ಟಾಚಾರ ವಿರೋಧಿಗಳ ಸಂಘದ ಜಿಲ್ಲಾಧ್ಯಕ್ಷ ಟಿ.ಆರ್.ಕೃಷ್ಣಪ್ಪ, ವಿದ್ಯಾರ್ಥಿಗಳು, ಶಿಕ್ಷಕರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಸಿ.ಟಿ ರವಿ ಮೇಲೆ ಹಲ್ಲೆ ಬಿಜೆಪಿ ರೈತ ಮೋರ್ಚಾ ಖಂಡನೆ


ಕೋಲಾರ: ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಸಿ.ಟಿ ರವಿ ಅವರ ಮೇಲೆ ಬೆಳಗಾವಿಯ ಸುವರ್ಣಸೌಧ ಅಧಿವೇಶನದ ಸಂದರ್ಭದಲ್ಲಿ ನಡೆದಿರುವ ಹಲ್ಲೆಯು ಖಂಡನೀಯವಾಗಿದ್ದು ಕೂಡಲೇ ತಪ್ಪಿತಸ್ಥರ ವಿರುದ್ದ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಬಿಜೆಪಿ ರೈತ ಮೋರ್ಚಾ ಜಿಲ್ಲಾ ಅಧ್ಯಕ್ಷ ಕೊಮ್ಮನಹಳ್ಳಿ ಆನಂದ್ ಒತ್ತಾಯಿಸಿದರು



ಈ ಕುರಿತು ಪತ್ರಿಕಾ ಹೇಳಿಕೆ ಮೂಲಕ ಒತ್ತಾಯಿಸಿದ ಅವರು ಎಂಎಲ್ಸಿ ಸಿ.ಟಿ.ರವಿ ಅವರು ಅಶ್ಲೀಲ ಪದ ಬಳಸಿದ್ದರೆ ಕಾನೂನು ರೀತಿಯಲ್ಲಿ ಕ್ರಮ ಕೈಗೊಳ್ಳಬೇಕಾಗಿತ್ತು ಅದು ಬಿಟ್ಟು ಏಕಾಏಕಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಗೂಂಡಾಗಳ ರೀತಿಯಲ್ಲಿ ಹಲ್ಲೆಗೆ ಮುಂದಾಗಿದ್ದಾರೆ. ಬೆಳಗಾವಿಯ ಸುವರ್ಣಸೌಧದ ಒಳಗೆ ಈ ರೀತಿಯಲ್ಲಿ ಒಬ್ಬ ಜನಪ್ರತಿನಿಧಿಯ ಮೇಲೆ ಹಲ್ಲೆ ನಡೆಯುತ್ತದೆ ಎಂದರೆ ಸಾಮಾನ್ಯ ಜನರು ನಿರೀಕ್ಷಿಸುವಂತಿಲ್ಲ ಪ್ರತಿ ಹಂತದಲ್ಲೂ ಭಯದ ವಾತಾವರಣವನ್ನು ರಾಜ್ಯದ ಕಾಂಗ್ರೆಸ್ ಸರ್ಕಾರವು ಸೃಷ್ಟಿಸಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರವು ಬಂದ ನಂತರದಲ್ಲಿ ಪೊಲೀಸ್ ವ್ಯವಸ್ಥೆಯು ಹದಗೆಟ್ಟಿದೆ ಹಿಂದೆ ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಅಂದವರಿಗೆ ಈ ಕಾಂಗ್ರೆಸ್ ಸರ್ಕಾರವು ಯಾವುದೇ ಶಿಕ್ಷೆ ವಿಧಿಸಲಿಲ್ಲ ರಾಜ್ಯದಲ್ಲಿ ಕಾಂಗ್ರೆಸ್ ಬೆಂಬಲಿತ ಅಪರಾಧಿಗಳನ್ನು ಯಾವುದೇ ಷರತ್ತು ಇಲ್ಲದೆ ಬಿಡುಗಡೆ ಮಾಡಿದೆ ಆದರೆ ಸಿ.ಟಿ.ರವಿ ಅವರು ಆ ರೀತಿ ಹೇಳಿಕೆ ನೀಡಲಿಲ್ಲ ಎಂದು ಬಹಳ ಸ್ಪಷ್ಟವಾಗಿ ಹೇಳಿದ್ದರೂ ಯಾವುದೇ ತನಿಖೆ ಮಾಡದೇ ಕಾಂಗ್ರೆಸ್ ಗೂಂಡಾಗಳೊಂದಿಗೆ ಸರಕಾರವು ಕೂ ಶಾಮೀಲು ಆಗಿದೆ ಇಂತಹ ಘಟನೆಗಳು ನಡೆದಿವೆ ಎಂದು ಕೊಮ್ಮನಹಳ್ಳಿ ಆನಂದ್ ಖಂಡನೀಯ ವ್ಯಕ್ತಪಡಿಸಿದರು.


# ರೈತ ಉತ್ಪಾದಕ ಕಂಪನಿಯಿಂದ ಕೊಬ್ಬರಿ ಖರೀದಿ ಪ್ರಾರಂಭ



ತಿಪಟೂರು: ರೈತ ಉತ್ಪಾದಕ ಕಂಪನಿ ಸರ್ಕಾರದ ಸಹಯೋಗದಲ್ಲಿ ರೈತರೇ ಸ್ಥಾಪಿಸಿಕೊಂಡ ಕಂಪನಿಯಾಗಿದ್ದು, ನಮ್ಮ ಸಂಸ್ಥೆ ವತಿಯಿಂದ ಮಾರುಕಟ್ಟೆ ದರದಲ್ಲಿ ನೇರವಾಗಿ ಕೊಬ್ಬರಿ ಖರೀದಿ ಮಾಡಲಾಗುವುದು ಎಂದು ತಿಪಟೂರು ರೈತ ಉತ್ಪಾದಕ ಕಂಪನಿ ಮುಖ್ಯಸ್ಥ ಮಾದೀಹಳ್ಳಿ ದಯಾನಂದಸ್ವಾಮಿ ತಿಳಿಸಿದರು.

ನಗರದ ಹಾಸನ ರಸ್ತೆಯ ಸಿದ್ದರಾಮೇಶ್ವರ ನಗರದಲ್ಲಿರುವ ರೈತ ಉತ್ಪಾದಕ ಕಂಪನಿ ಕಚೇರಿಯಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ದಯಾನಂದಸ್ವಾಮಿ, ಕಸಬಾ ಹೋಬಳಿ ವ್ಯಾಪ್ತಿಯ ಆಸಕ್ತ ರೈತರು ಸೇರಿ ತಿಪಟೂರು ರೈತ ಉತ್ಪಾದಕ ಕಂಪನಿ ಸ್ಥಾಪಿಸಿ, ನಬಾರ್ಡ್ ಹಾಗೂ ಇಶಾ ಔಟ್ರೀಚ್ ನೆರವಿನೊಂದಿಗೆ ಕೆಲಸ ಆರಂಭಿಸಿದ್ದು, ರೈತರು ತಾವೇ ಬೆಳೆದ ವಸ್ತುಗಳ ಖರೀದಿ, ರೈತರಿಗೆ ಅಗತ್ಯವಿರುವ ಬೀಜ ಗೊಬ್ಬರ ಹಾಗೂ ಕೃಷಿ ಪರಿಕರಗಳ ಮಾರಾಟ ಮಾಡಲಾಗುತ್ತಿದೆ. ಅಲ್ಲದೇ ರೈತರಿಗೆ ನೆರವಾಗಬಲ್ಲ, ಕಾಳು ಮೆಣಸು, ಕೋಕಾ, ಎಲಕ್ಕಿ ಬೆಳೆಗಳ ಬೆಳೆಯಲು, ಮಾರ್ಗದರ್ಶನ ಹಾಗೂ ನೆರವು ನೀಡಲಾಗುತ್ತಿದೆ. ನಮ್ಮ ಸಂಸ್ಥೆಯಿಂದ ಗುಣಮಟ್ಟದ ಕೊಬ್ಬರಿ ಮಾರಾಟ ಮಾಡಲಾಗುತ್ತಿದ್ದು,ತಿಪಟೂರು ರೈತ ಉತ್ಪಾದಕರ ಕಂಪನಿಯು ಕರ್ನಾಟಕ ರಫ್ತು ಮಂಡಳಿಗೆ ಕೊಬ್ಬರಿ ರವಾನೆ ಮಾಡುತ್ತಿದ್ದು, ಉತ್ತಮ ಗುಣಮಟ್ಟದ ಕೊಬ್ಬರಿ ರವಾನಿ ಮಾಡಲಾಗಿದೆ ಎಂದು ಪ್ರಶಂಸ ಪತ್ರವನ್ನು ಕಂಪನಿಗೆ ನೀಡಲಾಗಿದೆ. ತಿಪಟೂರು ರೈತ ಉತ್ಪಾದಕರ ಸಂಘದ ವತಿಯಿಂದ ರೈತರಿಗೆ ಅನುಕೂಲಕರವಾಗುವಂತೆ ರೈತರ ಬೆಳೆದ ಕೊಬ್ಬರಿಯನ್ನು ಖರೀದಿಸಿ, ರವಾನೆ ಮಾಡಲಾಗುತ್ತಿದ್ದು, ಎಪಿಎಂಸಿ ಟೆಂಡರ್ ಆಧಾರಿತ ಬೆಲೆಯನ್ನು ರೈತರಿಗೆ ನೀಡಲಾಗುವುದು ಹಾಗೂ ರೈತರಿಗೋಸ್ಕರ ಸಂಘದ ವತಿಯಿಂದ ಉಚಿತವಾಗಿ ಮಣ್ಣಿನ ಪರೀಕ್ಷೆಗಳನ್ನು ಮಾಡಿ, ರೈತರ ಜಮೀನಿನ ಮಣ್ಣಿನ ಪರೀಕ್ಷೆ ಮಾಡಲಾಗುತ್ತಿದು, ಆಸಕ್ತ ರೈತರು ಅನುಕೂಲ ಪಡೆಯಬಹುದು ಎಂದು ತಿಳಿಸಿದರು.

ಇಶಾ ಫೌಂಡೇಷನ್ ಅಧಿಕಾರಿ ರಭಿಯಾ, ರೈತ ಉತ್ಪಾದಕ ಕಂಪನಿಯ ನಿರ್ದೇಶಕ ಈಚನೂರು ಶಿವಗಂಗಮ್ಮ, ತಡಸೂರು ಗಂಗಾಧರಯ್ಯ ಮತ್ತು ಗುಡಿಗೊಂಡನಹಳ್ಳಿ ವಸಂತಕುಮಾರ್ ನಿರ್ದೇಶಕರು ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದರು.



ಕೋಲಾರ ತಾಲೂಕಿನ ವಿಟ್ಟಪ್ಪನಹಳ್ಳಿ ಕೃಷ್ಣಾಪುರ ಗ್ರಾಮದ ಅಭಯ ಆಂಜನೇಯಸ್ವಾಮಿ ದೇವಾಲಯದಲ್ಲಿ ದೇವಾಲಯದ ವಾರ್ಷಿಕೋತ್ಸವದ ಅಂಗವಾಗಿ ಸ್ವಾಮಿಗೆ ಚಂದನ ಅಲಂಕಾರವನ್ನು ಮಾಡಲಾಯಿತು. ಭಕ್ತಾಧಿಗಳು, ಗ್ರಾಮಸ್ಥರು ಭಾಗವಹಿಸಿ
ದೇವರ ಕೃಪೆಗೆ ಪಾತ್ರರಾದರು.

# ಅಧಿಕಾರಿಗಳಿಂದ ಒತ್ತುವರಿ ನಕಾಶೆ ರಸ್ತೆ ತೆರವು

ರಾಮನಗರ: ತಾಲ್ಲೂಕಿನ ಬನ್ನಿಕುಪ್ಪೆ(ಬಿ) ಗ್ರಾಪಂ ವ್ಯಾಪ್ತಿಯ ತಿಮ್ಮಪ್ಪನಪಾಳ್ಯ ಗ್ರಾಮದ ಬಳಿ ಒತ್ತುವರಿಯಾಗಿದ್ದ ನಕಾಶೆ ರಸ್ತೆಯನ್ನು ರೈತಸಂಘದ ಪದಾಧಿಕಾರಿಗಳ ಸಮ್ಮುಖದಲ್ಲಿ ಗುರುವಾರ ಕಂದಾಯ ಇಲಾಖೆ ಹಾಗೂ ಸರ್ವೆ ಇಲಾಖೆ ಅಧಿಕಾರಿಗಳು ತೆರವು ಕಾರ್ಯಾಚರಣೆ ನಡೆಸಿದರು.



ಬಿಡದಿ ಹೋಬಳಿ ಬನ್ನಿಕುಪ್ಪೆ(ಬಿ) ಗ್ರಾಮದ ಸರ್ವೆ ನಂ. 68, 91/20, 91/12, 91/3ರಲ್ಲಿ ಹಾದುಹೋಗಿರುವ ತಿಮ್ಮಪ್ಪನಪಾಳ್ಯದಿಂದ ಹೆಜ್ಜಾಲದವರೆಗೆ ರೈತರ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ ನಕಾಶೆ ದಾರಿ ಒತ್ತುವರಿಯಾಗಿರುವುದನ್ನು ತೆರವುಗೊಳಿಸಬೇಕೆಂದು ಕೆಲವು ಗ್ರಾಮಸ್ಥರು ತಾಲೂಕು ತಹಸೀಲ್ದಾರ್‌ರವರಿಗೆ ಮನವಿ ಸಲ್ಲಿಸಿದ್ದರು.

ಆದರೆ ಕಂದಾಯ ಇಲಾಖೆ ಮತ್ತು ಸರ್ವೆ ಇಲಾಖೆ ಅಧಿಕಾರಿಗಳು ನಿರ್ಲಕ್ಷ್ಯ ತಾಳಿದ್ದರಿಂದ ಕರ್ನಾಟಕ ರಾಜ್ಯ ರೈತಸಂಘದ ಅಧ್ಯಕ್ಷ ತುಂಬೇನಹಳ್ಳಿ ಶಿವಕುಮಾರ್ ಹಾಗೂ ಸಂಘಟನೆಯ ಪದಾಧಿಕಾರಿಗಳು ತಕ್ಷಣವೇ ಸರ್ವೆ ಮಾಡಿ ಸರಕಾರಿ ಗೋಮಾಳದಲ್ಲಿರುವ ನಕಾಶೆ ರಸ್ತೆಯನ್ನು ತೆರವುಗೊಳಿಸುವಂತೆ ಪಟ್ಟುಹಿಡಿದಿದ್ದರು.

ಈ ಹಿನ್ನೆಲೆಯಲ್ಲಿ ತಾಲ್ಲೂಕು ತಹಸೀಲ್ದಾರ್ ತೇಜಸ್ವಿನಿರವರ ಸೂಚನೆ ಮೇರೆಗೆ ಭೂಮಾಪನ ಇಲಾಖೆ ಅಧಿಕಾರಿಗಳು ನಕಾಶೆ ರಸ್ತೆಯನ್ನು ಸರ್ವೆಮಾಡಿದ್ದು ಬಂಡಿದಾರಿ ಒತ್ತುವರಿಯಾಗಿರುವ ಬಗ್ಗೆ ವರದಿ ಸಲ್ಲಿಸಿದ್ದರು. ಹೀಗಾಗಿ ನಿಯಮಾನುಸಾರ ಒತ್ತುವರಿದಾರರಿಗೆ ತಿಳುವಳಿಕೆ ನೋಟಿಸ್ ನೀಡಿ ಡಿ.19ರ ಗುರುವಾರ ತೆರವು ಕಾರ್ಯಾಚರಣೆಗೆ ಮಹೂರ್ತ ನಿಗದಿ ಮಾಡಲಾಗಿತ್ತು.

ಅದರಂತೆ ಬಿಡದಿ ಹೋಬಳಿ ರಾಜಸ್ವನಿರೀಕ್ಷಕ ಪ್ರಕಾಶ್, ಗ್ರಾಮ ಆಡಳಿತ ಅಧಿಕಾರಿ ಯತೀಶ್ ಹಾಗೂ ತಾಲ್ಲೂಕು ಸರ್ವೆ ಅಧಿಕಾರಿ ಪ್ರಭಾಕರ್ ಅವರುಗಳು ಎರಡು ಜೆಸಿಬಿ ಯಂತ್ರಗಳ ಮೂಲಕ ಸ್ಥಳಕ್ಕೆ ಆಗಮಿಸಿ ಗಡಿ ಗುರ್ತಿಸಿ ನಕಾಶೆ ದಾರಿಯನ್ನು ತೆರವುಗೊಳಿಸಿ ಸಾರ್ವಜನಿಕ ಸಂಚಾರಕ್ಕೆ ಅನುವು ಮಾಡಿಕೊಟ್ಟರು.

ಈ ಸಂದರ್ಭದಲ್ಲಿ ರೈತ ಮುತ್ತಯ್ಯ ಮಾತನಾಡಿ, ಬನ್ನಿಕುಪ್ಪೆ ಸರ್ವೆ ನಂಬರ್ 68, 91/20, 91/12, 91/3ರಲ್ಲಿ ಹಾದುಹೋಗಿರುವ ಬಂಡಿದಾರಿಯಲ್ಲಿ ನಮ್ಮ ಜಮೀನುಗಳಿಗೆ ಹಿಂದಿನಿಂದ ಓಡಾಡುತ್ತಿದ್ದೆವು. ಮೇಲ್ಭಾಗದಲ್ಲಿರುವ ಕೆಲವರು ಸರಕಾರಿ ಗೋಮಾಳದಲ್ಲಿರುವ ನಕಾಶೆ ರಸ್ತೆಯನ್ನು ಒತ್ತುವರಿ ಮಾಡಿಕೊಂಡಿದ್ದ ಅಲ್ಲದೆ ಇತ್ತೀಚೆಗೆ ಯಾರೂ ಓಡಾಡದಂತೆ ಮುಳ್ಳುತಂತಿ ಬೇಲಿಯನ್ನು ಅಡ್ಡಲಾಗಿ ಹಾಕಿದ್ದರು. ಇದರಿಂದ ಕೆಳಭಾಗದಲ್ಲಿರುವ ಏಳೆಂಟು ಜನ ರೈತರು ತಮ್ಮ ಜಮೀನುಗಳಿಗೆ ತೆರಳಲು ತೊಂದರೆಯಾಗಿತ್ತು. ಮನವಿ ನೀಡಿ ಮೇರೆಗೆ ಅಧಿಕಾರಿಗಳು ಕ್ರಮಕೈಗೊಂಡಿದ್ದಾರೆ ಎಂದು ತಿಳಿಸಿದರು.

# ಗುಡಿಬಂಡೆ: ಗೃಹ ಸಚಿವ ಅಮಿತ್ ಷಾ ವಜಾಕ್ಕೆ ಆಗ್ರಹಿಸಿ ಪ್ರತಿಭಟನೆ

ಗುಡಿಬಂಡೆ: ಇತ್ತೀಚೆಗಷ್ಟೆ ಕೇಂದ್ರ ಗೃಹ ಸಚಿವ ಅಮಿತ್ ಷಾ ಡಾ.ಬಿ.ಆರ್ ಅಂಬೇಡ್ಕರ್ ರವರ ಕುರಿತು ಅವಹೇಳನಕಾರಿಯಾಗಿ ಮಾತನಾಡಿದ್ದು, ಈ ಸಂಬಂಧ ಅವರನ್ನು ಕೂಡಲೇ ವಜಾಗೊಳಿಸಬೇಕೆಂದು ಆಗ್ರಹಿಸಿ ಗುಡಿಬಂಡೆ ಪಟ್ಟಣದ ತಾಲೂಕು ಕಚೇರಿ ಮುಂಭಾಗ ದಲಿತಪರ ಸಂಘಟನೆಗಳು ಹಾಗೂ ಕಾಂಗ್ರೆಸ್ ಮುಖಂಡರು ಪ್ರತಿಭಟನೆ ನಡೆಸಿ ರಾಷ್ಟ್ರಪತಿಗಳ ಮೂಲಕ ಮನವಿ ಪತ್ರವನ್ನು ಸಲ್ಲಿಸಿದರು.



ಈ ವೇಳೆ ಜೀವಿಕ ಸಂಘಟನೆಯ ಜಿಲ್ಲಾ ಸಂಚಾಲಕ ಡಾ.ನಾರಾಯಣಸ್ವಾಮಿ ಮಾತನಾಡಿ, ಇಂದು ಅಂಬೇಡ್ಕರ್ ರವರು ಕೊಟ್ಟಿರುವಂತಹ ಸಂವಿಧಾನದಿಂದ ದೇಶ ಸುಭದ್ರವಾಗಿದೆ. ಆದರೆ ಕೆಲವರು ಮಾತ್ರ ಸಂವಿಧಾನವನ್ನೇ ತಿದ್ದುಪಡಿ ಮಾಡುತ್ತೇವೆಂದು ಮಾತನಾಡುತ್ತಾರೆ. ಇತ್ತೀಚಿಗೆ ಕೇಂದ್ರ ಗೃಹ ಸಚಿವ ಅಮಿತ್ ಷಾ ರವರು ಸಂವಿಧಾನದ ಕುರಿತು ಅವಹೇಳನಕಾರಿಯಾಗಿ ಮಾತನಾಡಿದ್ದಾರೆ. ಅಂಬೇಡ್ಕರ್ ರವರ ಸಂವಿಧಾನ ಇಲ್ಲದಿದ್ದರೇ ಇಂದು ನೀವು ಗುಜರಿ ವ್ಯಾಪಾರ ಮಾಡಿಕೊಂಡು ಇರಬೇಕಾಗಿತ್ತು. ಅವರು ರಚಿಸಿಕೊಟ್ಟ ಸಂವಿಧಾನದಿಂದಲೇ ನೀವು ಗೃಹ ಸಚಿವರಾಗಿರುವುದು. ಅವರಿಂದ ಗೃಹ ಮಂತ್ರಿ ಸ್ಥಾನ ಪಡೆದುಕೊಂಡು ಈಗ ದ್ವೇಷ ರಾಜಕಾರಣ ಮಾಡುತ್ತಿದ್ದಾರೆ. ಕೂಡಲೇ ಅವರನ್ನು ಮಂತ್ರಿ ಸ್ಥಾನದಿಂದ ವಜಾಗೊಳಿಸಿ ಅವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಆಗ್ರಹಿಸಿದರು.

# ‘ಹಲ್ಲೆಮಾಡಲು ಯತ್ನಿಸಿದ ಗೂಂಡಾಗಳನ್ನು ಬಂಧಿಸಿ’

ದಾವಣಗೆರೆ: ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಅವರಿಗೆ ಮಧ್ಯಂತರ ಜಾಮೀನು ನೀಡಿ ರಾಜ್ಯ ಹೈಕೋರ್ಟ್ ಮಧ್ಯಂತರ ಆದೇಶ ನೀಡಿದ್ದು, ಇದನ್ನು ಬಿಜೆಪಿ ಸ್ವಾಗತಿಸುತ್ತದೆ. ಮಧ್ಯಂತರ ಆದೇಶ ನೀಡುವ ವೇಳೆ ಹೈಕೋರ್ಟ್, ಸಿ.ಟಿ.ರವಿ ಅವರಿಗೆ ನೋಟಿಸ್ ನೀಡದೆ ಬಂಧನ ಮಾಡಿದ್ದು ಕಾನೂನುಬಾಹಿರ ಎಂದು ತಿಳಿಸಿರುವುದಾಗಿ ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ವಿವರಿಸಿದರು.

ದಾವಣಗೆರೆಯ ಸರ್ಕ್ಯೂಟ್ ಹೌಸ್ ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಇಂದು ಮಾತನಾಡಿದ ಅವರು, ಪೊಲೀಸ್ ಇಲಾಖೆಯ ಧೋರಣೆಗೆ ಸಚಿವರ ಒತ್ತಡವೇ ಕಾರಣ. ಸಿ.ಟಿ.ರವಿ ಅವರನ್ನು ಬಂಧಿಸಿ ಒಬ್ಬ ಭಯೋತ್ಪಾದಕನಂತೆ ನಡೆಸಿಕೊಂಡಿದ್ದಾರೆ. ಇದು ಅತ್ಯಂತ ಆಘಾತಕರ ವಿಚಾರ ಎಂದು ತಿಳಿಸಿದರು.

ರವಿ ಅವರು ಬಿಜೆಪಿಯ ಹಿರಿಯ ನಾಯಕ ಮತ್ತು ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾಗಿ ಕೆಲಸ ಮಾಡಿದವರು. ಆದರೆ, ಅವರನ್ನು ಒಬ್ಬ ಭಯೋತ್ಪಾದಕ ಎಂಬಂತೆ ನಡೆಸಿಕೊಂಡಿದ್ದಾರೆ ಎಂದು ಆಕ್ಷೇಪಿಸಿದರು.

ರವಿಯವರನ್ನು ಒಂದು ಪಶುವಿನಂತೆ ಅಮಾನವೀಯವಾಗಿ ನಡೆಸಿಕೊಂಡಿದ್ದಾರೆ. ಇಂಥ ಘಟನೆ ಕರ್ನಾಟಕದ ರಾಜಕೀಯ ಮಾತ್ರವಲ್ಲ; ದೇಶದ ರಾಜಕಾರಣದಲ್ಲಿ ನಡೆದಿಲ್ಲ ಎಂದು ವಿವರಿಸಿದರು. ಕಾಂಗ್ರೆಸ್ ಸರಕಾರವು ಹಿಟ್ಲರ್ ಧೋರಣೆಯನ್ನು ಪ್ರದರ್ಶಿಸಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಈ ಆದೇಶವು ರಾಜ್ಯ ಸರಕಾರಕ್ಕೆ ಏಟು ಕೊಟ್ಟಂತಿದೆ. ರವಿಯವರ ಬಂಧನವನ್ನು ಖಂಡಿಸಿ ಮತ್ತು ಸರಕಾರದ ಧೋರಣೆಗೆ ಆಕ್ಷೇಪ ವ್ಯಕ್ತಪಡಿಸಿ ಬಿಜೆಪಿ ಕರೆಯಂತೆ ರಾಜ್ಯಾದ್ಯಂತ ಎಲ್ಲ ಜಿಲ್ಲೆಗಳಲ್ಲೂ ಪ್ರತಿಭಟನೆ ನಡೆಸಿತ್ತು ಎಂದು ತಿಳಿಸಿದರು. ಸುವರ್ಣ ಸೌಧದಲ್ಲಿ ಸಿ.ಟಿ.ರವಿ ಅವರ ಮೇಲೆ ಹಲ್ಲೆ ಮಾಡಲು ಮುಂದಾದ ಗೂಂಡಾಗಳನ್ನು ಕೂಡಲೇ ಬಂಧಿಸುವಂತೆ ಅವರು ಆಗ್ರಹಿಸಿದರು.

ಆರ್.ಅಶೋಕ್ ಅವರು ಮಾತನಾಡಿ, ವಿಧಾನಸೌಧದಲ್ಲಿ ಪಾಕಿಸ್ತಾನ ಜಿಂದಾಬಾದ್ ಎಂದು ರಾಜ್ಯಸಭಾ ಸದಸ್ಯನ ಬೆಂಬಲಿಗರು ಹೇಳಿದ್ದರು. ದೇಶದ್ರೋಹ ಮಾಡುವ ಅವರನ್ನು ಕೂಡಲೇ ಬಂಧಿಸಲಿಲ್ಲ; ಅವರನ್ನು ಹಾಗೇ ಬಿಟ್ಟು ನೋಟಿಸ್ ಕಳುಹಿಸಿದ್ದರು. ಅವರನ್ನು ಬಂಧಿಸಿದರೂ ಬಿರಿಯಾನಿ, ಕಬಾಬ್ ನೀಡಿದ್ದರು ಎಂದು ಟೀಕಿಸಿದರು.

ವಿಧಾನಸಭೆ ಮತ್ತು ವಿಧಾನಪರಿಷತ್ತಿನ ವ್ಯಾಪ್ತಿಯೇ ಬೇರೆ ಎಂದು ನಮ್ಮ ವಕೀಲರು ವಾದಿಸುವಾಗ ಹೇಳಿದ್ದಾರೆ. ಇಲ್ಲಿ ನಡೆದಿರುವ ಘಟನೆಗೆ ಯಾರು ಶಿಕ್ಷೆ ಕೊಡಬೇಕು? ಡಿ.ಕೆ.ಶಿವಕುಮಾರ್? ಸಿದ್ದರಾಮಯ್ಯರೇ ಎಂದು ಪ್ರಶ್ನಿಸಿದರು.

ಮಾಜಿ ಸಚಿವ ಮತ್ತು ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಅವರು ಮಾತನಾಡಿ, ನೋಟಿಸ್ ನೀಡದೆ ಬಂಧಿಸಿದ್ದಾರೆ. 4 ಜಿಲ್ಲೆಗಳಲ್ಲಿ 11 ಗಂಟೆಗಳಿಗೂ ಹೆಚ್ಚು ಕಾಲ ಅಲೆದಾಡಿಸಿ ಮಾನಸಿಕವಾಗಿ ಕುಗ್ಗಿಸುವ ಪ್ರಯತ್ನ ಮಾಡಿದ್ದಾರೆ. ದೈಹಿಕವಾಗಿ ಹಲ್ಲೆ ಮಾಡುವ ಕೆಲಸವನ್ನು ಕಾಂಗ್ರೆಸ್ ಸರಕಾರ ಪೊಲೀಸ್ ಬಲವನ್ನು ಉಪಯೋಗಿಸಿಕೊಂಡು ಮಾಡಿದೆ ಎಂದು ತಿಳಿಸಿದರು.

ನಮ್ಮ ಪಕ್ಷ, ನಮ್ಮ ರಾಜ್ಯಾಧ್ಯಕ್ಷರು, ಪಕ್ಷದ ನಾಯಕರಾದ ಅಶೋಕ್, ಛಲವಾದಿ ನಾರಾಯಣಸ್ವಾಮಿ ಅವರು, ಪಕ್ಷದ ಎಲ್ಲ ಮುಖಂಡರು, ಶಾಸಕರು, ಸಂಸದರು, ಸಾಮಾನ್ಯ ಕಾರ್ಯಕರ್ತರು ಈ ಸಂಕಷ್ಟದ ಸಮಯದಲ್ಲಿ ಜೊತೆಗೆ ನಿಂತಿದ್ದಾರೆ. ಆತ್ಮಸ್ಥೈರ್ಯವನ್ನು ತುಂಬುವುದರ ಜೊತೆಗೆ ನಿಮ್ಮ ಜೊತೆ ನಾವಿದ್ದೇವೆ ಎಂಬ ಸಂದೇಶ ಕೊಟ್ಟಿದ್ದಾರೆ ಎಂದು ಹೇಳಿದರು. ಅದಕ್ಕಾಗಿ ಅವರೆಲ್ಲರಿಗೆ ಹೃದಯಪೂರ್ವಕ ಧನ್ಯವಾದಗಳು ಎಂದು ತಿಳಿಸಿದರು.

ಕೋರ್ಟ್ ಆದೇಶದ ಕುರಿತು ಪ್ರಸ್ತಾಪಿಸಿದ ಅವರು ಸತ್ಯಕ್ಕೆ ಜಯ ಸಿಕ್ಕಿದೆ. ಇದರಿಂದ ಹಿಗ್ಗುವುದಿಲ್ಲ; ಕಾಂಗ್ರೆಸ್ ಪಕ್ಷವು ಪೊಲೀಸ್ ಬಲ ದುರ್ಬಳಕೆ ಮಾಡಿ ಕುಗ್ಗಿಸುವ ಪ್ರಯತ್ನ ಮಾಡಿದೆ. ಕುಗ್ಗುವುದೂ ಇಲ್ಲ ಎಂದರು. ಕಾಂಗ್ರೆಸ್ ಕೊಡುವ ತೊಂದರೆಯು ಇನ್ನಷ್ಟು ಗಟ್ಟಿಯಾಗುವ ಶಕ್ತಿ ಕೊಡುತ್ತದೆ ಎಂದರಲ್ಲದೆ, ಸಂಕಷ್ಟದಲ್ಲಿ ಇದ್ದಾಗ ನಮ್ಮ ಕಾರ್ಯಕರ್ತರು ನೆರವಿಗೆ ಬಂದಿದ್ದಾರೆ. ಅವರ ಋಣ ತೀರಿಸುವ ಕೆಲಸ ಮಾಡುವುದಾಗಿ ತಿಳಿಸಿದರು.



## ಸಿ.ಟಿ.ರವಿ ಬಿಡುಗಡೆ

ಬೆಂಗಳೂರು

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಅವಾಚ್ಯ ಪದ ಬಳಕೆ ಆರೋಪದ ಸಂಬಂಧ ದಾಖಲಾಗಿರುವ ಪ್ರಕರಣದಲ್ಲಿ ಬಂಧಿಸಲ್ಪ ಟ್ಟಿರುವ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರಿಗೆ ಹೈಕೋರ್ಟ್ ಮಧ್ಯಂತರ ಜಾಮೀನು ನೀಡಿ, ತಕ್ಷಣವೇ ಅವರನ್ನು ಬಿಡುಗಡೆ ಮಾಡು ವಂತೆ ಆದೇಶಿಸಿದೆ.

ಜಾಮೀನು ಕೋರಿ ಸಿ.ಟಿ.ರವಿ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಜಿ.ಉಮಾ ಅವರಿದ್ದ ಪೀಠ ಈ ಆದೇಶ ಮಾಡಿತು. ಅರ್ಜಿದಾರರ ಅವಹೇಳನಕಾರಿ ಪದ ಬಳಕೆ ಆರೋಪಕ್ಕೆ ಕೇವಲ ಮೂರು ವರ್ಷ ಮಾತ್ರ ಶಿಕ್ಷೆ ವಿಧಿಸಬಹುದು. ಅಲ್ಲದೇ, ಏಳು ವರ್ಷಕ್ಕಿಂತಲೂ ಮೇಲ್ಪಟ್ಟ ಶಿಕ್ಷೆ ಇದ್ದಲ್ಲಿ ಮಾತ್ರ ಬಂಧಿಸಿ ವಿಚಾರಣೆ ನಡೆಸಬೇಕಾಗಿದೆ.

ಹೀಗಾಗಿಅರ್ಜಿದಾರರುಮಧ್ಯಂತರಜಾಮೀನು ಪಡೆಯಲು ಅರ್ಹರು ಎಂದು ನ್ಯಾಯಪೀಠ ಹೇಳಿತು.

# ನಕಲಿ ವೈದ್ಯರ ಕ್ಲಿನಿಕ್ ಸೀಜ್

ಬಳ್ಳಾರಿ: ತಾಲ್ಲೂಕಿನ ಕಪ್ಪಗಲ್ಲು ಗ್ರಾಮದಲ್ಲಿ ಯಾವುದೇ ವೈದ್ಯಕೀಯ ಪದವಿ ಪಡೆಯದೇ ಔಷಧಿಗಳ ಮಾಹಿತಿ ಹೊಂದಿ ಜನತೆಗೆ ತಾವು ವೈದ್ಯರೆಂದು ಸುಳ್ಳು ಹೇಳಿ ವೈದ್ಯ ವೃತ್ತಿ ಮಾಡುತ್ತಿದ್ದ ನಕಲಿ ವೈದ್ಯರ 5 ಕ್ಲಿನಿಕ್‌ಗಳನ್ನು ಸೀಜ್ ಮಾಡಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು ತಿಳಿಸಿದ್ದಾರೆ.

ಸಾರ್ವಜನಿಕರಿಂದ ದೂರು ಬಂದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರ ಸೂಚನೆ ಮೇರೆಗೆ ತಾಲ್ಲೂಕು ಆರೋಗ್ಯ ಅಧಿಕಾರಿ ಡಾ.ಆರ್.ಅಬ್ದುಲ್ಲಾ ಅವರ ತಂಡ ಕಪ್ಪಗಲ್ಲು ಗ್ರಾಮಕ್ಕೆ ತೆರಳಿ ಸಾರ್ವಜನಿಕರಿಗೆ ತಾವು ವೈದ್ಯರೆಂದು ಬಿಂಬಿಸಿ ಯಾವುದೇ ವೈದ್ಯಕೀಯ ಪದವಿ ಪಡೆಯದೇ ಎಸ್‌ಎಸ್‌ಎಲ್‌ಸಿ, ಪಿಯುಸಿ ತನಕ ಓದಿಕೊಂಡು ಜನತೆಗೆ ಚಿಕಿತ್ಸೆ ನೀಡುತ್ತಿದ್ದ ರಾಜಣ್ಣ ಕ್ಲಿನಿಕ್, ಶೇಕ್ಷಾವಲಿ ಕ್ಲಿನಿಕ್, ರೆಹಮಾನ್ ಕ್ಲಿನಿಕ್, ಮಹದೇವ್ ಕ್ಲಿನಿಕ್ ಮತ್ತು ಗುರು ಕ್ಲಿನಿಕ್‌ಗಳನ್ನು ಸೀಜ್ ಮಾಡಿ ಜಿಲ್ಲಾಧಿಕಾರಿಗಳ ಮುಂದಿನ ಕ್ರಮಕ್ಕಾಗಿ ವರದಿ ನೀಡಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಸಾರ್ವಜನಿಕರು ಆರೋಗ್ಯದ ದೃಷ್ಟಿಯಿಂದ ಅಧಿಕೃತ ವೈದ್ಯ ಪದವಿ ಪಡೆದ ವೈದ್ಯರ ಬಳಿ ತಪಾಸಣೆ ಮಾಡಿಸಿ ಚಿಕಿತ್ಸೆ ಪಡೆಯುವುದರಿಂದ ಆರೋಗ್ಯದ ಮೇಲೆ ಉಂಟಾಗಬಹುದಾದ ಗಂಭೀರ ಪರಿಣಾಮಗಳನ್ನು ತಡೆಯಬಹುದಾಗಿದೆ. ಗ್ರಾಮಗಳಲ್ಲಿ ವೈದ್ಯ ವೃತ್ತಿ ಮಾಡುತ್ತಿರುವವರು ಕಂಡುಬಂದಲ್ಲಿ ಅವರ ವೈದ್ಯಕೀಯ ಪದವಿಯ ಮಾಹಿತಿ ಪಡೆದುಕೊಂಡು ಚಿಕಿತ್ಸೆ ಪಡೆಯಬೇಕು. ಒಂದು ವೇಳೆ ನಕಲಿ ವೈದ್ಯರು ಎಂದು ಕಂಡುಬಂದರೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಾರ್ಯಾಲಯಕ್ಕೆ ದೂರು ನೀಡಬಹುದು.

# ಕಾಂಗ್ರೆಸ್ಸಿನ ಗೂಂಡಾಗಳಿಂದ ಸಿ.ಟಿ.ರವಿ ಮೇಲೆ ಹಲ್ಲೆ: ವಿಜಯೇಂದ್ರ

ಬೆಳಗಾವಿ: ಕಾಂಗ್ರೆಸ್ಸಿನ ಗೂಂಡಾಗಳು ಸುವರ್ಣಸೌಧಕ್ಕೆ ಬಂದು ಸಿ.ಟಿ.ರವಿ ಅವರ ಮೇಲೆ ಹಲ್ಲೆ ಮಾಡಲು ರಾಜ್ಯದ ಕಾಂಗ್ರೆಸ್ ಸರಕಾರ ಅವಕಾಶ ಮಾಡಿಕೊಟ್ಟಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಟೀಕಿಸಿದರು.

ಮಾಜಿ ಸಚಿವ ಮತ್ತು ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಅವರ ಬಂಧನವನ್ನು ಖಂಡಿಸಿ ಶುಕ್ರವಾರ ಇಲ್ಲಿ ನಡೆದ ಪ್ರತಿಭಟನೆಯ ಸಂದರ್ಭದಲ್ಲಿ ಅವರು ಮಾತನಾಡಿದರು. ರೈತರ ಮೇಲೆ, ಪಂಚಮಸಾಲಿ ಸಮಾಜದ ಮೇಲೆ ಲಾಠಿ ಪ್ರಹಾರ ನಡೆಸುತ್ತೀರಿ. ಸ್ಪೀಕರ್ ರೂಲಿಂಗ್ ಬದಿಗಿಟ್ಟು ಸಿ.ಟಿ.ರವಿ ಅವರ ಮೇಲೆ ಹಲ್ಲೆ ಮಾಡಿಸಿದ್ದು, ಬಳಿಕ ಪೊಲೀಸರ ಮೂಲಕ ಬಂಧಿಸಲಾಗಿದೆ ಎಂದು ಖಂಡಿಸಿದರು.

ಇಡೀ ರಾತ್ರಿ ಸುಮಾರು 500 ಕಿಮೀ ಸುತ್ತಾಡಿಸಿದ್ದಾರೆ. ಬಲವಂತದಿಂದ ವಾಹನದಲ್ಲಿ ಗದಗ, ರಾಮದುರ್ಗ, ಧಾರವಾಡ ಮೊದಲಾದ ಕಡೆಗಳಿಗೆ ಕರೆದೊಯ್ದಿದ್ದಾರೆ. ಜನಪ್ರತಿನಿಧಿಗಳ ಮೇಲೆ ಈ ರೀತಿ ದೌರ್ಜನ್ಯ ಮಾಡುವ ಈ ಸರಕಾರದ ನೀತಿಯನ್ನು ಜನರೂ ಪ್ರಶ್ನಿಸುತ್ತಿದ್ದಾರೆ. ಪ್ರಜಾಪ್ರಭುತ್ವವನ್ನು ಕಗ್ಗೊಲೆ ಮಾಡುವ ಪಕ್ಷ ಕಾಂಗ್ರೆಸ್ ಎಂದು ಆರೋಪಿಸಿದರು.

ಕಾಂಗ್ರೆಸ್ ಪಕ್ಷವು ಕಾನೂನನ್ನು ಮತ್ತು ಸಂವಿಧಾನದ ಆಶಯವನ್ನು ಗಾಳಿಗೆ ತೂರಿ ದೇಶದ ಮೇಲೆ ತುರ್ತು ಪರಿಸ್ಥಿತಿಯನ್ನು ಹೇರಿತ್ತು ಎಂದು ಟೀಕಿಸಿದರು. ಸಿ.ಟಿ.ರವಿ ಅವರ ಮೇಲೆ ಪೊಲೀಸರು ಮಾರಣಾಂತಿಕ ಹಲ್ಲೆ ಮಾಡಿದ್ದು, ನೆತ್ತಿ ಮೇಲೆ ರಕ್ತ ಸುರಿಯುತ್ತಿದ್ದರೂ ಅವರನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿಲ್ಲ ಎಂದು ದೂರಿದರು.

ಅನ್ನ, ನೀರು ಕೊಟ್ಟಿಲ್ಲ, ಒಂದು ಲೋಟ ನೀರನ್ನೂ ಕೊಟ್ಟಿಲ್ಲ. ಸಿ.ಟಿ.ರವಿ ಅವರಿಗೆ ಒಂದು ತುತ್ತು ಅನ್ನವನ್ನೂ ಕೊಟ್ಟಿಲ್ಲ ಎಂದು ಬಿ.ವೈ.ವಿಜಯೇಂದ್ರ ಆಕ್ಷೇಪಿಸಿದರು.

ಕಾಂಗ್ರೆಸ್ಸಿನ ಒತ್ತಾಯದ ಮೇರೆಗೆ ಪೊಲೀಸ್ ಅಧಿಕಾರಿಗಳು ಕೆಲಸ ಮಾಡುತ್ತಿದ್ದಾರೆ. ಸಿದ್ದರಾಮಯ್ಯನವರೇ, ಅಧಿಕಾರ ಶಾಶ್ವತ ಅಲ್ಲ. ಅಧಿಕಾರದ ದರ್ಪ, ಅಮಲಿನಲ್ಲಿ ಮೆರೆಯುವ ನೀವು, ಅಧಿಕಾರದ ಸೊಕ್ಕು, ಮದದಿಂದ ನಮ್ಮ ಮೇಲೆ ಹಲ್ಲೆ ಮಾಡುವ ಕೆಲಸ ಮಾಡುತ್ತಿದ್ದೀರಿ. ಅಧಿಕಾರ ಶಾಶ್ವತ ಅಲ್ಲ ಎಂದು ಎಚ್ಚರಿಸಿದರು. ವಿಪಕ್ಷ ನಾಯಕ ಆರ್.ಅಶೋಕ್, ಉಪ ನಾಯಕ ಅರವಿಂದ ಬೆಲ್ಲದ, ರಾಜ್ಯ ಪ್ರಧಾನ ಕಾರ್ಯದರ್ಶಿ ಸುನೀಲ್‌ಕುಮಾರ್, ಸ್ಥಳೀಯ ಮುಖಂಡರು ಭಾಗವಹಿಸಿದ್ದರು.


# ಕ್ಯಾನ್ಸರ್ ವಿರುದ್ಧ ಲಸಿಕೆ ಅಭಿವೃದ್ಧಿಪಡಿಸಿದ ರಷ್ಯಾ: ಉಚಿತ ವಿತರಣೆ

ಮಾಸ್ಕೋ: ಜಗತ್ತನ್ನು ಅತಿ ಹೆಚ್ಚು ಕಾಡುತ್ತಿರುವ ಸಮಸ್ಯೆ ಎಂದರೆ ಕ್ಯಾನ್ಸರ್ ಕಾಯಿಲೆ. ದೇಹದ ಒಂದಿಲ್ಲೊಂದು ಭಾಗಗಳು ಮಹಾಮಾರಿ ಕ್ಯಾನ್ಸರ್‌ಗೆ ತುತ್ತಾಗುತ್ತಿವೆ. ಇದರ ವಿರುದ್ಧ ಹೋರಾಡಿ ಗೆದ್ದು, ಸ್ಫೂರ್ತಿ ನೀಡುವ ಸಾವಿರಾರು ಜನರು ನಮ್ಮ ನಡುವೆ ಇದ್ದಾರೆ. ಆದರೆ ಇದಕ್ಕೆ ಇನ್ನೂ ನಿರ್ದಿಷ್ಟ ವೈದ್ಯಕೀಯ ಪರಿಹಾರ ದೊರಕಿಲ್ಲ. ಈ ಆತಂಕದ ನಡುವೆ ರಷ್ಯಾ, ತಾನು ಕ್ಯಾನ್ಸರ್ ವಿರುದ್ಧ ಲಸಿಕೆ ಅಭಿವೃದ್ಧಿಪಡಿಸಿರುವುದಾಗಿ ತಿಳಿಸಿದೆ.

ವೈದ್ಯಕೀಯ ವಿಜ್ಞಾನ ಕ್ಷೇತ್ರದಲ್ಲಿ ರಷ್ಯಾ ಮಹತ್ತರ ಸಾಧನೆ ಮಾಡಿದೆ. ರಷ್ಯಾದ ಆರೋಗ್ಯ ಸಚಿವಾಲಯವು ಕ್ಯಾನ್ಸರ್ ಲಸಿಕೆ ಅಭಿವೃದ್ಧಿಪಡಿಸಿರುವುದಾಗಿ ಘೋಷಿಸಿದ್ದು, ತನ್ನ ದೇಶದ ನಾಗರಿಕರಿಗೆ ಉಚಿತವಾಗಿ ಸಿಗಲಿದೆ ಎಂಬುದಾಗಿ ಹೇಳಿಕೊಂಡಿದೆ.

ಹೌದು. ಕ್ಯಾನ್ಸರ್ ಲಸಿಕೆ ತಯಾರಿಸುವಲ್ಲಿ ನಾವು ಯಶಸ್ವಿಯಾಗಿದ್ದೇವೆ ಎಂದು ರಷ್ಯಾದ ಆರೋಗ್ಯ ಸಚಿವಾಲಯದ ವಿಕಿರಣಶಾಸ್ತ್ರ ವೈದ್ಯಕೀಯ ಸಂಶೋಧನಾ ಕೇಂದ್ರದ ನಿರ್ದೇಶಕ ಆಂಡ್ರೇ ಕಪ್ರಿನ್ ಮಾಹಿತಿ ನೀಡಿದ್ದಾರೆ.

ಮುಂದಿನ ವರ್ಷದಿಂದಲೇ ರಷ್ಯಾದ ನಾಗರಿಕರಿಗೆ ಈ ಕ್ಯಾನ್ಸರ್ ಲಸಿಕೆಯನ್ನು ಉಚಿತವಾಗಿ ನೀಡಲಾಗುವುದು ಎಂದಿರುವ ಆಂಡ್ರೇ, ರಷ್ಯಾದ ಈ ಆವಿಷ್ಕಾರ ಶತಮಾನದ ಅತಿದೊಡ್ಡ ಆವಿಷ್ಕಾರವೆಂದು ಬಣ್ಣಿಸಿದ್ದಾರೆ. ಅಲ್ಲದೇ ಲಸಿಕೆಯ ಕ್ಲಿನಿಕಲ್ ಪ್ರಯೋಗಗಳು ಇದು ಗೆಡ್ಡೆಯ ಬೆಳವಣಿಗೆಯನ್ನು ತಡೆಯಲು ಸಹಾಯ ಮಾಡುತ್ತದೆ ಎಂದು ತೋರಿಸಿದೆ ಎಂದು ವಿವರಿಸಿದ್ದಾರೆ.




ಈ ವರ್ಷಾರಂಭದಲ್ಲೇ ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಕ್ಯಾನ್ಸರ್ ಲಸಿಕೆ ತಯಾರಿಸಲು ರಷ್ಯಾ ಬಹಳ ಸಮೀಪದಲ್ಲಿದೆ ಎಂದು ಹೇಳಿದ್ದರು.

mRNA ಅಥವಾ ಮೆಸೆಂಜರ್ ಆರ್‌ಎನ್‌ಎ ಎಂಬುದು ಮಾನವನ ಆನುವಂಶಿಕ ಸಂಕೇತದ ಒಂದು ಸಣ್ಣ ಭಾಗವಾಗಿದೆ. ಇದು ನಮ್ಮ ಜೀವಕೋಶಗಳಲ್ಲಿ ಪ್ರೋಟೀನ್‌ಗಳನ್ನು ಉತ್ಪಾದಿಸುತ್ತದೆ. ವೈರಸ್ ಅಥವಾ ಬ್ಯಾಕ್ಟೀರಿಯಾವು ನಮ್ಮ ದೇಹವನ್ನು ಆಕ್ರಮಿಸಿದಾಗ, ಅದರ ವಿರುದ್ಧ ಹೋರಾಡಲು ಸಹಾಯಕವಾಗುವ ಪ್ರೋಟೀನ್‌ಗಳನ್ನು ಉತ್ಪಾದಿಸಲು mRNA ಸಹಾಯ ಮಾಡುತ್ತದೆ ಎಂದು ತಜ್ಞರು ಹೇಳಿದ್ದಾರೆ.

ಈ ಲಸಿಕೆಯಿಂದ ನಮ್ಮ ದೇಹದ ಪ್ರತಿರಕ್ಷಣಾ ವ್ಯವಸ್ಥೆಯು ಅಗತ್ಯವಾದ ಪ್ರೋಟೀನ್‌ಗಳನ್ನು ಪಡೆಯುತ್ತವೆ, ಪ್ರತಿಕಾಯ (ಆಂಟಿಬಾಡಿ) ರೂಪುಗೊಳ್ಳುತ್ತವೆ. ಇದರೊಂದಿಗೆ ರೋಗನಿರೋಧಕ ಶಕ್ತಿತಯೂ ಬಲಗೊಳ್ಳುತ್ತದೆ. ಕ್ಯಾನ್ಸರ್ ಲಸಿಕೆಯು mRNA ತಂತ್ರಜ್ಞಾನ ಆಧರಿಸಿದ ಮೊದಲ ಲಸಿಕೆಯಾಗಿದೆ.

**ಭಾರತದಲ್ಲಿ ಕ್ಯಾನ್ಸರ್ ಸ್ಥಿತಿ ಹೇಗಿದೆ?**

2022ರಲ್ಲಿ ಭಾರತದಲ್ಲಿ 14.13 ಲಕ್ಷ ಹೊಸ ಕ್ಯಾನ್ಸರ್ ಪ್ರಕರಣಗಳು ವರದಿಯಾಗಿತ್ತು. ಈ ಪೈಕಿ 7.22 ಲಕ್ಷ ಮಹಿಳೆಯರು, 6.91 ಲಕ್ಷ ಪುರುಷರು ಕ್ಯಾನ್ಸರ್ ರೋಗಕ್ಕೆ ತುತ್ತಾಗಿದ್ದರು. 2022ರಲ್ಲಿ 9.16 ಲಕ್ಷ ರೋಗಿಗಳು ಕ್ಯಾನ್ಸರ್‌ನಿಂದ ಸಾವನ್ನಪ್ಪಿದ್ದರು. ಬಳಿಕ ಮುಂದಿನ 5 ವರ್ಷಗಳಲ್ಲಿ ಭಾರತದಲ್ಲಿ ಕ್ಯಾನ್ಸರ್ ರೋಗಿಗಳ ಸಂಖ್ಯೆ ಶೇ.12 ರಷ್ಟು ಹೆಚ್ಚಾಗಲಿದೆ ಎಂದು ಭಾರತೀಯ ವೈದ್ಯಕೀಯ ಸಂಶೋಧನಾ ಮಂಡಳಿ ಅಂದಾಜಿಸಿರುವುದಾಗಿ ವರದಿಯಾಗಿತ್ತು.

ಗ್ಲೋಬಲ್ ಕ್ಯಾನ್ಸರ್ ಅಬ್ಸರ್ವೇಟರಿಯ ಮಾಹಿತಿ ಪ್ರಕಾರ, ಸ್ತನ, ಪ್ರಾಸ್ಟೇಟ್ ಮತ್ತು ಥೈರಾಯ್ಡ್ ಕ್ಯಾನ್ಸರ್ ಕಾಯಿಲೆಯು 50ಕ್ಕಿಂತ ಕಡಿಮೆ ವಯಸ್ಸಿನವರಲ್ಲಿ ಕಾಣಿಸಿಕೊಳ್ಳುವುದು ಸಾಮಾನ್ಯವಾಗಿದೆ. ಭಾರತದಲ್ಲಿ ಅತಿ ಹೆಚ್ಚು ಸ್ತನ, ಬಾಯಿ, ಗರ್ಭಕೋಶ ಮತ್ತು ಶ್ವಾಸಕೋಶದ ಕ್ಯಾನ್ಸರ್ ಪ್ರಕರಣಗಳು ವರದಿಯಾಗುತ್ತಿವೆ ಎಂದು ವರದಿ ಹೇಳಿದೆ.

"ಇದು ಶತಮಾನದ ಅತಿದೊಡ್ಡ ಆವಿಷ್ಕಾರವೆನಿಸಿದೆ. ಅಲ್ಲದೇ ಲಸಿಕೆಯ ಕ್ಲಿನಿಕಲ್ ಪ್ರಯೋಗಗಳು ಕ್ಯಾನ್ಸರ್ ಜೀವಕೋಶಗಳ ಬೆಳವಣಿಗೆಯನ್ನು ತಡೆಯಲು ಸಹಾಯ ಮಾಡುತ್ತದೆ ಎಂಬುದನ್ನು ತೋರಿಸಿದೆ," ಎಂದು ಗಮೇಲಿಯಾ ನ್ಯಾಷನಲ್ ರಿಸರ್ಚ್ ಸೆಂಟರ್ ಫಾರ್ ಎಪಿಡಿಮಾಲಜಿ ಮತ್ತು ಮೈಕ್ರೊಬಯಾಲಜಿ ಕೇಂದ್ರದ ನಿರ್ದೇಶಕ ಅಲೆಕ್ಸಾಂಡರ್ ಹೇಳಿರುವುದಾಗಿ ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ಆದರೆ ಇದವರೆಗೂ ಲಸಿಕೆಯ ಹೆಸರನ್ನು ಮಾತ್ರ ರಷ್ಯಾ ಬಹಿರಂಗಪಡಿಸಿಲ್ಲ. ಅಲ್ಲದೆ ಯಾವ ರೀತಿಯ ಕ್ಯಾನ್ಸರ್‌ಗಳಿಗೆ ಲಸಿಕೆ ರಾಮಬಾಣದಂತೆ ಕಾರ್ಯನಿರ್ವಹಿಸಲಿದೆ ಎಂಬ ಬಗ್ಗೆಯೂ ಮಾಹಿತಿ ಬಿಟ್ಟುಕೊಟ್ಟಿಲ್ಲ.

**ರಷ್ಯಾದಲ್ಲಿ ಕ್ಯಾನ್ಸರ್ ಪ್ರಮಾಣ:** ಬ್ರಿಟನ್‌ನ ಡೈಲಿ ಮೇಲ್ ಪತ್ರಿಕೆ ಪ್ರಕಾರ. 2022ರಲ್ಲಿ ರಷ್ಯಾದಲ್ಲಿ 6.35 ಲಕ್ಷ ಕ್ಯಾನ್ಸರ್ ಪ್ರಕರಣಗಳು ದಾಖಲಾಗಿವೆ. ಇದರಲ್ಲಿ ಸ್ತನ ಕ್ಯಾನ್ಸರ್ ಮತ್ತು ಶ್ವಾಸಕೋಶ ಸಂಬಂಧಿ ಕ್ಯಾನ್ಸರ್ ಪ್ರಕರಣಗಳ ಸಂಖ್ಯೆ ಹೆಚ್ಚಿದೆ.

# ಉತ್ತಮ ಅಂಕ ಗಳಿಕೆಗೆ ಟ್ಯೂಷನ್ ಕ್ಲಾಸ್ ಆರಂಭ



ವೈ.ಎನ್.ಹೊಸಕೋಟೆ: ಹೋಬಳಿಯ ಮರಿ ದಾಸನಹಳ್ಳಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿಯೋಜನೆಯ ಶಿಕ್ಷಣ ಕಾರ್ಯಕ್ರಮದಡಿಯಲ್ಲಿ 10ನೇ ತರಗತಿಯ ಮಕ್ಕಳಿಗೆ ವಿಶೇಷ ಟ್ಯೂಷನ್ ಕ್ಲಾಸ್ ಕಾರ್ಯಕ್ರಮ ಗುರುವಾರ ಉದ್ಘಾಟಿಸಲಾಯಿತು.

ತಾಲ್ಲೂಕು ಧರ್ಮಸ್ಥಳ ಯೋಜನಾಧಿಕಾರಿ ಮಹೇಶ್ ಅವರು ಡಾ.ವಿರೇಂದ್ರ ಹೆಗ್ಗಡೆಯವರ ಆಶಯದಂತೆ ತಾಲ್ಲೂಕಿನ ಗ್ರಾಮಾಂತರ 6 ಪ್ರೌಢಶಾಲೆಗಳಲ್ಲಿ 10ನೇ ತರಗತಿಯ ಮಕ್ಕಳಿಗೆ ಪರೀಕ್ಷೆಯಲ್ಲಿ ಹೆಚ್ಚು ಅಂಕಗಳನ್ನ ಪಡೆಯಲು ಗಣಿತ ಹಾಗೂ ಇಂಗ್ಲಿಷ್ ವಿಷಯಗಳಿಗೆ ಒತ್ತು ಕೊಟ್ಟು 3 ತಿಂಗಳ ಕಾಲ ವಿಶೇಷ ಟ್ಯೂಷನ್ ಮಾಡಲು ನುರಿತ ಅನುಭವ ಹೊಂದಿರುವ ಶಿಕ್ಷಕರಿಗೆ 3 ತಿಂಗಳು ಯೋಜನೆಯಿಂದ ಗೌರವಧನ ನೀಡಿ ಸಂಜೆ 4 ಗಂಟೆಯಿಂದ 5 ಗಂಟೆಯವರಿಗೆ ಟ್ಯೂಷನ್ ಮಾಡಲು ಅವಕಾಶ ಕಲ್ಪಿಸಲಾಗಿದೆ. ಮಕ್ಕಳು ಇದರ ಸದುಪಯೋಗ ಪಡೆದುಕೊಂಡು ಭವಿಷ್ಯವನ್ನ ಉತ್ತಮವಾಗಿ ರೂಪಿಸಿಕೊಳ್ಳಿ ಎಂದು ತಿಳಿಸಿದರು.

# ‘ಸಿ.ಟಿ.ರವಿ ಹರಕಲು ಬಾಯಿ ಸಂಸ್ಕೃತಿ ಇದೇ ಮೊದಲಲ್ಲ’

ಬೆಳಗಾವಿ: “ಸಿ.ಟಿ.ರವಿ ಅವರದು ಹರಕಲು ಬಾಯಿ ಸಂಸ್ಕೃತಿ ಇದೇ ಮೊದಲಲ್ಲ. ಅವರು ಈ ಹಿಂದೆ ಸಿದ್ದರಾಮಯ್ಯ ಸೇರಿದಂತೆ ಯಾರ ಬಗ್ಗೆ ಏನೆಲ್ಲಾ ಪದ ಪ್ರಯೋಗ ಮಾಡಿದ್ದಾರೆ ಎಂಬುದು ಗೊತ್ತಿದೆ” ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಆಕ್ರೋಶ.

ಬೆಳಗಾವಿಯ ಸರ್ಕಿಟ್ ಹೌಸ್‌ನ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಶುಕ್ರವಾರ ಪ್ರತಿಕ್ರಿಯೆ ನೀಡಿದರು. ರವಿ ಅವರ ಬಂಧನ ವಿಚಾರವಾಗಿ ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, “ಈ ಹಿಂದೆ ಸಿದ್ದರಾಮಯ್ಯರನ್ನು ಸಿದ್ರಾಮುಲ್ಲಾ ಖಾನ್ ಎಂದು ಕರೆದಿದ್ದರು. ಹೀಗೆ ನಮ್ಮ ನಾಯಕರ ವಿರುದ್ಧ ಬಹಳ ಕೀಳು ಮಟ್ಟದ ಪದ ಬಳಕೆ ಮಾಡಿದ್ದಾರೆ. ಇದು ಚಿಕ್ಕಮಗಳೂರು ಸಂಸ್ಕೃತಿಯೇ? ಭಾರತದ ಸಂಸ್ಕೃತಿಯೇ? ಬಿಜೆಪಿ ಸಂಸ್ಕೃತಿಯೇ? ಚಿಕ್ಕಮಗಳೂರಿನಲ್ಲಿ ಇಂತಹ ಸಂಸ್ಕೃತಿಯನ್ನು ನಾನು ಈವರೆಗೂ ನೋಡಿಲ್ಲ. ಇಡೀ ಚಿಕ್ಕಮಗಳೂರಿನಲ್ಲಿ ಇವನೊಬ್ಬನೇ ಇಷ್ಟು ಕೀಳು ಮಟ್ಟದ ಸಂಸ್ಕೃತಿ ಹೊಂದಿರುವ ವ್ಯಕ್ತಿ” ಎಂದು ಕಿಡಿಕಾರಿದರು.

“ಸದನದಲ್ಲಿ ಅಂಬೇಡ್ಕರ್‌ಗೆ ಕೇಂದ್ರ ಗೃಹಸಚಿವರು ಅಪಮಾನ ಮಾಡಿದ ಬಗ್ಗೆ ಚರ್ಚೆ ನಡೆಯುತ್ತಿತ್ತು. ಆ ಸಂದರ್ಭದಲ್ಲಿ ಈತ ರಾಹುಲ್ ಗಾಂಧಿ ಅವರನ್ನು ಮಾದಕ ವ್ಯಸನಿ ಎಂದು ನಿಂದಿಸಿದರು. ಹೀಗಾಗಿ ಲಕ್ಷ್ಮಿ ಹೆಬ್ಬಾಳ್ಕರ್ ಅವರು ತಮ್ಮ ಪಕ್ಷದ ನಾಯಕನ ಸಮರ್ಥನೆಗೆ ಮುಂದಾದಾಗ, ಆತ ನಮ್ಮ ಸಚಿವರನ್ನು ಹಲವು ಬಾರಿ ಪ್ರೊಸ್ಟಿ** ಎಂದು ಕರೆದಿದ್ದಾನೆ. ಬಿಜೆಪಿಯವರು ತಮ್ಮ ನಾಯಕನನ್ನು ಹೇಗೆ ಸಮರ್ಥನೆ ಮಾಡಿಕೊಂಡರೋ ಅದೇ ರೀತಿ ನಮ್ಮ ಸಚಿವರು ನಮ್ಮ ನಾಯಕರನ್ನು ಸಮರ್ಥನೆ ಮಾಡಿಕೊಳ್ಳುವುದು ತಪ್ಪೇ? ಅದಕ್ಕಾಗಿ ಇಂತಹ ಪದ ಬಳಸುವುದೇ? ಎಂದು ಪ್ರಶ್ನಿಸಿದರು.

“ಒಟ್ಟು 12 ಬಾರಿ ಈ ಅವಾಚ್ಯ ಪದ ಬಳಸಿ ನಿಂದಿಸಿದ್ದಾರೆ. ಮಾಧ್ಯಮಗಳು ಈ ಎಲ್ಲಾ ಅಂಶಗಳನ್ನು ಸೇರಿ ಸುದ್ದಿ ಪ್ರಕಟಿಸಬೇಕು. ನಿಮ್ಮ ಬಳಿ ದಾಖಲೆ ಇಲ್ಲವಾದರೆ ಹೇಳಿ ನಾನು ನೀಡುತ್ತೇನೆ” ಎಂದು ತಿಳಿಸಿದರು.



“ಪರಿಷತ್ತಿನಲ್ಲಿ ಗುರುವಾರದಂದು ನನ್ನ ಇಲಾಖೆಗಳಿಗೆ ಸಂಬಂಧಿಸಿದ 12 ಪ್ರಶ್ನೆಗಳಿದ್ದವು. ಅವುಗಳಿಗೆ ಉತ್ತರ ನೀಡಿ ನಾನು ವಿಧಾನಸಭೆಗೆ ಬಂದಾಗ ಈ ಘಟನೆ ನಡೆದಿದೆ” ಎಂದರು.

**ಸಭಾಪತಿಗಳ ನಡೆ ಬೇಸರ ತಂದಿದೆ: ಡಿಸಿಎಂ**

ಸಾಕ್ಷಿಗಳು ಇದ್ದರೆ ಸಭಾಪತಿಗಳು ಕ್ರಮ ಕೈಗೊಳ್ಳಬಹುದಿತ್ತಲ್ಲವೇ ಎಂದು ಕೇಳಿದಾಗ, “ಅವರು ಹಿರಿಯ ನಾಯಕರು. ಅವರ ಬಗ್ಗೆ ನನಗೆ ಗೌರವವಿದೆ. ಆದರೆ ಈ ವಿಚಾರದಲ್ಲಿ ಅವರ ನಡೆ ಬೇಸರ ತಂದಿದೆ. ಅವರು ಯಾವುದೇ ಪಕ್ಷದವರಾದರೂ ಸಭಾಪತಿ ಸ್ಥಾನದಲ್ಲಿ ಕೂತಾಗ ಎಲ್ಲರ ರಕ್ಷಣೆ ಮಾಡಬೇಕು. ಈ ವಿಚಾರವಾಗಿ ಅವರು ನಿನ್ನೆ ಚರ್ಚೆಗೆ ಅವಕಾಶ ನೀಡಬೇಕಿತ್ತು. ಅಲ್ಲಿ ಏನಾಗಿದೆ ಎಂದು ಪರಿಶೀಲನೆ ಮಾಡ ಬೇಕಿತ್ತು. ಒಂದು ವೇಳೆ ಲಕ್ಷ್ಮಿ ಹೆಬ್ಬಾಳ್ಕರ್ ಅವರ ತಪ್ಪಿದ್ದರೆ ಅವರದ್ದೆ ತಪ್ಪು ಎಂದು ಹೇಳಬೇಕಿತ್ತು. ಅದನ್ನು ಬಿಟ್ಟು ಇಬ್ಬರನ್ನು ಕರೆದುಕೊಂಡು ಹೋಗಿ ಹೇಳಿಕೆ ಬರೆಸಿಕೊಳ್ಳುವುದು ಸರಿಯಲ್ಲ. ಪೊಲೀಸರು ರಾತ್ರಿ ಪೂರ್ತಿ ತಿರುಗಾಡಿಸಿದ್ದಾರೆ ಎಂಬ ಆರೋಪದ ಬಗ್ಗೆ ಕೇಳಿದಾಗ, “ಪೊಲೀಸರು ಏನು ಮಾಡಿದ್ದಾರೆ ಗೊತ್ತಿಲ್ಲ. ಸುಮ್ಮನೆ ಆರೋಪ ಮಾಡುತ್ತಾರೆ. ಪೊಲೀಸರು ಬೇರೆಯವರಿಗಿಂತ ಹೆಚ್ಚು ಸೌಜನ್ಯ ತೋರಿದ್ದಾರೆ. ಪೊಲೀಸ್ ಠಾಣೆಯಲ್ಲಿ ಅವರ ಮನೆಯವರಿಗೆ ಅವಕಾಶ ನೀಡಲಿ. ಅದನ್ನು ಬಿಟ್ಟು ಖಾನಾಪುರ ಪೊಲೀಸ್ ಠಾಣೆಯಲ್ಲಿ ಬಿಜೆಪಿ ನಾಯಕರನ್ನು ಬಿಟ್ಟುಕೊಂಡು ಬಿಜೆಪಿ ಸಭೆ ಮಾಡುವುದು ಎಷ್ಟು ಸರಿ? ಈ ವಿಚಾರದಲ್ಲಿ ಪೊಲೀಸರ ನಡೆ ಸರಿಯಿಲ್ಲ. ನಾವು ಪೊಲೀಸರ ಕಾರ್ಯದಲ್ಲಿ ಹಸ್ತಕ್ಷೇಪ ಮಾಡುತ್ತಿಲ್ಲ. ಲಕ್ಷ್ಮಿ ಹೆಬ್ಬಾಳ್ಕರ್ ಕ್ಷೇತ್ರದಲ್ಲಿದ್ದರೂ ಅವರಿಗೆ ಯಾವುದೇ ತೊಂದರೆ ಆಗಲು ಅವಕಾಶ ನೀಡಿಲ್ಲ. ತಮ್ಮ ಶಾಸಕಿಗೆ ಅಪಮಾನ ಮಾಡಿದರೆ ಕ್ಷೇತ್ರದ ಜನ ರೊಚ್ಚಿಗೇಳುವುದು ಸಹಜ” ಎಂದರು.

# ಪೊಲೀಸ್ ಇಲಾಖೆ ಸರಕಾರದ ಕೈಗೊಂಬೆ: ಸುಧಾಕರ ರೆಡ್ಡಿ

ಬೆಂಗಳೂರು: ಮಾಜಿ ಸಚಿವರೂ ಆದ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರನ್ನು ಬಂಧಿಸಿ ರಾತ್ರಿ ಬೇರೆ ಬೇರೆ ಠಾಣೆಗಳಿಗೆ ಕರೆದೊಯ್ದು ಪೊಲೀಸರು ಅಮಾನುಷವಾಗಿ ವರ್ತಿಸಿದ್ದಾರೆ. ಅವರ ಮೇಲಿನ ಪೊಲೀಸ್ ದೌರ್ಜನ್ಯ ಖಂಡನೀಯ ಎಂದು ಬಿಜೆಪಿ ರಾಜ್ಯ ಸಹ ಉಸ್ತುವಾರಿ ಸುಧಾಕರ ರೆಡ್ಡಿ ತಿಳಿಸಿದ್ದಾರೆ. ಸಿ.ಟಿ.ರವಿ ಅವರು ಶಾಸಕರಾಗಿ, ಸಚಿವರಾಗಿ, ಪಕ್ಷದ ಹಿಂದಿನ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿಯಾಗಿ ಕೆಲಸ ಮಾಡಿದ್ದಾರೆ. ಅವರನ್ನು ಈ ರೀತಿ ನಡೆಸಿಕೊಂಡದ್ದು ಸರಿಯಲ್ಲ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ಖಂಡಿಸಿದ್ದಾರೆ.



ಪೊಲೀಸ್ ಇಲಾಖೆ ಸರಕಾರದ ಕೈಗೊಂಬೆಯಾಗಿ ಕೆಲಸ ಮಾಡುತ್ತಿದೆ. ಇದನ್ನು ನಾನು ಖಂಡಿಸುತ್ತೇನೆ. ಈ ರೀತಿ ವರ್ತಿಸುವುದು ಸರಿಯಲ್ಲ. ಘಟನೆಯನ್ನು ತಿಳಿದುಕೊಂಡು ಕಾನೂನಿನಂತೆ ಕ್ರಮ ಕೈಗೊಳ್ಳಬೇಕಿತ್ತು ಎಂದು ಒತ್ತಾಯಿಸಿದ್ದಾರೆ.

# ‘ರೇಷ್ಮೆ ಕೃಷಿ ಪದ್ಧತಿಯಲ್ಲಿ ಆಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಿ’

ಶಿಡ್ಲಘಟ್ಟ: ಮಾಹಿತಿ ಮತ್ತು ತಂತ್ರಜ್ಞಾನ ಯುಗದಲ್ಲಿ ತಾಂತ್ರಿಕತೆ ಸಹಕಾರಿ ಹಾಗೂ ರೇಷ್ಮೆ ಕೃಷಿಯಲ್ಲಿ ಸಹ ಬೆಳಗಾರರು ಆಧುನಿಕ ಪದ್ಧತಿಯನ್ನು ಅಳವಡಿಸಿಕೊಂಡು ಅಧಿಕ ಇಳುವರಿ ಪಡೆಯುವ ಜೊತೆಗೆ ಗುಣಮಟ್ಟ ಕಾಪಾಡಿಕೊಳ್ಳಬೇಕೆಂದು ರೇಷ್ಮೆ ಇಲಾಖೆಯ ಉಪನಿರ್ದೇಶಕ ಭೋಜಣ್ಣ ಕರೆ ನೀಡಿದರು.

ಕೃಷಿ ವಿಶ್ವವಿದ್ಯಾಲಯ ಬೆಂಗಳೂರು, ಕೌಶಲ್ಯ ಅಭಿವೃದ್ಧಿ ಕೇಂದ್ರ, ರೇಷ್ಮೆ ಕೃಷಿ ವಿಭಾಗ ಕೃಷಿ ಮಹಾವಿದ್ಯಾಲಯ ಜಿಕೆವಿಕೆ ಬೆಂಗಳೂರು ಮತ್ತು ಶಿಡ್ಲಘಟ್ಟ ರೇಷ್ಮೆ ಇಲಾಖೆಯ ಸಹಯೋಗದಲ್ಲಿ ಐಸಿಎಆರ್ ಎಸ್ಸಿ–ಎಸ್ಟಿ ಯೋಜನೆಯಡಿ ರೇಷ್ಮೆ ಕೃಷಿಕರಿಗೆ ಶಿಡ್ಲಘಟ್ಟ ನಗರದ ಮಾದರಿ ರೇಷ್ಮೆ ಬಿತ್ತನೆ ಕೋಠಿಯಲ್ಲಿ ಆಯೋಜಿಸಿದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.



ಬದಲಾದ ಯುಗದಲ್ಲಿ ತಂತ್ರಜ್ಞಾನ ಬೆಳೆಯುತ್ತಿದೆ ರೇಷ್ಮೆ ಬೆಳೆಗಾರರು ಆಧುನಿಕ ಉಪಕರಣಗಳನ್ನು ರೇಷ್ಮೆ ಕೃಷಿಯಲ್ಲಿ ಬಳಸಿಕೊಂಡು ಗುಣಮಟ್ಟದ ರೇಷ್ಮೆ ಉತ್ಪಾದನೆ ಮಾಡುವ ಜೊತೆಗೆ ಅಧಿಕ ಇಳುವರಿ ಪಡೆಯುವ ನಿಟ್ಟಿನಲ್ಲಿ ಗಮನ ಹರಿಸಬೇಕು ಹೆಚ್ಚಾಗಿ ರಾಸಾಯನಿಕ ಗೊಬ್ಬರಗಳನ್ನು ಬಳಸುವುದನ್ನು ನಿಯಂತ್ರಿಸಿ ಸಾವಯವ ಮತ್ತು ಕೊಟ್ಟಿಗೆ ಗೊಬ್ಬರವನ್ನು ಬಳಸಲು ಪ್ರಥಮ ಆದ್ಯತೆ ನೀಡಬೇಕೆಂದು ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಹಿಪ್ಪುನೇರಳೆಯಲ್ಲಿ ಸಮಗ್ರ ಪೋಷಕಾಂಶ ಕೀಟ ಮತ್ತು ರೋಗಗಳ ನಿರ್ವಹಣೆ ಜಿಕೆವಿಕೆ ಪ್ರೊಫೆಸರ್ ಡಾಕ್ಟರ್ ಮಂಜುನಾಥ್ ಗೌಡ, ವಿಜ್ಞಾನಿ ಡಾಕ್ಟರ್ ಅಮರನಾಥ್, ಡಾಕ್ಟರ್ ಅರುಣ ಕುಮಾರಿ ಅವರು ಮಾಹಿತಿ ನೀಡಿದರು.

ಸುಣ್ಣಕಟ್ಟು ರೋಗ ಮತ್ತು ಊಜಿ ಬೀಳುವುದನ್ನು ತಡೆಗಟ್ಟಲು ರೇಷ್ಮೆ ಇಲಾಖೆಯ ಸಹಾಯಕ ನಿರ್ದೇಶಕ ಅಕ್ಮಲ್ ಪಾಷ ಅವರು ಮಾಹಿತಿಯನ್ನು ನೀಡಿದರು.

ಇದೇ ವೇಳೆಯಲ್ಲಿ ಅನೇಕ ರೇಷ್ಮೆ ಬೆಳೆಗಾರರು ಸೌಲಭ್ಯಗಳನ್ನು ಒದಗಿಸಬೇಕೆಂದು ಮನವಿ ಮಾಡಿದರು.

ಶಿಡ್ಲಘಟ್ಟ ಸರ್ಕಾರಿ ರೇಷ್ಮೆ ಗೂಡು ಮಾರುಕಟ್ಟೆಯ ಸಹಾಯಕ ನಿರ್ದೇಶಕ ತಿಮ್ಮರಾಜು, ರೇಷ್ಮೆ ಬೆಳೆಗಾರರು, ರೇಷ್ಮೆ ಇಲಾಖೆಯ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

## ಸಿ.ಟಿ.ರವಿ ಅವರನ್ನು ಭಯೋತ್ಪಾದಕರಂತೆ ನಡೆಸಿಕೊಂಡ ಕಾಂಗ್ರೆಸ್: ಆಕ್ರೋಶ

ಬೆಳಗಾವಿ: ಮಾಜಿ ಸಚಿವರೂ ಆದ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರನ್ನು ರಾಜ್ಯ ಸರಕಾರದ ಕುಮ್ಮಕ್ಕಿನಿಂದ ಭಯೋತ್ಪಾದಕರಂತೆ ನಡೆಸಿಕೊಂಡಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಆಕ್ಷೇಪಿಸಿದ್ದಾರೆ.



ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಇಂತಹ ಘಟನೆ ರಾಜ್ಯ ಮಾತ್ರವಲ್ಲ, ಇಡೀ ದೇಶದಲ್ಲಿ ಆಗಿರಲು ಸಾಧ್ಯವಿಲ್ಲ ಎಂದು ವಿಶ್ಲೇಷಿಸಿದರು. ನಾಲ್ಕೈದು ಪೊಲೀಸ್ ಠಾಣೆಗೆ ಕರೆದೊಯ್ದು ಅಲ್ಲಿ ಕೂರಿಸಿದ್ದಾರೆ. ವಿಪಕ್ಷ ನಾಯಕರು, ವಕೀಲರನ್ನೂ ಒಳಕ್ಕೆ ಬಿಟ್ಟಿಲ್ಲ ಎಂದು ಖಂಡಿಸಿದರು.

ಸಿ.ಟಿ.ರವಿ ಅವರ ದೂರನ್ನೂ ರಿಜಿಸ್ಟರ್ ಮಾಡಿಲ್ಲ; ನಮ್ಮೆಲ್ಲ ಕಾರ್ಯಕರ್ತರು ರಾತ್ರಿ ಪೊಲೀಸ್ ಠಾಣೆ ಮುಂದೆ ಕುಳಿತು ಪ್ರತಿಭಟನೆ ಮಾಡಿದ್ದಾರೆ. ಸಿ.ಟಿ.ರವಿ ಅವರಿಗೆ ತಲೆಗೆ ಪೆಟ್ಟು ಬಿದ್ದಿದೆ. ಆಸ್ಪತ್ರೆಗೂ ಕರೆದುಕೊಂಡು ಹೋಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸರಕಾರದ ಕುಮ್ಮಕ್ಕಿನಿಂದ ಅತಿರೇಕದ ವರ್ತನೆ ತೋರಿದ್ದಾರೆ ಎಂದ ಅವರು, ಸಿ.ಟಿ.ರವಿ ಅವರ ಹೇಳಿಕೆ ಕುರಿತು ಸಭಾಪತಿಯವರ ರೂಲಿಂಗ್ ಅನ್ನೂ ಗಮನಿಸಬೇಕಿದೆ. ತದನಂತರ ಸುವರ್ಣಸೌಧಕ್ಕೆ ನುಗ್ಗಿ ಗೂಂಡಾವರ್ತನೆ ಮಾಡಿದ್ದು, ಬಳಿಕ ಸಿ.ಟಿ.ರವಿ ಅವರನ್ನು ಹೊತ್ತಾಕಿಕೊಂಡು ಹೋಗಿದ್ದಾರೆ.

ನಿನ್ನೆ ಪೊಲೀಸ್ ಠಾಣೆಗೆ ಹೊತ್ತಾಕಿಕೊಂಡು ಹೋಗಿ ಗದಗ, ರಾಮದುರ್ಗ ಸೇರಿ ಬೇರೆಬೇರೆ ಕಡೆ ಅಲೆದಾಡಿಸಿ ಒಂದು ರೀತಿ ಟೆರರಿಸ್ಟ್ ಅಂದುಕೊಳ್ಳುವಂತೆ ಮಾಡಿದ್ದಾರೆ. ಟೆರರಿಸ್ಟ್ ಅನ್ನು ಪೊಲೀಸರು ಕರೆದೊಯ್ದಿದ್ದಾರೆಂಬ ಭಾವನೆ ಬರುತ್ತಿದೆ. ಸರಕಾರದ ಕುಮ್ಮಕ್ಕಿನಿಂದ ಆ ರೀತಿ ವರ್ತನೆ ನಡೆದಿದೆ ಎಂದು ಖಂಡಿಸಿದರು.

ರವಿ ಅವರನ್ನು ಸುಮಾರು 450 ಕಿಮೀ ನಿಂದ 500 ಕಿಮೀ ಸುತ್ತಾಡಿಸಿದ್ದಾರೆ. ಇವರೇನು ಮಾಡಲು ಹೊರಟಿದ್ದಾರೆ? ಒಬ್ಬ ಜನಪ್ರತಿನಿಧಿಯನ್ನು ನಡೆಸಿಕೊಳ್ಳುವ ರೀತಿಯೇ ಇದು? ಪೊಲೀಸರ ಮೇಲೆ ಒತ್ತಾಯ, ಒತ್ತಡ ಹೇರಿ ದೌರ್ಜನ್ಯ ನಡೆಸುತ್ತಿದ್ದು, ಇದನ್ನು ಬಿಜೆಪಿ ತೀವ್ರವಾಗಿ ಖಂಡಿಸುತ್ತದೆ. ರಾಜ್ಯದ ಎಲ್ಲ ಜಿಲ್ಲಾ ಕೇಂದ್ರಗಳಲ್ಲಿ ಇವತ್ತು ಪ್ರತಿಭಟನೆ ಆಯೋಜಿಸಿದ್ದೇವೆ ಎಂದು ತಿಳಿಸಿದರು.

## ‘ಬೆಂಗಳೂರಿನ ಘನತ್ಯಾಜ್ಯ ಮಾಫಿಯಾ ಮಟ್ಟ ಹಾಕುತ್ತೇವೆ’

ಬೆಳಗಾವಿ

“ಬೆಂಗಳೂರಿನ ಹೊರ ವಲಯದಲ್ಲಿ ನಾಲ್ಕು ಕಡೆ ಘನತ್ಯಾಜ್ಯ ವಿಲೇವಾರಿ ಘಟಕ ಸ್ಥಾಪನೆಗೆ ಶೀಘ್ರವೇ ಟೆಂಡರ್ ಕರೆಯಲಾಗುವುದು. ಅದರ ಜತೆಗೆ ಬೆಂಗಳೂರಿನಲ್ಲಿರುವ ಘನತ್ಯಾಜ್ಯ ಮಾಫಿಯಾ ಮಟ್ಟ ಹಾಕಲಾಗುವುದು” ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.



ವಿಧಾನ ಪರಿಷತ್ತಿನ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯರಾದ ಬಿಜೆಪಿ ಸದಸ್ಯರಾದ ಕೇಶವ್ ಪ್ರಸಾದ್ ಅವರು ಘನತ್ಯಾಜ್ಯದ ಬಗ್ಗೆ ಕೇಳಿದ ಚುಕ್ಕೆ ಗುರುತಿನ 1275ನೇ ಪ್ರಶ್ನೆಗೆ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆದ ಶಿವಕುಮಾರ್ ಅವರು ಉತ್ತರಿಸಿದರು.

“ಸದಸ್ಯರು ಬಹಳ ಗಂಭೀರವಾದ ಪ್ರಶ್ನೆ ಎತಿದ್ದಾರೆ. ಇದು ದೊಡ್ಡ ಮಾಫಿಯಾವಾಗಿದ್ದು, ಈ ಮಾಫಿಯಾವನ್ನು ಯಾವ ಸರ್ಕಾರದ ಕಾಲದಲ್ಲೂ ನಿಲ್ಲಿಸಲು ಆಗಿಲ್ಲ. ಹೀಗಾಗಿ ಎಲ್ಲರೂ ಸಹಕಾರ ನೀಡಬೇಕು. ಈವರೆಗೂ ನನ್ನಿಂದ ಬಗೆಹರಿಸಲು ಸಾಧ್ಯವಾಗಿಲ್ಲ. ಇದಕ್ಕಾಗಿ ಪ್ರತ್ಯೇಕ ನೀತಿ ತರಬೇಕಿದೆ. ಬೆಂಗಳೂರು ಶಾಸಕರು ಈ ವಿಚಾರವಾಗಿ ನಮ್ಮ ಮೇಲೆ ಒತ್ತಡ ಹಾಕುತ್ತಿದ್ದಾರೆ. ಇದಕ್ಕಾಗಿ ಬೆಂಗಳೂರಿನ ಹೊರ ವಲಯದಲ್ಲಿ ನಾಲ್ಕು ದಿಕ್ಕುಗಳಲ್ಲಿ ಘನತ್ಯಾಜ್ಯ ವಿಲೇವಾರಿ ಕೇಂದ್ರ ಸ್ಥಾಪಿಸಲು ಮುಂದಾಗಿದ್ದೇವೆ. ದೆಹಲಿ, ಹೈದರಾಬಾದ್, ಚೆನ್ನೈಗಳಲ್ಲಿ ಅಳವಡಿಸಿಕೊಂಡಿರುವ ಮಾದರಿ ಪರಿಶೀಲಿಸಿದ್ದೇನೆ. ಸುಮಾರು 15 ಕಡೆಗಳಲ್ಲಿ ತ್ಯಾಜದಿಂದ ಇಂಧನ ಉತ್ಪಾದನೆಗೆ ಅವಕಾಶ ನೀಡಿದ್ದೆವು. ಎಲ್ಲವೂ ವಿಫಲವಾಗಿದೆ. ಬಿಡದಿಯಲ್ಲಿ ಮಾತ್ರ ಇದನ್ನು ನಡೆಸುತ್ತಿದ್ದಾರೆ” ಎಂದು ತಿಳಿಸಿದರು.

“ಬೆಂಗಳೂರಿನಿಂದ 15 ಕಿ.ಮೀ ದೂರದಲ್ಲಿ ಹೊರವಲಯದಲ್ಲಿ ನಾಲ್ಕು ಕಡೆ 100 ಎಕರೆ ಜಮೀನು ಗುರುತಿಸಲಾಗಿದೆ. ಶೀಘ್ರವೇ ಟೆಂಡರ್ ಕರೆದು ಶಾಶ್ವತ ಪರಿಹಾರ ನೀಡಲು ಪ್ರಯತ್ನಿಸಲಾಗುತ್ತಿದೆ. ಇತ್ತೀಚೆಗೆ ಕಸದ ಟೆಂಡರ್ ವಿಚಾರದಲ್ಲಿ ನಿಮ್ಮ ಪಕ್ಷದ ಅದ್ಯಕ್ಷರೊಬ್ಬರು ನಾನು 15 ಸಾವಿರ ಕೋಟಿ ಲೂಟಿ ಮಾಡಿರುವುದಾಗಿ ಪತ್ರಿಕೆಗಳಲ್ಲಿ ವರದಿ ನೀಡಿ ಬ್ಲಾಕ್ ಮೇಲ್ ಮಾಡುವ ಪ್ರಯತ್ನ ಮಾಡಿದ್ದ. ಈ ಬೆದರಿಕೆಗೆ ಹೆದರುವ ಮಗ ನಾನಲ್ಲ. ನಮ್ಮ ಸರ್ಕಾರ ಕೂಡ ಇದಕ್ಕೆ ಜಗ್ಗುವುದಿಲ್ಲ. ಈ ವಿಚಾರದಲ್ಲಿ ಕೆಲವು ಗಂಭೀರ ವಿಚಾರಗಳಿವೆ. ಈ ವ್ಯವಸ್ಥೆಯಲ್ಲಿ ಪಾರದರ್ಶಕತೆ ತರುವ ಪ್ರಯತ್ನ ಮಾಡುತ್ತಿದ್ದೇವೆ. ಸಿಎನ್ ಜಿ ಅನಿಲ ಉತ್ಪಾದನೆಗೆ ಅವಕಾಶವಿದೆ. ಈ ವಿಚಾರವಾಗಿ ಬೆಂಗಳೂರಿನ ಬಿಜೆಪಿ ಶಾಸಕರು ಕೂಡ ಒಪ್ಪಿದ್ದಾರೆ. ಶೀಘ್ರದಲ್ಲೇ ಅಂತಿಮ ಪರಿಹಾರ ನೀಡಲಾಗುವುದು. ಮೂರು ನಾಲ್ಕು ದಿನಗಳಲ್ಲಿ ಈ ವಿಚಾರವಾಗಿ ಟೆಂಡರ್ ಕರೆಯಲಾಗುವುದು” ಎಂದು ತಿಳಿಸಿದರು.


“ನಾವು ನಾಲ್ಕು ಭಾಗಗಳಲ್ಲಿನ ಕಸ ವಿಲೇವಾರಿ ಘಟಕಕ್ಕೆ ಸಧ್ಯದಲ್ಲೇ ಟೆಂಡರ್ ಕರೆಯಲಿದ್ದು, ಯಾರು ಬೇಕಾದರೂ ಭಾಗವಹಿಸಬಹುದು. ಇಲ್ಲಿ ಮಾಫಿಯಾ ನಡೆಸುತ್ತಿರುವವರು ಅವರವರೇ ಟೆಂಡರ್ ಕರೆಯುತ್ತಿದ್ದು, ಈ ವಿಚಾರ ನ್ಯಾಯಾಲಯದಲ್ಲಿದೆ. ಶೀಘ್ರವೇ ಈ ಪ್ರಕರಣದಲ್ಲಿ ತೀರ್ಪು ಪ್ರಕಟವಾಗಲಿದ್ದು, ತೀರ್ಪು ಬಂದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಈ ವಿಚಾರವಾಗಿ ನಿಮ್ಮೆಲ್ಲರ ಸಲಹೆ ಸ್ವೀಕರಿಸಲು ನಾವು ಸಿದ್ಧ” ಎಂದು ತಿಳಿಸಿದರು.

ಬಿಜೆಪಿ ಸದಸ್ಯರಾದ ತಳವಾರ ಸಾಬಣ್ಣ ಅವರು ಭೀಮಾ ನದಿ ನೀರನ್ನು ಮಹಾರಾಷ್ಟ್ರ ಅಕ್ರಮವಾಗಿ ಬಳಸಿಕೊಳ್ಳುತ್ತಿರುವ ವಿಚಾರವಾಗಿ ಕೇಳಿದ ಪ್ರಶ್ನೆಗೆ ನೀರಾವರಿ ಸಚಿವರೂ ಆದ ಶಿವಕುಮಾರ್ ಅವರು ಉತ್ತರಿಸಿದರು.

“ಗಡಿ ಪ್ರದೇಶ ಭಾಗದಲ್ಲಿ ಬೇಸಿಗೆ ಸಮಯದಲ್ಲಿ ಸಮಸ್ಯೆಯಾದಾಗ ಈ ರೀತಿ ಒತ್ತಡಗಳು ಬರುತ್ತವೆ. ನಾನು ವಾಸ್ತವಾಂಶ ನೀಡಿದ್ದೇನೆ. ನೀರು ಹೆಚ್ಚಾಗಿದ್ದಾಗ ಅವರು ಹರಿಸುತ್ತಾರೆ. ನೀರು ಕಡಿಮೆಯಾಗಿದ್ದಾಗ ನೀರು ಇಲ್ಲ ಎನ್ನುತ್ತಾರೆ.

## ‘ದೇವಾಲಯಗಳ 10,700 ಎಕರೆ ಸರ್ಕಾರದ ರಕ್ಷಣೆಯಲ್ಲಿ’

ಬೆಂಗಳೂರು: ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ಅವರಿಂದಾಗಿ ರಾಜ್ಯದ ದೇವಾಲಯಗಳ 10,700 ಎಕರೆ ಆಸ್ತಿಯನ್ನು ದೇವಾಲಯಗಳ ಸುಪರ್ದಿಯಲ್ಲಿರಿಸಲಾಗಿದ್ದು ರಾಜ್ಯ ಸರ್ಕಾರದ ರಕ್ಷಣೆಯಲ್ಲಿವೆ ಎಂದು ಸಾರಿಗೆ ಹಾಗೂ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.



ಕೆಲವು ಟ್ರಸ್ಟ್‌ಗಳು, ಸಂಘಟನೆಗಳು, ಅನ್ಯರು ಮತ್ತು ಪ್ರಭಾವಿಗಳು ಈ ಆಸ್ತಿಯನ್ನು ಕಬಳಿಕೆ ಮಾಡಿಕೊಂಡಿದ್ದವು. ಈ ಹಿಂದಿನ ಬಿಜೆಪಿ ಸರ್ಕಾರ ದೇವಾಲಯಗಳ ಆಸ್ತಿಯನ್ನು ಉಳಿಸಿ ಕೊಳ್ಳುವಲ್ಲಿ ಪ್ರಯತ್ನಿಸಿರಲಿಲ್ಲ. ವಿನಾಕಾರಣ ದೇವರು ಮತ್ತು ಧರ್ಮದ ಹೆಸರಿನಲ್ಲಿ ರಾಜಕಾರಣ ಮಾಡಿಕೊಂಡು ಬಂತು. ರಾಜ್ಯ ಕಾಂಗ್ರೆಸ್ ಸರ್ಕಾರ ಈ ಜಮೀನುಗಳನ್ನು ಉಳಿಸಿ ಕೊಂಡಿದೆ. 5022 ಆಸ್ತಿಗಳಿಗೆ ಕಂದಾಯ ಇಲಾಖೆಯಿಂದ ಸೂಕ್ತ ದಾಖಲೆಗಳನ್ನು ಕ್ರೋಢೀಕರಿಸಿ ದೇವಾಲಯಗಳಿಗೆ ಮೀಸಲಿರಿಸಲಾಗಿದೆ. ಮುಜರಾಯಿ ಇಲಾಖೆಗೆ ಸೇರಿದ 34,564 ದೇವಸ್ಥಾನಗಳ ಪೈಕಿ ಬಹುತೇಕ ದೇವಸ್ಥಾನಗಳಿಗೆ ಸರ್ಕಾರ ಮತ್ತು ದಾನಿಗಳು ದೇಣಿಗೆ ನೀಡಿದ್ದಾರೆ. ಬಹುತೇಕ ದೇವಾಲಯಗಳ ಆಸ್ತಿ ಖಾಸಗಿಯವರ ಪಾಲಾಗಿತ್ತು. ಕಳೆದ ಒಂದೂವರೆ ವರ್ಷಗಳ ಅವಧಿಯಲ್ಲಿ ದೇವಾಲಯಗಳ ಸರ್ವೇ ಕಾರ್ಯ ನಡೆಸಿ 10,700 ಎಕರೆ ಸ್ಥಳವನ್ನು ದೇವಾಲಯಗಳಿಗೆ ನೀಡಲಾಗಿದೆ ಎಂದಿದ್ದಾರೆ.

ರಾಜ್ಯದಲ್ಲಿ 34,166ಸಿ ದರ್ಜೆಯ ದೇವಾಲಯಗಳು, 193ಬಿ ದರ್ಜೆಯ ದೇವಸ್ಥಾನಗಳು ಮತ್ತು 205ಎ ದರ್ಜೆಯ ದೇವಾಲಯಗಳಿವೆ. ಈ ದೇವಸ್ಥಾನಗಳಿಗೆ ದಾನಿಗಳು ಮತ್ತು ಸರ್ಕಾರದಿಂದ ನೀಡಿದ್ದ ಸಾವಿರಾರು ಎಕರೆ ಜಮೀನು ಇತ್ತು. ಆದರೆ ದಾಖಲೆಗಳು ಇರಲಿಲ್ಲ. ಕಂದಾಯ ಇಲಾಖೆ ಎಲ್ಲ ದೇವಾಲಯಗಳ ದಾಖಲೆಯನ್ನು ನೀಡಿದೆ. ಬಿಜೆಪಿಯವರು ದೇವರು ಮತ್ತು ಧರ್ಮದ ಹೆಸರಿನಲ್ಲಿ ರಾಜಕೀಯ ಮಾಡುತ್ತಾರೆ. ಎಂದಿಗೂ ಅವರು ದೇವಸ್ಥಾನಗಳನ್ನು ಉಳಿಸಿಕೊಳ್ಳುವ ಮತ್ತು ಆಸ್ತಿಗಳ ದಾಖಲೆಗಳನ್ನು ಸಿದ್ಧಪಡಿಸುವ ಕೆಲಸ ಮಾಡಿರಲಿಲ್ಲ. ಕನಿಷ್ಟ ಅಭಿವೃದ್ಧಿಯತ್ತ ಗಮನ ಹರಿಸಿಲ್ಲ. ನಮ್ಮ ಕಾಂಗ್ರೆಸ್ ಸರ್ಕಾರ ಹಿಂದೂ ದೇವಾಲಯಗಳ ರಕ್ಷಣೆಯನ್ನು ಬದ್ಧತೆಯಿಂದ ಮಾಡಿದೆ ಎಂದು ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ.

ದೇವಸ್ಥಾನಗಳ ಆಸ್ತಿಯನ್ನು ಒತ್ತುವರಿ ಮಾಡಿಕೊಂಡಿದ್ದ ಖಾಸಗಿಯವರಿಗೆ ಮನವೊಲಿಸಿದ್ದೇವೆ. ದೇವಸ್ಥಾನಗಳಿಗೆ ಮರಳಿ ಒದಗಿಸಿದ್ದೇವೆ. ದಾಖಲೆ ಇಲ್ಲದಿದ್ದ ದೇವಸ್ಥಾನಗಳ ಆಸ್ತಿಯನ್ನು ಕಂದಾಯ ಇಲಾಖೆಯಿಂದ ದಾಖಲೆ ಸೃಷ್ಟಿಸಿ ದೇವಾಲಯಗಳಿಗೆ ಸಮರ್ಪಿಸಲಾಗಿದೆ. ಅಭಿಯಾನದ ಮಾದರಿಯಲ್ಲಿ ಮುಜರಾಯಿ ಇಲಾಖೆ ದೇವಸ್ಥಾನಗಳ ಆಸ್ತಿಯನ್ನು ಉಳಿಸಿಕೊಂಡಿದ್ದರಿಂದ ಕಂದಾಯ ಇಲಾಖೆಯ ಸಹಯೋಗದಲ್ಲಿ 5022 ಆಸ್ತಿಗಳನ್ನು ಇಲಾಖೆಯ ಸುಪರ್ದಿಗೆ ಪಡೆಯಲಾಗಿದೆ ಎಂದು ಸಚಿವ ರಾಮಲಿಂಗಾರೆಡ್ಡಿ ತಿಳಿಸಿದರು.

## ಯುವನಿಧಿ: ನೋಂದಣಿ ಪ್ರಕ್ರಿಯೆಯ ಪೋಸ್ಟರ್ ಬಿಡುಗಡೆ

ರಾಮನಗರ: ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ವತಿಯಿಂದ ಯುವ ಜನತೆಯ ಉಜ್ವಲ ಭವಿಷ್ಯಕ್ಕಾಗಿ ಕರ್ನಾಟಕ ಸರ್ಕಾರದ ಗ್ಯಾರಂಟಿ ಯೋಜನೆಯಾದ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಆರಂಭದ ಕುರಿತು ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕರ್ ಅವರು ಡಿ. 20ರ ಶುಕ್ರವಾರ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪೋಸ್ಟರ್ ಹಾಗೂ ಬ್ಯಾನರ್ ಬಿಡುಗಡೆ ಮಾಡಿದರು.




ಈ ಸಂದರ್ಭದಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಕೆ.ರಾಜು, ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ವಿ.ಹೆಚ್.ರಾಜು, ಜಿಲ್ಲಾ ಉದ್ಯೋಗಾಧಿಕಾರಿ ಎಂ.ಆರ್. ಗೋವಿಂದರಾಜು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಸಹಾಯಕ ನಿರ್ದೇಶಕರಾದ ಲತಾ ಹಾಗೂ ಇತರರು ಉಪಸ್ಥಿತರಿದ್ದರು.

## ಎಐಸಿಸಿ ಶತಮಾನೋತ್ಸವ ಪ್ರತಿಯೊಬ್ಬ ಕಾಂಗ್ರೆಸ್ಸಿಗರಿಗೂ ಹೆಮ್ಮೆಯ ವಿಷಯ

ಚಿಕ್ಕಬಳ್ಳಾಪುರ: ಇದೇ 27ರಂದು ಬೆಳಗಾವಿಯಲ್ಲಿ ನಡೆಯಲಿರುವ ಎಐಸಿಸಿ ಶತಮಾನೋತ್ಸವ ಸಮಾರಂಭದಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯಿಂದ ನೂರಾರು ಸಂಖ್ಯೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಭಾಗವಹಿಸುವರು ಎಂದು ಜಿಲ್ಲಾ ಉಸ್ತುವಾರಿ ಹಾಗೂ ಉನ್ನತ ಶಿಕ್ಷಣ ಇಲಾಖೆ ಸಚಿವ ಡಾ.ಎಂ.ಸಿ.ಸುಧಾಕರ್ ತಿಳಿಸಿದರು.

ನಗರದ ಹೊರವಲಯದ ಶ್ರೀಸಿಯೇರಾ ಸಭಾಂಗಣದಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಏರ್ಪಡಿಸಿದ್ದ ಕಾಂಗ್ರೆಸ್ ಮುಖಂಡರ ಹಾಗೂ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಮಾತನಾಡಿ,



ಬೆಳಗಾವಿಯಲ್ಲಿ ನಡೆಯಲಿರುವ ಕಾಂಗ್ರೆಸ್ ಎಐಸಿಸಿ ಶತಮಾನೋತ್ಸವ ಸಮಾರಂಭ ಪ್ರತಿಯೊಬ್ಬ ಕಾಂಗ್ರೆಸ್ಸಿಗರಿಗೂ ಹೆಮ್ಮೆಯ ವಿಷಯವಾಗಲಿದೆ ಎಂದರು.

ಈಗಾಗಲೇ ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಈ ಬಗ್ಗೆ ಸೂಕ್ತ ವ್ಯವಸ್ಥೆ ಮಾಡಿಕೊಳ್ಳಲು ಆಯಾ ಕಾಂಗ್ರೆಸ್ ಮುಖಂಡರುಗಳಿಗೆ ಹಾಗೂ ಕಾಂಗ್ರೆಸ್ ಪಕ್ಷದ ಶಾಸಕರುಗಳಿಗೆ ತಿಳಿಸಲಾಗಿದೆ ಎಂದ ಅವರು ಬೆಳಗಾವಿ ಚಳಿಗಾಲ ಅಧಿವೇಶನದಲ್ಲಿ ನಡೆದ ಸಿ.ಟಿ. ರವಿ ಪ್ರಕರಣದ ಬಗ್ಗೆ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವರು ಸಿ.ಟಿ.ರವಿ ರವರು ಇಂತಹ ಮಟ್ಟಕ್ಕೆ ಮಾತನಾಡಬಾರದಿತ್ತು ಅವರು ತಪ್ಪು ಮಾಡಿದ್ದಾರೆ ಅವರಿಗೆ ಶಿಕ್ಷೆ ಆಗಲೇಬೇಕು ಎಂದರು. ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದಿಂದ ಇನ್ನೂ ಸಮಿತಿಗಳ ರಚನೆ ಆಗದಿರುವ ಬಗ್ಗೆ ಸುದ್ದಿಗಾರರು ಪ್ರಶ್ನಿಸಿದ ಪ್ರಶ್ನೆಗೆ ಉತ್ತರಿಸಿ ಈಗಾಗಲೇ ಚಿಂತಾಮಣಿ ಬಾಗೇಪಲ್ಲಿ ತಾಲ್ಲೂಕುಗಳಲ್ಲಿ ಆಗಿದೆ ಶೀಘ್ರದಲ್ಲಿಯೇ ಚಿಕ್ಕಬಳ್ಳಾಪುರದಲ್ಲೂ ಸಮಿತಿಗಳ ರಚನೆ ಆಗಲಿದೆ ಎಂದರು.

ಇನ್ನು ನಂದಿ ಬೆಟ್ಟಕ್ಕೆ ರೋಪ್ ವೇ ಅಳವಡಿಸುವ ಬಗ್ಗೆ ಸುದ್ದಿಗಾರರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು ನಂದಿ ಬೆಟ್ಟಕ್ಕೆ ರೂಪುವೆ ಕ್ರಮ ಶೀಘ್ರಗತಿಯಲ್ಲಿ ಆಗಲಿದ್ದು ಇದಕ್ಕೆ ಯಾವುದೇ ತರನಾದ ಪರಿಸರಕ್ಕೆ ಹಾನಿ ಆಗದಂತೆ ನಿರ್ಮಾಣ ಮಾಡಲಾಗುವುದು ಎಂದರು. ಕಾರ್ಯಕ್ರಮದಲ್ಲಿ ಜಿ.ಪಂ. ಮಾಜಿ ಅಧ್ಯಕ್ಷ ಗಂಗರೆ ಕಾಲುವೆ ನಾರಾಯಣಸ್ವಾಮಿ, ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷ ನಂದಿ.ಎಂ.ಅಂಜನಪ್ಪ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಮುನೇಗೌಡ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಸ್ ಸೂರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಯರಾಮ್, ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಅಡಗಲ್ ಶ್ರೀಧರ್ ಮಹಿಳಾ ಮುಖಂಡರುಗಳಾದ ಉಷಾಶ್ರೀನಿವಾಸ್ ಬಾಬು, ಮಮತಾ ಮೂರ್ತಿ, ಮಂಗಳಪ್ರಕಾಶ್ ನಾರಾಯಣಮ್ಮ, ನಗರಸಭೆ ಹಿರಿಯ ಸದಸ್ಯ ಎಸ್ ಎಂ ರಫೀಕ್ ಕೆಪಿಸಿಸಿ ಮಾಹಿತಿ ಮಾನವ ಹಕ್ಕು ವಿಭಾಗದ ಪ್ರಧಾನ ಕಾರ್ಯದರ್ಶಿ ಎಂ.ಎಸ್.ಸಂದೀಪ್ ಚಕ್ರವರ್ತಿ ಮಾಜಿ ಶಾಸಕರಾದ ಅನಸೂಯಮ್ಮನಟರಾಜ್, ಕೆಪಿ ಬಚ್ಚೇಗೌಡ , ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಾಜೇಶ್, ಕೆ ಪಿ. ಸಿ. ಸಿ ಉಸ್ತುವಾರಿ ಮುರಳಿ, ಕಳವಾರ ಶ್ರೀಧರ್ ನಗರಸಭಾ ಸದಸ್ಯರಾದ ಎಸ್. ಎಂ. ರಫೀಕ್, ಅಂಬರೀಶ್, ನರಸಿಂಹಮೂರ್ತಿ, ಜಾತವಾರ ರಾಮಕೃಷ್ಣ, ಯಾಸ್ಮಿನ್, ನಾರಾಯಣಮ್ಮ, ಯಲುವಹಳ್ಳಿ ಜನಾರ್ಧನ್ರಮೇಶ್, ಕೆಸಿ. ರಾಜಕಾಂತ್,, ಸುಮಿತ್ರಾನಾರಾಯಣಸ್ವಾಮಿ, ಮುನೇಗೌಡ ನಾಯನಹಳ್ಳಿ ನಾರಾಯಣಸ್ವಾಮಿ, ಭರಣಿ ವೆಂಕಟೇಶ್, ಕೊಂಡೇನಹಳ್ಳಿ ಚಂದ್ರಪ್ಪ, ಅಜಿತ್ ಪ್ರಸಾದ್,ಕೋನಪಲ್ಲಿ ಕೋದಂಡ, ಕೆಳಗಿನ ತೋಟ ಗೋಪಿ ಜಿಲ್ಲೆಯ ಚಿಂತಾಮಣಿ ಶಿಡ್ಲಘಟ್ಟ, ಮುಖಂಡರು ಅಧಿಕಾರಿಗಳು ಇದ್ದರು.

## ಅಣ್ಣಾಮಲೈ ಬಂಧನ

ಚೆನ್ನೈ: ಕೊಯಮತ್ತೂರು ಬಾಂಬ್ ಸ್ಫೋಟ ಪ್ರಕರಣದ ಆರೋಪಿಗಳಿಗೆ ಡಿಎಂಕೆ ಸರ್ಕಾರ ಬೆಂಬಲ ನೀಡಿದೆ ಎಂದು ಟೀಕಿಸಿ ಪ್ರತಿಭಟನೆ ನಡೆಸುತ್ತಿದ್ದ ಬಿಜೆಪಿ ರಾಜ್ಯಾಧ್ಯಕ್ಷ ಅಣ್ಣಾಮಲೈ ಸೇರಿದಂತೆ ಬಿಜೆಪಿ ಕಾರ್ಯಕರ್ತರನ್ನು ಬಂಧಿಸಲಾಗಿದೆ. 1998 ರ ಕೊಯಮತ್ತೂರು ಬಾಂಬ್ ಸ್ಫೋಟದಲ್ಲಿ 58 ಜನರ ದುರಂತ ಸಾವಿಗೆ ಕಾರಣವಾದ ಭಯೋತ್ಪಾ ದಕನನ್ನು ವೈಭವೀಕರಿಸುವುದನ್ನು ವಿರೋಧಿಸಿ ಬಿಜೆಪಿ ಪ್ರತಿಭಟನೆ ನಡೆಸಿತು. ಪ್ರತಿಭಟನೆಯ ನೇತೃತ್ವ ವಹಿಸಿದ್ದ ಅಣ್ಣಾಮಲೈ ಮತ್ತು ಇತರ ಬಿಜೆಪಿ ನಾಯಕರನ್ನು ಬಂಧಿಸಲಾಗಿದೆ.

## ಬರಹಗಳನ್ನು ಬಿಡಿಸುವ ಮೂಲಕ ಜನಜಾಗೃತಿಗೆ ಮುಂದಾದ ಪುರಸಭೆ

ರಾಮನಗರ: ಸಾರ್ವಜನಿಕರು ಎಲ್ಲೆಂದರಲ್ಲಿ ಕಸ ಹಾಕುವುದನ್ನು ತಡೆಯಲು ಸ್ಥಳೀಯ ಪುರಸಭೆ ಸಿಸಿ ಕ್ಯಾಮೆರಾ ಅಳವಡಿಕೆ ಜತೆಗೆ ಕಾಂಪೌಂಡ್ ಗೋಡೆಗಳ ಮೇಲೆ ಛಾಯಚಿತ್ರ ಮತ್ತು ಬರಹಗಳನ್ನು ಬಿಡಿಸುವ ಮೂಲಕ ಜನಜಾಗೃತಿಗೆ ಮುಂದಾಗಿದೆ.




ಬಿಡದಿ ಪಟ್ಟಣದಲ್ಲಿ ಬೇಕಾಬಿಟ್ಟಿ ರಸ್ತೆ ಬದಿಯಲ್ಲಿ ಹಾಗೂ ಖಾಲಿಯಿರುವ ಜಾಗದಲ್ಲಿ ಕಸ ಸುರಿಯುವುದನ್ನು ಸ್ಥಳೀಯ ಪುರಸಭೆ ನಿಷೇಧಿಸಿದೆ. ಹಾಗಿದ್ದರೂ ಕೆಲವರು ರಾತ್ರಿ ವೇಳೆ ಮತ್ತು ಬೆಳಗಿನ ಜಾವದಲ್ಲಿ ಕಸವನ್ನು ತಂದು ರಸ್ತೆ ಬದಿಯಲ್ಲಿ ಎಸೆದು ಹೋಗುವುದು ತಪ್ಪಿಲ್ಲ. ಎಚ್ಚರಿಕೆಯ ನಡುವೆಯೂ ಕಸವನ್ನು ಒಂದೇ ಜಾಗದಲ್ಲಿ ತಂದು ಹಾಕುವ ಸ್ಥಳಗಳನ್ನು ಗುರುತಿಸಿ ಅದನ್ನು “ಬ್ಲಾಕ್‌ಸ್ಪಾಟ್” ಎಂದು ಗುರುತಿಸಲಾಗಿದೆ. ಈ ಸ್ಥಳದಲ್ಲಿ ಸಿಸಿ ಕ್ಯಾಮೆರಾ ಅಳವಡಿಸುವ ಜತೆಗೆ ಗೋಡೆ ಬರಹಗಳನ್ನು ಬಿಡಿಸಿ ಗಿಡಗಳಿಂದ ಅಲಂಕರಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಪುರಸಭೆ 9ನೇ ವಾರ್ಡ್ ವ್ಯಾಪ್ತಿಯ ಪೊಲೀಸ್ ವಸತಿಗೃಹಗಳ ಸಂಕೀರ್ಣದ ಹಾಗೂ ಸಿಲ್ಕ್ ಫಾರಂ ನಡುವೆ ಹಾದುಹೋಗುವ ರಸ್ತೆ ಬದಿಯಲ್ಲಿ ಎಚ್ಚರಿಕೆ ನೀಡಿದರೂ ಕೆಲವರು ಪ್ರತಿದಿನ ಯಥೇಚ್ಛವಾಗಿ ಕಸವನ್ನು ತಂದು ಸುರಿಯತ್ತಿದ್ದರು. ಹೀಗಾಗಿ ಸದರಿ ಜಾಗವನ್ನು ರೂಪಾಂತರಗೊಳಿಸಲು ಸಿಸಿ ಕ್ಯಾಮೆರಾ ಅಳವಡಿಸಿದ್ದು ಪ್ರಪ್ರಥಮವಾಗಿ ಪೊಲೀಸ್ ಕ್ವಾಟ್ರಸ್ ಕಾಂಪೌಂಡ್ ಗೋಡೆಯ ಮೇಲೆ ಛಾಯಚಿತ್ರಗಳನ್ನು ಬಿಡಿಸಿ, ಗಿಡಗಳಿಂದ ಅಲಂಕರಿಸಲು ಪುರಸಭೆ ಅಧಿಕಾರಿಗಳು ಕ್ರಮ ಕೈಗೊಂಡಿದ್ದಾರೆ.

ಈ ವೇಳೆ ಬಿಡದಿ ಪುರಸಭೆ ಅಧ್ಯಕ್ಷ ಎಂ.ಎನ್. ಹರಿಪ್ರಸಾದ್ ಮಾತನಾಡಿ, ಕಸ ಸಂಗ್ರಹಣೆಗಾಗಿ ಪ್ರತಿದಿನ ಪುರಸಭೆ ವ್ಯಾಪ್ತಿಯಲ್ಲಿ ಮನೆ ಮನೆಗೆ ವಾಹನ ಮತ್ತು ಸಿಬ್ಬಂದಿಯನ್ನು ಕಳುಹಿಸಲಾಗುತ್ತಿದೆ. ಆದರೂ ಕೆಲವರು ರಸ್ತೆ ಬದಿಯಲ್ಲಿ ಕಸ ಎಸೆಯುವುದನ್ನು ನಿಲ್ಲಿಸಿಲ್ಲ. ಜಾಗೃತಿ ಹಾಗೂ ಎಚ್ಚರಿಕೆ ಫಲಕ ಹಾಕಿದರೂ ತ್ಯಾಜ್ಯ ತಂದು ಸುರಿಯುವುದು ನಿರಂತರವಾಗಿದೆ. ಹಾಗಾಗಿ ಮೊದಲಿಗೆ ಪಟ್ಟಣದಲ್ಲಿ ಕಾಂಪೌಂಡ್ ಗೋಡೆಗಳ ಮೇಲೆ ನಾಡು-ನುಡಿ, ಕನ್ನಡದ ಹಿರಿಮೆ ಸಾರುವ ಸ್ಮಾರಕಗಳು, ಮಹನೀಯರ ಭಾವಚಿತ್ರಗಳು ಹಾಗೂ ಜಾಗೃತಿ ಕುರಿತ ಮಾಹಿತಿಗಳ ಚಿತ್ರ ಬಿಡಿಸಲು ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಸ್ಥಾಯಿಸಮಿತಿ ಅಧ್ಯಕ್ಷ ಬಿ.ಜಿ.ಲೋಹಿತ್‌ಕುಮಾರ್, ಪರಿಸರ ಎಂಜಿನಿಯರ್ ಬಿ.ಎಸ್.ನಮಸ್ಕೃತ ಸೇರಿದಂತೆ ಅಧಿಕಾರಿಗಳು ಇದ್ದರು.

## ‘ಪದ ಬಳಸಿದ್ದು ಸುಳ್ಳಾಗಿದ್ದರೆ ಅರೆಸ್ಟ್ ಯಾಕೆ..?’

ಮಂಡ್ಯ: ಸಾಮಾನ್ಯವಾಗಿ ಯಾವ ಹೆಣ್ಣುಮಕ್ಕಳೂ ಇಂತಹ ಆರೋಪಗಳ ಬಗ್ಗೆ ಸುಳ್ಳು ದೂರು ಕೊಡಲು ಸಾಧ್ಯವಿಲ್ಲ. ಅವಾಚ್ಯ ಪದ ಬಳಕೆ ಆರೋಪ ಸುಳ್ಳಾಗಿದ್ದರೆ ಸಿ.ಟಿ.ರವಿಯವರ ಬಂಧನವೇಕಾಯಿತು ಎಂದು ಸಿಎಂ ಸಿದ್ದರಾಮಯ್ಯ ಪ್ರಶ್ನಿಸಿದರು.

ಶುಕ್ರವಾರ ಸಿ.ಟಿ.ರವಿಯವರನ್ನು ಬೆಂಬಲಿಸಿ ಬಿಜೆಪಿ ಪ್ರತಿಭಟನೆ ನಡೆಸುತ್ತಿರುವುದರ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದರು.

ಹೆಣ್ಣುಮಕ್ಕಳಿಗೆ ಇಷ್ಟು ಕೆಟ್ಟ ಭಾಷೆಯಲ್ಲಿ ಅವಹೇಳನಕಾರಿಯಾಗಿ ಮಾತನಾಡಿರುವುದನ್ನು ಬಿಜೆಪಿಯವರು ಬೆಂಬಲಿಸುತ್ತಿದ್ದಾರೆ. ಸಿ.ಟಿ.ರವಿಯವರು ಕೀಳುಭಾಷೆ ಬಳಸಿದ್ದನ್ನು ಸ್ಥಳದಲ್ಲಿದ್ದವರು ಕೇಳಿಸಿಕೊಂಡಿದ್ದಾರೆ. ಅಷ್ಟು ಕೆಟ್ಟ ಮಾತು ಆಡಿರುವುದಕ್ಕೆ ಸಾಕ್ಷಿಯಾದ ಆಡಿಯೊ, ವಿಡಿಯೊ ಇದೆ ಎಂದು ಹೇಳಿದ್ದಾರೆ. ಆದರೆ ನಾನು ಅದನ್ನು ನೋಡಿಲ್ಲ. ರವಿ ಹೇಳಿದ್ದು ಸುಳ್ಳಾದರೆ, ಅವರ ಬಂಧನವೇ ಕಾಯಿತು? ಸಾಮಾನ್ಯವಾಗಿ ಇಂತಹ ಆರೋಪಗಳ ಬಗ್ಗೆ ಹೆಣ್ಣುಮಕ್ಕಳು ಸುಳ್ಳು ದೂರು ಕೊಡುವುದಿಲ್ಲ. ಸಿ.ಟಿ.ಯವರು ಅವಾಚ್ಯ ಪದ ಏಕೆ ಬಳಸಿದರೆಂದು ನನಗೆ ತಿಳಿದಿಲ್ಲ. ಇದೊಂದು ಕ್ರಿಮಿನಲ್ ಅಪರಾಧ ಎಂದರು.



ಸಭಾಪತಿ ಬಸವರಾಜ ಹೊರಟ್ಟಿ ಯವರು, ಸಿ.ಟಿ.ರವಿಯವರು ಪ್ರಸ್ಟೇಷನ್ ಎಂಬ ಪದ ಬಳಸಿದ್ದಾರೆಂದು ತಿಳಿಸಿರುವ ಬಗ್ಗೆ ಮಾಧ್ಯಮದವರಿಗೆ ಪ್ರತಿಕ್ರಿಯೆ ನೀಡಿದ ಮುಖ್ಯಮಂತ್ರಿಗಳು, ಸಿ.ಟಿ.ರವಿಯವರು ತಾನು ‘ಪ್ರಸ್ಟೇಷನ್’ ಪದ ಬಳಸಿರುವುದಾಗಿ ತಿಳಿಸಿದ್ದಾರೆ. ಇದು after thought ಮಾತು. ಈಗ ಆ ರೀತಿ ಹೇಳುತ್ತಿದ್ದಾರೆ.

ಆದರೆ ಅವಾಚ್ಯ ಪದ ಬಳಸಿರುವುದು ನಿಜವಾಗಿರುವುದಕ್ಕೇ ಸಚಿವರು ದೂರು ನೀಡಿದ್ದಾರೆ ಎಂದರು.

ರವಿ ಆಡಿದ ಕೆಟ್ಟ ಮಾತನ್ನು ಕೇಳಿರುವುದಾಗಿ ಇತರ ಸದಸ್ಯರೂ ಹೇಳಿದ್ದಾರೆ. ಸಭಾಪತಿಯವರು ಪೀಠದಿಂದ ಹೊರನಡೆದ ನಂತರ ನಡೆದಿರುವ ಘಟನೆ ಬಗ್ಗೆ ಆಡಿಯೋ ಮತ್ತು ವಿಡಿಯೋ ಇದೆ ಎಂದೂ ಹಲವರು ಹೇಳುತ್ತಿದ್ದು, ಪದಬಳಕೆಯಾಗಿರುವುದು ಸತ್ಯ ಎಂದರು.

ಕಾನೂನಿನ ಕ್ರಮ ಜರುಗಿಸಲೇ ಬೇಕಾಗುತ್ತದೆ

ಸಿಟಿ ರವಿಯವರು ತನಗೆ ಜೀವಬೆದರಿಕೆಯಿದ್ದು, ಅದಕ್ಕೆ ಸರ್ಕಾರವೇ ಹೊಣೆ ಎಂದು ಹೇಳಿರುವ ಬಗ್ಗೆ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಸಿಎಂ, ಎಫ್.ಐ.ಆರ್ ದಾಖಲಾದ ಮೇಲೆ ಪೊಲೀಸರು ತನಿಖೆ ನಡೆಸಲೇಬೇಕಾಗುತ್ತದೆ. ಕಾನೂನಿನ ಕ್ರಮ ಮಾಡಲೇಬೇಕಾಗುತ್ತದೆ. ಸಿ.ಟಿ.ರವಿ ವಿರುದ್ಧ ಆಕ್ರೋಶಗೊಂಡಿದ್ದ ಜನರು ಬೆಳಗಾವಿಯಲ್ಲಿದ್ದ ಕಾರಣದಿಂದ ಸಿ.ಟಿ.ರವಿಯವರನ್ನು ರಕ್ಷಿಸಲು ಖಾನಾಪುರಕ್ಕೆ ಅವರನ್ನು ಕರೆತರಲಾಗಿತ್ತು ಎಂದರು.

## ಸಿ.ಟಿ.ರವಿಯವರನ್ನು ಹತ್ತಿಕ್ಕಲು ಸುಳ್ಳು ಆರೋಪ: ಬಿಜೆಪಿ ಆಕ್ರೋಶ

ತುಮಕೂರು: ಸುವರ್ಣಸೌಧದಲ್ಲಿ ಮಾಜಿ ಸಚಿವ, ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಮೇಲೆ ಗೂಂಡಾ ವರ್ತನೆ, ಕೊಲೆ ಬೆದರಿಕೆ ಹಾಕಿ, ಅವರ ವಿರುದ್ಧ ಸುಳ್ಳು ಮೊಕದ್ದಮೆ ದಾಖಲಿಸಿರುವ ಸರ್ಕಾರದ ಕ್ರಮ ಖಂಡಿಸಿ ಜಿಲ್ಲಾ ಬಿಜೆಪಿ ಮುಖಂಡರು ಶುಕ್ರವಾರ ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.



ರಾಜ್ಯದಲ್ಲಿ ಅಶಾಂತಿ, ಅರಾಜಕತೆ, ಅಭದ್ರತೆ ಸೃಷ್ಟಿಸಿ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಹಾಳು ಮಾಡುತ್ತಿರುವ ಕಾಂಗ್ರೆಸ್ ಸರ್ಕಾರವನ್ನು ವಜಾ ಮಾಡಬೇಕು ಎಂದು ಒತ್ತಾಯಿಸಿ ಜಿಲ್ಲಾಧಿಕಾರಿಗಳ ಮೂಲಕ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಎಚ್.ಎಸ್.ರವಿಶಂಕರ್ ಹೆಬ್ಬಾಕ ಮಾತನಾಡಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಇಷ್ಟು ದಿನದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯಗಳನ್ನು ಮಾಡದೆ, ಜನರನ್ನು ವಂಚಿಸುತ್ತಾ ಬಂದಿದೆ. ತನ್ನ ಆಡಳಿತ ಹುಳುಕನ್ನು ಜನ ಪ್ರಶ್ನೆ ಮಾಡಬಾರದು ಎಂದು ವಿವಾದಗಳನ್ನು ಸೃಷ್ಟಿಮಾಡಿಕೊಂಡು ಜನರ ಗಮನವನ್ನು ಬೇರೆಡೆಗೆ ಸೆಳೆಯುವ ತಂತ್ರವನ್ನು ಸರ್ಕಾರ ಮಾಡುತ್ತಿದೆ ಎಂದು ದೂರಿದರು.

ವಿಧಾನಸೌಧದ ಬಳಿ ಪಾಕಿಸ್ತಾನ ಜಿಂದಾಬಾದ್ ಎಂದು ಘೋಷಣೆ ಕೂಗಿದವನ ವಿರುದ್ಧ ಕ್ರಮ ತೆಗೆದುಕೊಳ್ಳದೆ ಎಫ್‌ಎಸ್‌ಎಲ್ ವರದಿ ಪರಿಶೀಲಿಸುತ್ತೇವೆ, ಪರಿಶೀಲನೆ ಮಾಡುತ್ತೇವೆ ಎಂದು ಹೇಳಿಕೊಂಡ ಕಾಂಗ್ರೆಸ್ ಸರ್ಕಾರ ಆತನ ವಿರುದ್ಧ ಈವರೆಗೂ ಕ್ರಮ ತೆಗೆದುಕೊಂಡಿಲ್ಲ. ಆದರೆ, ಸರ್ಕಾರದ ಲೋಪದೋಷಗಳನ್ನು ಪ್ರಶ್ನಿಸಲು ಮುಂದಾದ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿಯವರನ್ನು ಹತ್ತಿಕ್ಕಲು ಸುಳ್ಳು ಆರೋಪದ ವಿವಾದ ಸೃಷ್ಟಿಸಲಾಗಿದೆ. ಅವರ ಮೇಲೆ ಹಲ್ಲೆ ಮಾಡಿ, ಕೊಲೆ ಬೆರದಿಕೆ ಹಾಕಲಾಗಿದೆ. ಆದರೆ ಸಿ.ಟಿ.ರವಿಯವರು ಅಭಿಪ್ರಾಯ ಹೇಳಲೂ ಅವಕಾಶ ನೀಡಿದೆ ಅವರನ್ನು ಪೊಲೀಸರು ವಶಕ್ಕೆ ಪಡೆದು ಭಯೋತ್ಪಾದಕರ ರೀತಿ ನಡೆಸಿಕೊಂಡಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ವೇಳೆ ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷ ಎಸ್.ಶಿವಪ್ರಸಾದ್, ಜಿಲ್ಲಾ ಕಾರ್ಯದರ್ಶಿ ಹೆಚ್. ಎಂ.ರವೀಶಯ್ಯ, ಉಪಾಧ್ಯಕ್ಷ ಭೈರಪ್ಪ, ರೈತ ಮೋರ್ಚಾ ಜಿಲ್ಲಾಧ್ಯಕ್ಷ ಸಿದ್ದರಾಮಣ್ಣ, ಎಸ್.ಸಿ.ಮೋರ್ಚಾ ಜಿಲ್ಲಾಧ್ಯಕ್ಷ ಆಂಜನಪ್ಪ, ಜಿಲ್ಲಾ ಒಬಿಸಿ ಮೋರ್ಚಾ ಅಧ್ಯಕ್ಷ ಕೆ.ವೇದಮೂರ್ತಿ, ಜಿಲ್ಲಾ ಯುವ ಮೋರ್ಚಾ ಅಧ್ಯಕ್ಷ ಚೇತನ್, ನಗರ ಅಧ್ಯಕ್ಷ ಟಿ.ಹೆಚ್. ಹನುಮಂತರಾಜು, ಮುಖಂಡರಾದಬನಶಂಕರಿಬಾಬು, ಗಣೇಶ್‌ಪ್ರಸಾದ್, ಕೆ.ಪಿ.ಮಹೇಶ್, ಧನುಷ್, ಮಲ್ಲಿಕಾರ್ಜುನ್, ಮಂಜುನಾಥ್, ಮಹೇಶ್‌ಬಾಬು, ಜಗದೀಶ್, ತಿಪ್ಪೇಸ್ವಾಮಿ, ಬಂಬೂ ಮೋಹನ್, ಅಕ್ಷಯ್ ಚೌಧರಿ, ವಿಜಯಕುಮಾರ್, ನಿಸರ್ಗ ರಮೇಶ್, ಶಬ್ಬೀರ್ ಅಹ್ಮದ್, ರಾಮಚಂದ್ರರಾವ್, ವೆಂಕಟೇಶಾಚಾರ್, ಜಯಶ್ರೀ ಸುರೇಶ್, ಗಾಯತ್ರಿ ಮಂಜುನಾಥ್, ವಸಂತ ಭಾಗವಹಿಸಿದ್ದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy